ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 169
19–12–2025 ಶುಕ್ರವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 169

## 2ನೇ ಬಾರಿಗೆ ಮಹೇಶ್ ಶೆಟ್ಟಿ ತಿಮರೋಡಿ ಮತ್ತೆ ಗಡಿಪಾರು



**ಬೆಳ್ತಂಗಡಿ:** ಧರ್ಮಸ್ಥಳ ವಿರುದ್ಧ ಹೋರಾಟ ನಡೆಸುತ್ತಿರುವ ಮಹೇಶ್ ಶೆಟ್ಟಿ ತಿಮರೋಡಿಗೆ ಎರಡನೇ ಬಾರಿಗೆ ಗಡಿಪಾರು ಮಾಡಿ ಪುತ್ತೂರು ಎ.ಸಿ ಆದೇಶ ಹೊರಡಿಸಿದ್ದಾರೆ.

ಪುತ್ತೂರು ವಿಭಾಗಾಧಿಕಾರಿ ಸ್ಟೆಲ್ಲಾ ವರ್ಗೀಸ್ ತನ್ನ ಹಿಂದಿನ ಆದೇಶವನ್ನು ಮಾರ್ಪಡಿಸಿ ಮತ್ತೆ ಜಾರಿಗೊಳಿಸಿದ್ದಾರೆ. ಈ ಹಿಂದಿನ ಆದೇಶದಂತೆ, ರಾಯಚೂರು ಜಿಲ್ಲೆಯ ಮಾನ್ವಿ ತಾಲೂಕಿಗೆ ಗಡೀಪಾರು ಮಾಡಿ ಆದೇಶ ಮಾಡಿದ್ದಾರೆ.ಈ ಹಿಂದಿನ ಆದೇಶದಲ್ಲಿ ಕಾನೂನಾತ್ಮಕ ತೊಂದರೆ ಇದೆ, ಕಾನೂನು ಪಾಲನೆಯಾಗಿಲ್ಲ ಎಂಬ ಕೊರತೆ ಇದ್ದುದನ್ನು ಸರಿಪಡಿಸಿ ಸ್ಟೆಲ್ಲಾ ವರ್ಗೀಸ್ ಮತ್ತೊಮ್ಮೆ ಆದೇಶ ಮಾಡಿದ್ದಾರೆ.

ಎಸಿ ಆದೇಶ ಪ್ರತಿ ಹಿಡಿದು ಮಹೇಶ್ ಶೆಟ್ಟಿಯವರ ಉಜಿರೆ ಬಳಿಯ ತಿಮರೋಡಿ ಮನೆಗೆ ಬೆಳ್ತಂಗಡಿ ಪೊಲೀಸರು ಇಂದು ಬೆಳಗ್ಗೆ ತೆರಳಿದ್ದಾರೆ. ಆದರೆ, ವಿಷಯ ತಿಳಿದ ಮಹೇಶ್ ಶೆಟ್ಟಿ ಪೊಲೀಸರು ಮನೆ ತಲುಪುವ ಮೊದಲೇ ಅಲ್ಲಿಂದ ನಾಪತ್ತೆಯಾಗಿದ್ದಾರೆ ಎನ್ನಲಾಗಿದ್ದು, ಬಳಿಕ ಮನೆಯಲ್ಲಿ ಶೋಧ ನಡೆಸಿ, ನೋಟಿಸ್ ಅಂಟಿಸಿ ಪೊಲೀಸರು ವಾಪಸಾಗಿದ್ದಾರೆ.

ಇತ್ತೀಚೆಗೆ ಕಾನೂನಾತ್ಮಕ ತೊಂದರೆ ನೆಪದಲ್ಲಿ ಪುತ್ತೂರು ವಿಭಾಗಾಧಿಕಾರಿ ಹೊರಡಿಸಿದ್ದ ಗಡೀಪಾರು ಆದೇಶಕ್ಕೆ ಹೈಕೋರ್ಟ್ ತಡೆ ನೀಡಿತ್ತು.

ಕಾನೂನು ಪ್ರಕಾರ ಹೊಸ ಪ್ರಕ್ರಿಯೆ ನಡೆಸಿ ಆದೇಶ ಮಾಡಲು ಹೈಕೋರ್ಟ್ ಸೂಚಿಸಿತ್ತು. ಸೆಕ್ಷನ್ ಸರಿಪಡಿಸಿ ಹೊಸ ಆದೇಶ ನೀಡುವಂತೆ ಪುತ್ತೂರು ಎಸಿಗೆ ಸೂಚನೆ ನೀಡಿತ್ತು.

## ಗದ್ದಲದ ನಡುವೆಯೇ ವಿಧಾನಸಭೆಯಲ್ಲಿ ದ್ವೇಷ ಭಾಷಣ ಮಸೂದೆ ಅಂಗೀಕಾರ

**ಬೆಳಗಾವಿ:** ರಾಜ್ಯದಲ್ಲಿ ದ್ವೇಷಭಾಷಣಗಳಿಗೆ ಕಡಿವಾಣ ಹಾಕಲು ರಾಜ್ಯ ಸರ್ಕಾರ ಗುರುವಾರ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ವಿಧೇಯಕ–2025 ಅನ್ನು ವಿಧಾನಸಭೆಯಲ್ಲಿ ಅಂಗೀಕರಿಸಿದೆ.

ಕಳೆದ ಬುಧವಾರ ಗೃಹ ಸಚಿವ ಡಾ. ಜಿ ಪರಮೇಶ್ವರ ಅವರು, ದ್ವೇಷ ಭಾಷಣ ಪ್ರತಿಬಂಧಕ ಮಸೂದೆಯನ್ನು ವಿಧಾನಸಭೆಯಲ್ಲಿ ಮಂಡಿಸಿದ್ದರು. ಚರ್ಚೆಯ ಬಳಿಕ ವಿರೋಧ ಪಕ್ಷಗಳ ತೀವ್ರ ವಿರೋಧದ ನಡುವೆಯೇ ಇಂದು ಮಸೂದೆಯನ್ನು ಅಂಗೀಕರಿಸಲಾಗಿದೆ.

ದ್ವೇಷ ಭಾಷಣ ತಡೆಯುವ ದೇಶದ ಮೊದಲ ಕಾನೂನು ಇದಾಗಿದ್ದು, ಈ ಮಸೂದೆಯು ಒಂದು ಲಕ್ಷ ರೂ.ಗಳವರೆಗೆ ದಂಡ ಮತ್ತು ಗರಿಷ್ಠ 10 ವರ್ಷಗಳವರೆಗೆ



ಜೈಲು ಶಿಕ್ಷೆಗೆ ಅವಕಾಶ ನೀಡುತ್ತದೆ. ಈ ಮಸೂದೆಯನ್ನು ಡಿಸೆಂಬರ್ 4 ರಂದು ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಅಂಗೀಕರಿಸಲಾಗಿತ್ತು.

ಈ ಮಸೂದೆ ಅಂಗೀಕಾರಗೊಳ್ಳುತ್ತಿದ್ದಂತೆ ಸಚಿವ ಭೈರತಿ ಸುರೇಶ್ ಮತ್ತು ಬಿಜೆಪಿ ಶಾಸಕ ಚನ್ನಬಸಪ್ಪ ನಡುವೆ ಏಕವಚನದಲ್ಲಿ ವಾಕ್ಸಮರ ನಡೆಯಿತು. ಭೈರತಿ ಸುರೇಶ್ ಅವರು, ದ್ವೇಷ ಭಾಷಣ ಮತ್ತು ದ್ವೇಷ ಅಪರಾಧದಿಂದಾಗಿ ಕರಾವಳಿ ಕರ್ನಾಟಕ "ಹೊತ್ತಿ ಉರಿಯುತ್ತಿದೆ". ಅಲ್ಲಿ ಬೆಂಕಿ ಹಚ್ಚಿದ್ದೀರಿ. ಈಗ ಇಲ್ಲಿಯೂ ಬೆಂಕಿ ಹಚ್ಚುತ್ತಿದ್ದೀರಿ ಎಂದರು. ಇದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಬಿಜೆಪಿ ಶಾಸಕರು ಸದನದ ಬಾವಿಗೆ ಇಳಿದು ಪ್ರತಿಭಟನೆ ನಡೆಸಿದರು ಮತ್ತು ಸಚಿವರು ಕ್ಷಮೆ ಕೇಳಬೇಕು ಎಂದು ಒತ್ತಾಯಿಸಿದರು.

ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು ಮಸೂದೆ ಅಂಗೀಕಾರವಾಗುತ್ತಿದ್ದಂತೆ, ಬಿಲ್ ಪ್ರತಿಯನ್ನು ಹರಿದು ಬಿಸಾಡಿ ಆಕ್ರೋಶ ವ್ಯಕ್ತಪಡಿಸಿದರು. ಗದ್ದಲ ತೀವ್ರಗೊಂಡ ಹಿನ್ನೆಲೆಯಲ್ಲಿ ಸ್ಪೀಕರ್ ಯುಟಿ ಖಾದರ್ ಅವರು ಸದನವನ್ನು ಮುಂದೂಡಿದರು.

### ಏನಿದು ದ್ವೇಷ ಭಾಷಣ ಮಸೂದೆ?

ದ್ವೇಷ ಭಾಷಣ ಪ್ರಸರಣೆ, ಪ್ರಕಟಣೆ, ಪ್ರಚಾರ ತಡೆಯುವ ವಿಧೇಯಕ ಇದಾಗಿದ್ದು, ಯಾವುದೇ ಪೂರ್ವಾಗ್ರಹ ಪೀಡಿತ ಹಿತಾಸಕ್ತಿಯನ್ನು ಪೂರೈಸಲು, ಜೀವಂತ ಅಥವಾ ಸತ್ತ ವ್ಯಕ್ತಿ, ಅಥವಾ ವ್ಯಕ್ತಿಗಳ ಗುಂಪಿನ ವಿರುದ್ಧ ದ್ವೇಷ ಅಥವಾ ದ್ವೇಷದ ಭಾವನೆಗಳನ್ನು ಉಂಟುಮಾಡುವ ಉದ್ದೇಶದಿಂದ ಮಾಡಿದ ಭಾಷಣ, ಪ್ರಕಟಿಸಿದ ಅಥವಾ ಪ್ರಸಾರ ಮಾಡಿದ ಯಾವುದೇ ಅಭಿವ್ಯಕ್ತಿಯನ್ನು ದ್ವೇಷ ಭಾಷಣ ಎಂದು ವರ್ಗೀಕರಿಸಲಾಗಿದೆ.

ಧರ್ಮ, ಜನಾಂಗ, ಜಾತಿ ಅಥವಾ ಸಮುದಾಯ, ಲಿಂಗ, ಲೈಂಗಿಕ ದೃಷ್ಟಿಕೋನ, ಜನ್ಮಸ್ಥಳ, ವಾಸಸ್ಥಳ, ಭಾಷೆ, ಅಂಗವೈಕಲ್ಯ ಅಥವಾ ಬುಡಕಟ್ಟು ಆಧಾರದ ಮೇಲೆ ಯಾವುದೇ ಪಕ್ಷಪಾತವನ್ನು ದ್ವೇಷ ಭಾಷಣ ಎಂದು ವರ್ಗೀಕರಿಸಲಾಗಿದೆ.

ಮೊದಲ ಬಾರಿಗೆ ದ್ವೇಷ ಭಾಷಣ, ದ್ವೇಷ ಅಪರಾಧಗಳಿಗೆ ಕನಿಷ್ಠ 1 ವರ್ಷ ಮತ್ತು ಗರಿಷ್ಠ 7 ವರ್ಷದವರೆಗೆ ಜೈಲು ಹಾಗೂ 50 ಸಾವಿರ ರೂ ದಂಡ ವಿಧಿಸಲು ಅವಕಾಶ ನೀಡಲಾಗಿದೆ.

## ಬಿಜೆಪಿ ಕಚೇರಿಗೆ ಕಾಂಗ್ರೆಸ್ ಕಾರ್ಯಕರ್ತರ ಮುತ್ತಿಗೆ ಯತ್ನ: ಬಂಧನ

**ಚಿಕ್ಕಮಗಳೂರು:** ನ್ಯಾಶನಲ್ ಹೆರಾಲ್ಡ್ ಪ್ರಕರಣದಲ್ಲಿ ಕಾಂಗ್ರೆಸ್ ವರಿಷ್ಠರಾದ ಸೋನಿಯಾ ಮತ್ತು ರಾಹುಲ್‌ಗಾಂಧಿ ವಿರುದ್ಧ ಬಿಜೆಪಿ ನಾಯಕರು ಪಿತೂರಿ ನಡೆಸುತ್ತಿದ್ದಾರೆ ಎಂದು ಆರೋಪಿಸಿ ಬಿಜೆಪಿ ಕಚೇರಿಗೆ ಮುತ್ತಿಗೆ ಯತ್ನ ನಡೆಸಿದ ಕಾಂಗ್ರೆಸ್ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿದರು.

ಜಿಲ್ಲಾ ಮತ್ತು ಬ್ಲಾಕ್ ಕಾಂಗ್ರೆಸ್ ಘಟಕದಿಂದ ಆಯೋಜಿಸಿದ್ದ ಬಿಜೆಪಿ ಕಚೇರಿ ಮುತ್ತಿಗೆ ಕಾರ್ಯಕ್ರಮ ಕಾಂಗ್ರೆಸ್ ಕಚೇರಿಯಿಂದಲೇ ಆರಂಭವಾಯಿತು. ಹಲವಾರು ಕಾರ್ಯಕರ್ತರು ಪಕ್ಷದ ಬಾವುಟ ಹಿಡಿದು ಬಿಜೆಪಿ ನಾಯಕರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಅಲ್ಲದೆ ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲು ಹೊರಟರು. ಮಾರ್ಗಮಧ್ಯದಲ್ಲೇ ಬ್ಯಾರಿಕೇಡ್ ಇಟ್ಟು ಕಾರ್ಯಕರ್ತರನ್ನು ತಡೆದ ಪೊಲೀಸರು ಬಿಜೆಪಿ ಕಚೇರಿಯತ್ತ ತೆರಳದಂತೆ ಕಟ್ಟೆಚ್ಚರ ವಹಿಸಿದರು. ಈ ಮಧ್ಯೆ ಪೊಲೀಸರು ಮತ್ತು ಕಾಂಗ್ರೆಸ್ ಕಾರ್ಯಕರ್ತರ ನಡುವೆ ಮಾತಿನ ಚಕಮಕಿ, ತಳ್ಳಾಟ ನಡೆಯಿತು. ಅಂತಿಮವಾಗಿ ಪ್ರತಿಭಟನಾನಿರತ ಕಾರ್ಯಕರ್ತರನ್ನು ಪೊಲೀಸರು ಬಂಧಿಸಿ ಕರೆದೊಯ್ದರು.

ಕಾಂಗ್ರೆಸ್ ಕಾರ್ಯಕರ್ತರು ತಮ್ಮ ಪಕ್ಷದ ಕಚೇರಿಗೆ ಮುತ್ತಿಗೆ ಹಾಕುತ್ತಾರೆ ಎಂಬುದನ್ನು ಅರಿತಿದ್ದ ಬಿಜೆಪಿ ಕಾರ್ಯಕರ್ತರು ಪಕ್ಷದ ಬಾವುಟದೊಂದಿಗೆ ಕಾಂಗ್ರೆಸ್ ವಿರುದ್ಧ ಘೋಷಣೆ ಕೂಗಿ ಪ್ರತಿರೋಧ ವ್ಯಕ್ತಪಡಿಸಿ ನಂತರ ಹಿಂದಿರುಗಿದರು.

ಬಿಜೆಪಿ ಕಚೇರಿ ಮುತ್ತಿಗೆಗೂ ಮುನ್ನ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಅಂಶುಮಂತ್ ಕಾರ್ಯಕರ್ತರನ್ನುದ್ದೇಶಿಸಿ




ಮಾತನಾಡಿ, ಬಿಜೆಪಿ ಕಳೆದ 12 ವರ್ಷದಲ್ಲಿ ದಬ್ಬಾಳಿಕೆ ರಾಜಕಾರಣ ನಡೆಸುತ್ತಿದೆ. ಇಡಿ, ಸಿಬಿಐ ನಂತಹ ಸ್ವಾಯುತ್ತ ಸಂಸ್ಥೆಗಳನ್ನು ದುರ್ಬಳಕೆ ಮಾಡಿಕೊಂಡು ವಿರೋಧ ಪಕ್ಷದ ದನಿಯನ್ನು ಕುಗ್ಗಿಸುವ ಕೆಲಸಕ್ಕೆ ಮುಂದಾಗಿರುವುದನ್ನು ಕಾಂಗ್ರೆಸ್ ಖಂಡಿಸುತ್ತದೆ ಎಂದರು.

ನ್ಯಾಶನಲ್ ಹೆರಾಲ್ಡ್ ಪ್ರಕರಣದಲ್ಲಿ ಸೋನಿಯಾ ಮತ್ತು ರಾಹುಲ್ ವಿರುದ್ಧ ಹಾಕಿದ್ದ ಕೇಸನ್ನು ನ್ಯಾಯಾಲಯ ವಜಾಗೊಳಿಸುವ ಮೂಲಕ ಬಿಜೆಪಿಗೆ ಛೀಮಾರಿ ಹಾಕಿದೆ ಎಂದು ಆರೋಪಿಸಿದರು.

ಕಾಂಗ್ರೆಸ್ ರಾಷ್ಟ್ರೀಯ ಕಾರ್ಯದರ್ಶಿ ಬಿ. ಎಂ.ಸಂದೀಪ್ ಮಾತನಾಡಿ, ಸಂವಿಧಾನ ಮತ್ತು ಪ್ರಜಾಪ್ರಭುತ್ವ ವಿರೋಧಿ ನಡೆ ಬಿಜೆಪಿಯಿಂದ ನಡೆಯುತ್ತಿದೆ. ಕಾಂಗ್ರೆಸ್ ವಿರುದ್ಧ ಆಧಾರವಿಲ್ಲದ ಆರೋಪವನ್ನು 2014 ರಿಂದೀಚೆಗೆ ಬಿಜೆಪಿ ಮಾಡುತ್ತಿದೆ. ಸ್ವಾತಂತ್ರ್ಯ ಚಳವಳಿ ಗಟ್ಟಿಗೊಳಿಸಲು 1919 ರಲ್ಲಿ ಯಂಗ್ ಇಂಡಿಯಾ ಸಂಸ್ಥೆಯನ್ನು ಗಾಂಧೀಜಿ ಹುಟ್ಟುಹಾಕಿದರು ಎಂದು ಹೇಳಿದರು.

ಕಾಂಗ್ರೆಸ್ ಮುಖಂಡರಾದ ಡಾ. ಡಿ.ಎಲ್. ವಿಜಯ್‌ಕುಮಾರ್, ರೇಖಾ ಹುಲಿಯಪ್ಪಗೌಡ, ಸಿಡಿಎ ಅಧ್ಯಕ್ಷ ನಯಾಜ್ ಅಹ್ಮದ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಪಿ.ಮಂಜೇಗೌಡ, ಹಿರೇಮಗಳೂರು ರಾಮಚಂದ್ರ, ಮಲ್ಲೇಶ ಎನ್.ಡಿ. ಚಂದ್ರಪ್ಪ, ಎಂ.ಸಿ ಶಿವಾನಂದಸ್ವಾಮಿ, ಹುಣಸೇಮಕ್ಕಿ ಲಕ್ಷ್ಮಣ, ಪ್ರಕಾಶ್ ರೈ, ನಗರಸಭೆ ಸದಸ್ಯರಾದ ಲಕ್ಷ್ಮಣ, ಶಾದಬ್ ಅಲಂಖಾನ್, ಪ್ರಸಾದ್ ಅಮೀನ್, ನಗರಾಧ್ಯಕ್ಷ ತನೂಜ್ ನಾಯ್ದು, ಕೆ.ಭರತ್ ಮತ್ತಿತರರಿದ್ದರು.

## ಪತ್ರಬರಹಗಾರರ ಅನಿರ್ದಿಷ್ಟಾವಧಿ ಮುಷ್ಕರ ಅಂತ್ಯ

**ದಾವಣಗೆರೆ:** ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಿಗೆ ಪಡೆದ (ದಸ್ತು) ಪತ್ರ ಬರಹಗಾರರ ಒಕ್ಕೂಟದಿಂದ ಹಮ್ಮಿಕೊಂಡಿದ್ದ ಲೇಖನಿ ಸ್ಥಗಿತ ಅನಿರ್ದಿಷ್ಟಾವಧಿ ಮುಷ್ಕರವನ್ನು ಈಚೆಗೆ ಬೆಳಗಾವಿಯ ಸುವರ್ಣ ಸೌಧ ಚಳಿಗಾಲದ ಅಧಿವೇಶನದಲ್ಲಿ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸುವ ಮೂಲಕ ಮುಷ್ಕರ ಅಂತ್ಯಗೊಳಿಸಲಾಯಿತು.

ಮನವಿ ಸ್ವೀಕರಿಸಿದ ಮಂತ್ರಿಗಳು ಈ ಬಗ್ಗೆ ಸದನದಲ್ಲಿ ಚರ್ಚಿಸಿ ಸೂಕ್ತ ಕ್ರಮ ಜರುಗಿಸುತ್ತೇವೆಂದು ಭರವಸೆ ನೀಡಿರುವ ಕಾರಣ ಮುಷ್ಕರ ಕೈಬಿಟ್ಟಿರುವುದಾಗಿ ಒಕ್ಕೂಟದ ಅಧ್ಯಕ್ಷ ಡಿ.ಕೆ. ಸಂಗಮೇಶ್ ಎಲಿಗಾರ್ ಮತ್ತು ಪ್ರಧಾನ ಕಾರ್ಯದರ್ಶಿ ಧರ್ಮರಾಜ್ ವಿ ಏಕಬೋಟೆ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಹೆತ್ತವರ ಕೊಂದು ಗರಗಸದಿಂದ ಶವಗಳನ್ನು ತುಂಡರಿಸಿ ನದಿಗೆಸೆದ ಪುತ್ರ



**ಜೌನ್‌ಪುರ,ಡಿ.18**– ಪೋಷಕರ ಹಠಮಾರಿತನದಿಂದ ಬೇಸತ್ತ ವಿದ್ಯಾವಂತ ಮಗನೊಬ್ಬ ತಂದೆ–ತಾಯಿಯನ್ನು ಭೀಕರವಾಗಿ ಕೊಲೆ ಮಾಡಿ ಶವಗಳನ್ನು ಗರಗಸದಿಂದ ತುಂಡರಿಸಿ ನದಿಗೆ ಎಸೆದಿರುವ ಹೃದಯ ವಿದ್ರಾವಕ ಘಟನೆ ಉತ್ತರ ಪ್ರದೇಶದಲ್ಲಿ ನಡೆದಿದೆ.ಜನ ನೀಡಿದವರನ್ನೇ ಕೊಲೆ ಮಾಡಿದ ಪಾತಕಿ ಪುತ್ರನನ್ನು ಎಂಜಿನಿಯರ್ ಆಗಿರುವ ಅಂಬೇಶ್ ಎಂದು ಗುರುತಿಸಲಾಗಿದೆ.

ಈತ ತನ್ನ ತಂದೆ–ತಾಯಿಯಾದ ಶ್ಯಾಮ್ ಬಹದ್ದೂರ್ ಮತ್ತು ಬಬಿತಾ ಅವರನು ಕೊಲೆ ಮಾಡಿ, ಶವಗಳನ್ನು ಗರಗಸದಿಂದ ತುಂಡರಿಸಿ ದೇಹದ ಭಾಗಗಳನ್ನು ನದಿಗೆ ಎಸೆದಿದ್ದ ಎಂದು ಪೊಲೀಸರು ತಿಳಿಸಿದ್ದಾರೆ.

ಅಂಬೇಶ್ ಮುಸ್ಲಿಂ ಯುವತಿಯನ್ನು ಪ್ರೀತಿಸಿ ವಿವಾಹವಾಗಿದ್ದ ಆದರೆ, ಪೋಷಕರು ಅವರ ವಿವಾಹಕ್ಕೆ ಮಾನ್ಯತೆ ನೀಡಿರಲಿಲ್ಲ. ಮಾತ್ರವಲ್ಲ ಮನೆಗೆ ಸೇರಿಸುವುದಿಲ್ಲ ಎಂದು ಹಠ ಹಿಡಿದಿದ್ದರು. ಅಂಬೇಶ್ ಮತ್ತು ಅವನ ಹೆಂಡತಿ ಅಂತಿಮವಾಗಿ ಬೇರೆಯಾಗಲು ನಿರ್ಧರಿಸಿದ್ದರು ಮತ್ತು ಜೀವನಾಂಶವನ್ನು ಪಾವತಿಸಲು ಅವನಿಗೆ ಹಣದ ಅಗತ್ಯವಿತ್ತು. ಅವನು ತನ್ನ ತಂದೆಯನ್ನು ಕೇಳಿದನು, ಆದರೆ ಅವರು ನಿರಾಕರಿಸಿದ್ದರು ಎಂದು ಹೇಳಲಾಗಿದೆ. ಇದು ಅವರ ಕೊನೆಯ ಜಗಳಕ್ಕೆ ಕಾರಣವಾಯಿತು, ಅದು ಎರಡು ಸಾವುಗಳಲ್ಲಿ ಕೊನೆಗೊಂಡಿತು.ಅಂಬೇಶ್ ಅವರ ಸಹೋದರಿ ವಂದನಾ, ಜೌನ್‌ಪುರದ ಜಫರಾಬಾದ್ ಪೊಲೀಸ್ ಠಾಣೆಯಲ್ಲಿ ನಮ ತಂದೆ–ತಾಯಿ ನಾಪತ್ತೆಯಾದ ಬಗ್ಗೆ ದೂರು ದಾಖಲಿಸಿದರು. ತನ್ನ ಹೆತ್ತವರು ಮತ್ತು ಸಹೋದರ ಕಾಣೆಯಾಗಿದ್ದಾರೆ ಎಂದು ವಂದನಾ ಹೇಳಿದ್ದಾರೆ. ಡಿಸೆಂಬರ್ 8 ರಂದು ಅಂಬೇಷ್ ತನಗೆ ಕರೆ ಮಾಡಿ, ಜಗಳವಾಡಿ ತಮ್ಮ ಹೆತ್ತವರು ಮನೆಯಿಂದ ಹೊರಟು ಹೋಗಿದ್ದರು, ಮತ್ತು ಅವರು ಅವರನ್ನು ಹುಡುಕಲು ಹೋಗುತ್ತಿದ್ದರು ಎಂದು ವಂದನಾ ಹೇಳಿದ್ದಾರೆ.

## 'ಸಾಮಾಜಿಕ ಬಹಿಷ್ಕಾರ'ಕ್ಕೆ ಮೂರು ವರ್ಷ ಜೈಲು ಶಿಕ್ಷೆ

### 1 ಲಕ್ಷ ರೂ. ದಂಡ, ಮಸೂದೆಗೆ ವಿಧಾನಸಭೆ ಅನುಮೋದನೆ

**ಬೆಳಗಾವಿ:** ಯಾವುದೇ ವ್ಯಕ್ತಿ, ಕುಟುಂಬ, ಕುಟುಂಬದ ಸದಸ್ಯರನ್ನು ಸಾಮಾಜಿಕವಾಗಿ ಬಹಿಷ್ಕರಿಸಿದರೆ 1 ಲಕ್ಷ ರೂಪಾಯಿವರೆಗೂ ದಂಡ ಹಾಗೂ ಮೂರು ವರ್ಷದವರೆಗೆ ಜೈಲು ಶಿಕ್ಷೆ ಅಥವಾ ಎರಡನ್ನೂ ವಿಧಿಸಲು ಹಾಗೂ ಸ್ವಯಂ ಪ್ರೇರಿತವಾಗಿ ದೂರು ದಾಖಲಿಸಿಕೊಳ್ಳಲು ಅವಕಾಶವಿರುವ ಮಸೂದೆಗೆ ವಿಧಾನಸಭೆ ಗುರುವಾರ ಸರ್ವಾನುಮತದಿಂದ ಅನುಮೋದನೆ ನೀಡಿತು.

ಸಮಾಜ ಕಲ್ಯಾಣ ಇಲಾಖೆ ಸಚಿವ ಡಾ. ಎಚ್. ಸಿ. ಮಹಾದೇವಪ್ಪ, ಕರ್ನಾಟಕ ಸಾಮಾಜಿಕ ಬಹಿಷ್ಕಾರ (ಪ್ರತಿಬಂಧ, ನಿಷೇಧ ಮತ್ತು ಪರಿಹಾರ)



ಮಸೂದೆಯನ್ನು ಚರ್ಚೆಗೆ ಮಂಡಿಸಿದರು.

ಬಳಿಕ ಮಾತನಾಡಿದ ಸಚಿವರು, ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷವಾದರೂ ಸಾಮಾಜಿಕವಾಗಿ ಬಹಿಷ್ಕಾರ ಹಾಕುವುದು ನಡೆದಿದೆ. ಇದು ಮಾನವ ಹಕ್ಕುಗಳ, ನಾಗರಿಕ ಹಕ್ಕುಗಳ ಉಲ್ಲಂಘನೆ, ಇದನ್ನು ನಿಷೇಧಿಸಲು ಐತಿಹಾಸಿಕ ಮಸೂದೆಯನ್ನು ರೂಪಿಸಲಾಗಿದೆ ಎಂದರು.

ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಾತನಾಡಿ, 21ನೇ ಶತಮಾನದಲ್ಲಿ ನಾವೆಲ್ಲರೂ ಒಂದೇ ಎಂದು ಭಾಷಣ ಮಾಡಿದರೂ ನಿರ್ಬಂಧ, ತಾರತಮ್ಯ ಮುಂದುವರಿದಿದೆ. ಹೋಟೆಲ್, ಕ್ಷೌರ ಸೇರಿದಂತೆ ಇತರ ಸೇವೆ ನಿರ್ಬಂಧಿಸುವುದು, ಬಹಿಷ್ಕಾರ ಹಾಕುವುದು ಅಕ್ಷಮ್ಯವಾಗಿದ್ದು, ಕಾಯ್ದೆ ಜಾರಿಯಾದಾಗ ಹಳ್ಳಿಗಳಲ್ಲಿ ಸಾಮಾಜಿಕ ಬಹಿಷ್ಕಾರ ನಿಷೇಧ, ದಂಡ ಹಾಗೂ ಶಿಕ್ಷೆ ಬಗ್ಗೆ ಅರಿವು ಮೂಡಿಸಬೇಕು ಎಂದು ಸಲಹೆ ನೀಡಿದರು.

ಬಿಜೆಪಿಯ ಶಾಸಕರಾದ ಎಸ್. ಸುರೇಶ್ ಕುಮಾರ್, ಆರಗ ಜ್ಞಾನೇಂದ್ರ, ಸಿಮೆಂಟ್ ಮಂಜು ಹಾಗೂ ಜೆಡಿಎಸ್‌ನ ನೇಮಿರಾಜ ನಾಯ್ಕ್ ಮತ್ತಿತರರು ಮಾತನಾಡಿದರು.

ಕಾಂಗ್ರೆಸ್‌ನ ಟಿ. ಬಿ. ಜಯಚಂದ್ರ ಮಾತನಾಡಿ, ಸಾಮಾಜಿಕ ಬಹಿಷ್ಕಾರಕ್ಕೆ ಸಂಬಂಧಿಸಿದಂತೆ ಪೊಲೀಸರು ಸ್ವಯಂ ಪ್ರೇರಿತರಾಗಿ ದೂರು ದಾಖಲಿಸಿಕೊಳ್ಳಲು ಅವಕಾಶ ಕಲ್ಪಿಸಿ ಮಸೂದೆಗೆ ತಿದ್ದುಪಡಿ ತರಬೇಕು ಎಂದು ಸಲಹೆಯನ್ನು ಅಳವಡಿಸಿಕೊಳ್ಳುವುದಾಗಿ ಮಹದೇವಪ್ಪ ಭರವಸೆ ನೀಡಿದರು. ಬಳಿಕ ಸದನ ಪಕ್ಷಾತೀತವಾಗಿ ಮಸೂದೆಗೆ ಅನುಮೋದನೆ ನೀಡಿತು.

## ಬೆಳಗಾವಿಯ ಸುವರ್ಣ ಸೌಧದಲ್ಲಿ ಇ–ಖಾತಾ ಲೋಕಾರ್ಪಣೆಗೊಳಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ

**ಬೆಳಗಾವಿ:** ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯ ಹಾಗೂ ಬೆಳಗಾವಿ ಮಹಾನಗರಪಾಲಿಕೆ ಸಂಯುಕ್ತಾಶ್ರಯದಲ್ಲಿ ಬೆಳಗಾವಿ ಸುವರ್ಣಸೌಧದಲ್ಲಿ ಇ–ಖಾತಾ ಲೋಕಾರ್ಪಣೆ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಸಭಾಧ್ಯಕ್ಷ ಬಸವರಾಜ ಹೊರಟ್ಟಿ, ವಿವಿಧ ಇಲಾಖೆಗಳ ಸಚಿವರು ಉಪಸ್ಥಿತರಿದ್ದರು.

ಬೆಳಗಾವಿ ಸುವರ್ಣ ವಿಧಾನ ಸೌಧದಲ್ಲಿ ಚಳಿಗಾಲದ ಅಧಿವೇಶನ ನಡೆಯುತ್ತಿದ್ದು, ಗುರುವಾರ (ಡಿಸೆಂಬರ್ 18) ಮುಖ್ಯಮಂತ್ರಿ ಸಿದ್ದರಾಮಯ್ಯ ಇ–ಖಾತಾ ಲೋಕಾರ್ಪಣೆಗೊಳಿಸಿದರು. ನಗರಾಭಿವೃದ್ಧಿ ಇಲಾಖೆ, ಪೌರಾಡಳಿತ ನಿರ್ದೇಶನಾಲಯ ಹಾಗೂ ಬೆಳಗಾವಿ ಮಹಾನಗರಪಾಲಿಕೆ



ಸಂಯುಕ್ತಾಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಸಭಾಧ್ಯಕ್ಷ ಬಸವರಾಜ ಹೊರಟ್ಟಿ, ಸಚಿವರಾದ ಬೈರತಿ ಸುರೇಶ್, ರಹೀಂಖಾನ್, ಎಂ.ಸಿ.ಸುಧಾಕರ್, ಕಾನೂನು ಸಲಹೆಗಾರರಾದ ಪೊನ್ನಣ್ಣ, ವಿಧಾನಪರಿಷತ್ ಮುಖ್ಯ ಸಚೇತಕರಾದ ಸಲೀಂಅಹಮದ್, ವಿಧಾನ ಪರಿಷತ್ ಸದಸ್ಯ ಐವಾನ್ ಡಿಸೋಜಾ, ಶಾಸಕರಾದ ಶ್ರೀನಿವಾಸ್ ಸೇರಿ ಹಲವು ಗಣ್ಯರು ಉಪಸ್ಥಿತರಿದ್ದರು.

ಇದೇ ವೇಳೆ ಪೌರ ಕಾರ್ಮಿಕರಿಗೆ ನೇಮಕಾತಿ ಆದೇಶ ಮತ್ತು ಮನೆಯ ಹಕ್ಕು ಪತ್ರಗಳ ವಿತರಣೆಯೂ ನಡೆಯಿತು.

ಕರ್ನಾಟಕ ಸರ್ಕಾರವು ಆಸ್ತಿ ಖರೀದಿ ಮತ್ತು ಮಾರಾಟದಲ್ಲಿ ಪಾರದರ್ಶಕತೆಯನ್ನು ಖಾತರಿಪಡಿಸಲು ಇ–ಖಾತಾ ವ್ಯವಸ್ಥೆಯನ್ನು ಜಾರಿಗೆ ತಂದಿದೆ.

ಈ ಯೋಜನೆಯ ಮುಖ್ಯ ಉದ್ದೇಶವು ಆಸ್ತಿ ತೆರಿಗೆ ವ್ಯಾಪ್ತಿಯಿಂದ ಹೊರಗುಳಿದಿರುವ ಆಸ್ತಿಗಳನ್ನು ಒಳಗೊಂಡಂತೆ, ಎಲ್ಲ ಆಸ್ತಿಗಳನ್ನು ಡಿಜಿಟಲ್ ದಾಖಲೆಯಲ್ಲಿ ಸೇರ್ಪಡೆಗೊಳಿಸುವುದು.

ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಸನ್ಮಾನಿಸಲಾಯಿತು.

## ಯಡಿಯೂರಪ್ಪ ಹೆಸರು ಹಾಳಾಗಲು ಪುತ್ರನೇ ಕಾರಣ

### ವಿಜಯೇಂದ್ರ ವಿರುದ್ಧ ಡಿಕೆಶಿ ಆರೋಪ

**ಬೆಳಗಾವಿ :** ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ಧ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಗುರುತರ ಆರೋಪವನ್ನು ಮಾಡಿದ್ದಾರೆ. ಅವರು ತಮ್ಮ ಇತಿಮಿತಿಯಲ್ಲಿ ಇದ್ದರೆ ಅವರಿಗೆ ಒಳ್ಳೆಯದು. ಇಲ್ಲದಿದ್ದರೆ, ಸದನದಲ್ಲಿ ಎಲ್ಲವನ್ನೂ ಬಿಚ್ಚಿಡ ಬೇಕಾಗುತ್ತದೆ ಎನ್ನುವ ಎಚ್ಚರಿಕೆಯನ್ನು ನೀಡಿದ್ದಾರೆ.

"ಕಲೆಕ್ಷನ್ ಕಿಂಗ್ ಎಂದು ಏನಾದರೂ ಇದ್ದರೆ ಅದು ವಿಜಯೇಂದ್ರ. ಅವರ ತಂದೆ ಹೆಸರು ಇಳಿಯಲು ವಿಜಯೇಂದ್ರ



ಕಾರಣ. ಇದನ್ನ ಮರೆಯಬಾರದು. ಬೆಳಗಾವಿಯ ಸರ್ಕಿಟ್ ಹೌಸ್ ಹಾಗೂ ಸುವರ್ಣ ವಿಧಾನಸೌಧದಲ್ಲಿ ಡಿಸಿಎಂ ಡಿಕೆ ಶಿವಕುಮಾರ್, ಮಾಧ್ಯಮಗಳ ಪ್ರಶ್ನೆಗಳಿಗೆ ಗುರುವಾರ (ಡಿ. 18) ಪ್ರತಿಕ್ರಿಯೆ ನೀಡಿದರು.

ರಾಜ್ಯದ ಖಜಾನೆ ಖಾಲಿ ಮಾಡಿ ಹೈಕಮಾಂಡ್ ಅನ್ನು ತೃಪ್ತಿಪಡಿಸಲಾಗುತ್ತಿದೆ, ರಾಜ್ಯದಲ್ಲಿ ಭ್ರಷ್ಟಾಚಾರ ಹೆಚ್ಚಾಗಿದೆ ಎನ್ನುವ ಆರೋಪವನ್ನು ವಿಜಯೇಂದ್ರ ಮಾಡಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ ಡಿಕೆಶಿ, ಯಾವ ಖಜಾನೆ ಖಾಲಿಯಾಗಿದೆ? ಕಲೆಕ್ಷನ್, ಅವರ ಅಕೌಂಟ್‌ಗಳು, ವಹಿವಾಟುಗಳನ್ನು ಬಿಚ್ಚಿಡಬೇಕೇ ಎಂದು ಸವಾಲು ಹಾಕಿದರು.

ಅವರು ವಿಧಾನಸಭೆಯಲ್ಲಿ ಮಾತನಾಡಿದರೆ ಏನೇನು ಮಾತನಾಡಬೇಕು ಎಂದು ನನಗೂ ಗೊತ್ತಿದೆ. ಪಕ್ಷದ ಅಧ್ಯಕ್ಷರಾಗಿ ಇತಿಮಿತಿಯಿಂದ ಮಾತನಾಡಲಿ. ಮೊದಲು ವಿಧಾನಸಭೆಗೆ ಬಂದು ಮಾತನಾಡಲು ಹೇಳಿ. ತಪ್ಪಿಸಿಕೊಂಡು ಹೋಗಿ ಎಲ್ಲೋ ಇರುವುದಲ್ಲ. ಇಲ್ಲಿ ಬಂದು ಮಾತನಾಡಲಿ. ವಿಜಯೇಂದ್ರ ಅವರಿಗೆ ಅನುಭವವಿಲ್ಲ. ಯಾವ ಖಜಾನೆ ಖಾಲಿಯಾಗಿದೆ ಎಂದು ಡಿಸಿಎಂ ಕುಟುಕಿದರು.

## ಧರ್ಮಸ್ಥಳ ಬುರುಡೆ ಕೇಸ್: ಮಾಸ್ಕ್‌ಮ್ಯಾನ್ ಚಿನ್ನಯ್ಯ ಶಿವಮೊಗ್ಗ ಜೈಲಿನಿಂದ ರಿಲೀಸ್

**ಶಿವಮೊಗ್ಗ:** ಧರ್ಮಸ್ಥಳ ಗ್ರಾಮದಲ್ಲಿ ಈ ಹಿಂದೆ ನಡೆದಿದೆ ಎನ್ನಲಾದ ಅಪರಾಧ ಕೃತ್ಯಗಳ ಮೃತದೇಹಗಳನ್ನು ಹೂತು ಹಾಕಲಾಗಿದೆ ಎಂದು ಆರೋಪಿಸಲಾದ ಪ್ರಕರಣದ ಸಾಕ್ಷಿ ದೂರುದಾರ ಚಿನ್ನಯ್ಯ ಅವರನ್ನು ಶಿವಮೊಗ್ಗ ಜೈಲಿನಿಂದ ಗುರುವಾರ ಬೆಳಿಗ್ಗೆ ಷರತ್ತುಬದ್ಧ ಜಾಮೀನಿನ ಮೇಲೆ ಬಿಡುಗಡೆಗೊಳಿಸಲಾಯಿತು.



ಆತನಿಗೆ ಮಂಗಳೂರಿನ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ನ.24ರಂದು ಷರತ್ತುಬದ್ಧ ಜಾಮೀನು ಮಂಜೂರು ಮಾಡಿತ್ತು. ಜಾಮೀನು ಪಡೆಯಲು 1 ಲಕ್ಷ ಭದ್ರತಾ ಠೇವಣಿ ನೀಡಬೇಕು ಎಂದು ಷರತ್ತು ವಿಧಿಸಿತ್ತು.

## ಮಲ್ಲಿಕಾರ್ಜುನ ಖರ್ಗೆಗೆ 'ಭಾರತ ರತ್ನ' ಕೊಡಿ: ಪರಿಷತ್‌ನಲ್ಲಿ ಕಾಂಗ್ರೆಸ್ ಸದಸ್ಯ ಒತ್ತಾಯ



**ಬೆಳಗಾವಿ:** ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಉತ್ತರ ಕರ್ನಾಟಕದ ಅಭಿವೃದ್ಧಿಗೆ ಕಾರಣರಾದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಗೆ ಭಾರತ ರತ್ನ ಪ್ರಶಸ್ತಿ ನೀಡಬೇಕೆಂದು ಕಾಂಗ್ರೆಸ್ ಸದಸ್ಯ ತಿಪ್ಪಣ್ಣಪ್ಪ ಕಮಕನೂರು ಮನವಿ ಮಾಡಿದ್ದಾರೆ. ವಿಧಾನ ಪರಿಷತ್‌ನಲ್ಲಿ ಮಾತನಾಡಿದ ತಿಪ್ಪಣ್ಣಪ್ಪ, ಕಲ್ಯಾಣ ಕರ್ನಾಟಕದ ವಿಶೇಷ ಅಭಿವೃದ್ಧಿಗಾಗಿ ಭಾರತದ ಸಂವಿಧಾನಕ್ಕೆ ಸೇರಿಸಲಾದ ಅನುಚ್ಛೇದ 371(ಜೆ) ಅವಿರೋಧವಾಗಿ ಪಾಸ್ ಆಗಿದೆ. ಮಲ್ಲಿಕಾರ್ಜುನ ಖರ್ಗೆ ಸಚಿವರಾಗಿದ್ದಾಗ ರಾಜ್ಯಕ್ಕೆ, ದೇಶಕ್ಕೆ ಅವರ ಸೇವೆ ಅಪಾರ. ಹೀಗಾಗಿ ಅವರಿಗೆ ಭಾರತ ರತ್ನ ನೀಡಬೇಕೆಂದು ಒತ್ತಾಯಿಸಿದರು. ಮಲ್ಲಿಕಾರ್ಜುನ ಖರ್ಗೆ ಕಲಬುರಗಿಗೆ ಇಎಸ್‌ಐ ಆಸ್ಪತ್ರೆ ತಂದಿದ್ದಾರೆ. ಉತ್ತರ ಕರ್ನಾಟಕದಲ್ಲಿ ರೈಲು ಇಲ್ಲದ ಭಾಗಗಳಿಗೆ ರೈಲು ತಂದಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಪ್ರಸ್ತುತ ಕಾಂಗ್ರೆಸ್ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ.

## ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಒರಟು ವರ್ತನೆ ನಿಮ್ಮ ಪತ್ನಿಯೊಂದಿಗಿನ ಸಂಬಂಧವನ್ನು ಹಾಳು ಮಾಡಬಹುದು. ಏನಾದರೂ ಬಾಲಿಶವಾದದ್ದನ್ನು ಮಾಡುವ ಮೊದಲು ನಿಮ್ಮ ವರ್ತನೆಯ ಪರಿಣಾಮದ ಬಗ್ಗೆ ಆಲೋಚಿಸಿ. ಸಾಧ್ಯವಾದಲ್ಲಿ ದೂರ ಹೋಗಿ ನಿಮ್ಮ ಮನಸ್ಥಿತಿಯನ್ನು ಬದಲಾಯಿಸಿ. ಇಂದು ಯಾವುದೇ ವಿರುದ್ಧ ಲಿಂಗದ ಸಹಾಯದಿಂದ ನೀವು ವ್ಯಾಪರ ಅಥವಾ ಉದ್ಯೋಗದಲ್ಲಿ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಇದೆ.

### ವೃಷಭ ರಾಶಿ

ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನಿಮ್ಮ ಖರ್ಚುಗಳಲ್ಲಿ ಅನಿರೀಕ್ಷಿತ ಏರಿಕೆ ನಿಮ್ಮ ಮನಸ್ಸಿನ ಶಾಂತಿಗೆ ಭಂಗ ತರುತ್ತದೆ. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ. ಪ್ರೇಮ ಜೀವನ ಭರವಸೆ ತರುತ್ತದೆ ಇಂದು, ನೀವು ಮತ್ತು ನಿಮ್ಮ ಪ್ರೀತಿ ಸಂಗಾತಿ ಪ್ರೀತಿಯ ಸಾಗರದಲ್ಲಿ ತೇಲುತ್ತೀರಿ ಮತ್ತು ಪ್ರೀತಿಯ ಔನ್ನತ್ಯವನ್ನು ಅನುಭವಿಸುತ್ತೀರಿ.

### ಮಿಥುನ ರಾಶಿ

ನೀವು ಇಂದು ಆರಾಮವಾಗಿ ವಿಶ್ರಾಂತಿ ಪಡೆಯಬೇಕು ನೀವು ಆನಂದಿಸುವ ಮತ್ತು ಆಸಕ್ತಿಗಳು ಮತ್ತು ವಿಷಯಗಳಲ್ಲಿ ತೊಡಗಿಕೊಳ್ಳಿ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಹಳೆಯ ಸಂಪರ್ಕಗಳು ಮತ್ತು ಸಂಬಂಧಗಳ ಪುನಶ್ಚೇತನಕ್ಕೆ ಒಳ್ಳೆಯ ದಿನ. ಇಂದು ನೀವು ನಿಮ್ಮ ಜೀವನದಲ್ಲಿ ನಿಜವಾದ ಪ್ರೀತಿಯ ಅನುಪಸ್ಥಿತಿಯನ್ನು ಅನುಭವಿಸುತ್ತೀರಿ.

### ಕರ್ಕ ರಾಶಿ

ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಇಂದಿನ ದಿನ, ನಿಮ್ಮ ಬಳಿ ಸಾಲವನ್ನು ಕೇಳುವ ಮತ್ತು ಅದನ್ನು ಹಿಂತಿರುಗಿಸದೆ ಇರುವಂತಹ ಸ್ನೇಹಿತರಿಂದ ನೀವು ನಿಮ್ಮನ್ನು ತಪ್ಪಿಸುವ ಅಗತ್ಯವಿದೆ. ನಿಮ್ಮ ನಡೆಯಲ್ಲಿ ಉದಾರ ಮನೋಭಾವ ಹೊಂದಿರಿ ಮತ್ತು ನಿಮ್ಮ ಕುಟುಂಬದ ಸದಸ್ಯರ ಜೊತೆಗೆ ಉತ್ತಮವಾದ ಪ್ರೀತಿಯ ಕ್ಷಣಗಳನ್ನು ಕಳೆಯಿರಿ.

### ಸಿಂಹ ರಾಶಿ

ಗಾಯಗೊಳ್ಳುವುದನ್ನು ತಪ್ಪಿಸಲು ಕುಳಿತುಕೊಳ್ಳುವಾಗ ವಿಶೇಷ ಕಾಳಜಿ ವಹಿಸಿ. ಅಲ್ಲದೇ ಒಳ್ಳೆಯ ನಿಲುವು ಕೇವಲ ನಿಮ್ಮ ವ್ಯಕ್ತಿತ್ವವನ್ನು ವೃದ್ಧಿಸುವುದಷ್ಟೇ ಅಲ್ಲದೇ ಆರೋಗ್ಯ ಮತ್ತು ವಿಶ್ವಾಸಾರ್ಹತೆಯನ್ನು ಅಭಿವೃದ್ಧಿಪಡಿಸುವಲ್ಲೂ ಪ್ರಮುಖ ಪಾತ್ರ ವಹಿಸುತ್ತದೆ. ದೀರ್ಘಕಾಲದ ದೃಷ್ಟಿಕೋನದಿಂದ ಹೂಡಿಕೆ ಮಾಡಬೇಕು. ಜೀವನ ಮತ್ತು ಕೆಲಸದೆಡೆಗೆ ಪ್ರತಿಭಾಶಾಲಿಗಳೂ ಮತ್ತು ಪರಿಪೂರ್ಣರೂ ಆಗಿರಿ.

### ಕನ್ಯಾ ರಾಶಿ

ವಿಧಿಯನ್ನು ಆಧರಿಸದಿರಿ ಮತ್ತು ನಿಮ್ಮ ಆರೋಗ್ಯ ಸುಧಾರಿಸಲು ಪ್ರಯತ್ನಿಸಿ ಏಕೆಂದರೆ ಅದೃಷ್ಟವು ಒಂದು ಸೋಮಾರಿ ದೇವತೆಯಾಗಿದ್ದು ಇದು ಎಂದಿಗೂ ತಾನಾಗಿಯೇ ನಿಮ್ಮ ಬಳಿ ಬರುವುದಿಲ್ಲ. ನಿಮ್ಮ ತೂಕವನ್ನು ನಿಯಂತ್ರಿಸಲು ಮತ್ತು ನಿಮ್ಮ ಆರೋಗ್ಯವನ್ನು ಪುನಃ ಪಡೆಯಲು ವ್ಯಾಯಾಮ ಮಾಡಲು ಇದು ಒಳ್ಳೆಯ ಸಮಯ. ಕುಟುಂಬದ ಯಾವುದೇ ಸದಸ್ಯರ ಕಾಯಿಲೆ ಬೀಳುವ ಕಾರಣದಿಂದಾಗಿ ನೀವು ಆರ್ಥಿಕ ತೊಂದರೆಗೊಳಗಾಗಬಹುದು.

### ತುಲಾ ರಾಶಿ

ಅಭದ್ರತೆ / ದಿಗ್ಭ್ರಮೆಯ ಭಾವನೆ ತಲೆತಿರುಗುವಿಕೆಯನ್ನು ಉಂಟುಮಾಡಬಹುದು. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ಒಂದು ಹಳೆಯ ಸಂಪರ್ಕ ನಿಮಗೆ ಕೆಲವು ಸಮಸ್ಯೆಗಳನ್ನು ಸೃಷ್ಟಿಸಬಹುದು ನಿಮ್ಮ ಸಂಗಾತಿ ನಿಮ್ಮ ಸ್ಥಾನವನ್ನು ತಿಳಿದುಕೊಳ್ಳುವಂತೆ ಮಾಡಲು ನೀವು ತೊಂದರೆ ಹೊಂದಿರುತ್ತೀರಿ.

### ವೃಶ್ಚಿಕ ರಾಶಿ

ನಿಮ್ಮ ದೇಹದ ಪುನಃಶ್ಚೇತನಕ್ಕಾಗಿ ಸಂಪೂರ್ಣ ವಿಶ್ರಾಂತಿ ತೆಗೆದುಕೊಳ್ಳದಿದ್ದರೆ ನೀವು ಆಯಾಸ ಹಾಗೂ ನಿರಾಸೆಯಲ್ಲಿ ಸಿಲುಕುತ್ತೀರಿ. ಆವತ್ತಿಗಾಗಿ ಮಾತ್ರ ಬದುಕುವ ಮತ್ತು ಮನೋರಂಜನೆಗಾಗಿ ಹೆಚ್ಚು ಸಮಯ ಮತ್ತು ಹಣ ಖರ್ಚು ಮಾಡುವ ನಿಮ್ಮ ಪ್ರವೃತ್ತಿಯನ್ನು ನಿಯಂತ್ರಿಸಿ. ಜನರು ಮತ್ತು ಅವರ ಉದ್ದೇಶಗಳ ಬಗ್ಗೆ ಅವಸರದ ತೀರ್ಮಾನ ಕೈಗೊಳ್ಳಬೇಡಿ –ಅವರು ಒತ್ತಡದಲ್ಲಿರಬಹುದು ಮತ್ತು ಅವರಿಗೆ ನಿಮ್ಮ ಸಹಾನುಭೂತಿ ಮತ್ತು ತಿಳುವಳಿಕೆಯ ಅಗತ್ಯವಿರುತ್ತದೆ.

### ಧನು ರಾಶಿ

ಮನೋಬಲದ ನಿಮ್ಮ ಕೊರತೆ ನಿಮ್ಮನ್ನು ಭಾವನಾತ್ಮಕ ಮತ್ತು ಮಾನಸಿಕ ವರ್ತನೆಯ ಬಲಿಪಶುವಾಗಿ ಮಾಡಬಹುದು. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ಇಂದು ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು. ಪತ್ನಿಯ ವ್ಯವಹಾರಗಳಲ್ಲಿ ನಿಮ್ಮ ಹಸ್ತಕ್ಷೇಪ ಅವಳಿಗೆ ಕಿರಿಕಿರಿ ಮಾಡಬಹುದು.

### ಮಕರ ರಾಶಿ

ಇಂದು ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ಇಂದು ಸಾಲಗಾರನು ನಿಮಗೆ ಹೇಳದೆ ನಿಮ್ಮ ಖಾತೆಗೆ ಹಣವನ್ನು ಸೇರಿಸಬಹುದು. ಇದರ ಬಗ್ಗೆ ತಿಳಿದು ನೀವು ಆಶ್ಚರ್ಯಚಕಿತರಾಗಬಹು ಮತ್ತು ಸಂತೋಷವು ಪಡೆಯಬಹುದು. ಕುಟುಂಬದ ಸದಸ್ಯರು ಅಥವಾ ಸಂಗಾತಿ ಕೆಲವು ಆತಂಕಗಳನ್ನು ಉಂಟುಮಾಡುತ್ತಾರೆ.

### ಕುಂಭ ರಾಶಿ

ಕೆಲವು ಅನಿವಾರ್ಯ ಸಂದರ್ಭಗಳು ನಿಮಗೆ ಅಹಿತಕರವೆನಿಸಬಹುದು. ಆದರೆ ನೀವು ನಿಮ್ಮ ಸಮತೋಲನ ಕಾಯ್ದುಕೊಳ್ಳಬೇಕು ಮತ್ತು ಪರಿಸ್ಥಿತಿಯನ್ನು ನಿಭಾಯಿಸಲು ತಕ್ಷಣವೇ ಪ್ರತಿಕ್ರಿಯಿಸಬಾರದು. ಇಂದು ಹೂಡಿಕೆಗಳನ್ನು ಮಾಡಬಾರದು. ಮನೆಯಲ್ಲಿನ ಕೆಲವು ಬದಲಾವಣೆಗಳು ನಿಮ್ಮನ್ನು ಭಾವುಕರನ್ನಾಗಿಸಬಹುದು– ಆದರೆ ನಿಮಗೆ ಮುಖ್ಯವಾದವರಿಗೆ ನೀವು ನಿಮ್ಮ ಭಾವನೆಗಳನ್ನು ಪರಿಣಾಮಕಾರಿಯಾಗಿ ಹೇಳಲು ಸಾಧ್ಯವಾಗುತ್ತದೆ.

### ಮೀನ ರಾಶಿ

ಲಕ್ಷವಿಲ್ಲದಷ್ಟು ಗಾಬರಿಗಳು ನಿಮ್ಮ ಪ್ರತಿರೋಧಕತೆ ಮತ್ತು ಆಲೋಚನಾ ಶಕ್ತಿಯನ್ನು ದುರ್ಬಲಗೊಳಿಸಬಹುದು. ಸಕಾರಾತ್ಮಕ ಚಿಂತನೆಯ ಜೊತೆ ಈ ರೋಗದ ವಿರುದ್ಧ ಹೋರಾಡಲು ಪ್ರಯತ್ನಿಸಿ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು ಮತ್ತು ನೀವು ಹಣದ ಲಾಭವನ್ನು ಪಡೆಯಬಹುದು.

## ಮಕ್ಕಳ ಗ್ರಾಮ ಸಭೆಗೆ ಮಹತ್ವ ತಂದು ಕೊಟ್ಟ ಸಚಿವ ಮಧು ಬಂಗಾರಪ್ಪ



**ಶಿವಮೊಗ್ಗ:** ಮಕ್ಕಳ ಗ್ರಾಮ ಸಭೆ ಅತ್ಯಂತ ಮಹತ್ವದ್ದು. ಮಕ್ಕಳಿಗೆ ತಮ್ಮ ಹಕ್ಕುಗಳ ಬಗ್ಗೆ ಅರಿವು ಮೂಡಿಸುವುದು, ಅವರ ಸಮಸ್ಯೆಗಳನ್ನು ಕೇಳುವುದು ಮತ್ತು ಗ್ರಾಮದ ಅಭಿವೃದ್ಧಿ ಯೋಜನೆಗಳಲ್ಲಿ ಅವರನ್ನು ಸಕ್ರಿಯವಾಗಿ ತೊಡಗಿಸಿಕೊಳ್ಳುವಂತೆ ಮಾಡುವುದು ಇದರ ಉದ್ದೇಶವಾಗಿದೆ ಎಂದು ಹಸೂಡಿ ಗ್ರಾಪಂ ಅಧ್ಯಕ್ಷೆ ಚೈತ್ರ ಆರ್. ಮೋಹನ್ ಹೇಳಿದರು.

ತಾಲೂಕಿನ ಹಸೂಡಿ ಗ್ರಾಪಂ ವತಿಯಿಂದ 17–12–2025ರ ಇಂದು ಬುಧವಾರ ಬೆಳಿಗ್ಗೆ ಹಸೂಡಿಯಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ಗ್ರಾಮಸಭೆ ಉದ್ಘಾಟನಾ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಮಕ್ಕಳ ಗ್ರಾಮಸಭೆಯು ಶಿಕ್ಷಣ, ಆರೋಗ್ಯ, ರಕ್ಷಣೆ ಮತ್ತು ಸಮುದಾಯದ ನಿರ್ಧಾರ ತೆಗೆದುಕೊಳ್ಳುವ ಪ್ರಕ್ರಿಯೆಗಳಲ್ಲಿ ಮಕ್ಕಳ ಧ್ವನಿಗೆ ಮಹತ್ವ ನೀಡುವುದರೊಂದಿಗೆ, ಆತ್ಮವಿಶ್ವಾಸ ಮತ್ತು ನಾಯಕತ್ವದ ಗುಣಗಳನ್ನು ಬೆಳೆಸುತ್ತದೆ. ಮಕ್ಕಳು ತಮ್ಮ ಸಮಸ್ಯೆಗಳನ್ನು ನೇರವಾಗಿ ಹೇಳಲು ಮತ್ತು ಪರಿಹಾರಗಳನ್ನು ಸೂಚಿಸಲು ವೇದಿಕೆ ಕಲ್ಪಿಸುತ್ತದೆ. ಮಕ್ಕಳ ಗ್ರಾಮಸಭೆಗೆ ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಹತ್ವ ತಂದು ಕೊಟ್ಟಿದ್ದಾರೆ. ಇದರ ಪರಿಣಾಮವಾಗಿ ಮಕ್ಕಳ ಗ್ರಾಮಸಭೆಗಳು ಯಶಸ್ವಿಯಾಗಿ ನಡೆಯುತ್ತಿವೆ ಎಂದರು.

ಮಕ್ಕಳ ಹಕ್ಕುಗಳ ರಕ್ಷಣೆಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯತ್‌ಗಳು ಮಕ್ಕಳ ಅಗತ್ಯಗಳಿಗೆ ಅನುಗುಣವಾಗಿ ಯೋಜನೆಗಳನ್ನು ರೂಪಿಸಲು ಸಹಾಯ ಮಾಡುತ್ತದೆ. ಈ ನಿಟ್ಟಿನಲ್ಲಿ ಹಸೂಡಿ ಗ್ರಾಪಂ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ. ಇದಕ್ಕೆ ಸಚಿವ ಮಧು ಬಂಗಾರಪ್ಪನವರ ಆಲೋಚನೆ, ಪ್ರೇರಣೆ, ಪ್ರೋತ್ಸಾಹವೇ ಕಾರಣ ಎಂದು ತಿಳಿಸಿದರು.

ಮಕ್ಕಳ ಗ್ರಾಮಸಭೆ ಮಕ್ಕಳ ಆತ್ಮವಿಶ್ವಾಸ ವೃದ್ಧಿಸುತ್ತದೆಯಲ್ಲದೆ ವೇದಿಕೆಯ ಭಯವನ್ನು ಹೋಗಲಾಡಿಸಿ, ಸಾರ್ವಜನಿಕವಾಗಿ ಮಾತನಾಡುವ ಆತ್ಮವಿಶ್ವಾಸವನ್ನು ನೀಡುತ್ತದೆ. ಪಾರದರ್ಶಕತೆ ಮತ್ತು ಜವಾಬ್ದಾರಿ ಮೂಲಕ ಗ್ರಾಮ ಪಂಚಾಯತ್‌ಗಳನ್ನು ಮಕ್ಕಳ ಹಕ್ಕುಗಳ ಬಗ್ಗೆ ಜವಾಬ್ದಾರಿಯುತವಾಗಿ ವರ್ತಿಸುವಂತೆ ಮಾಡುತ್ತದೆ. ಭವಿಷ್ಯದ ಪೀಳಿಗೆಯನ್ನು ಸಕ್ರಿಯ ನಾಗರಿಕರನ್ನಾಗಿ ರೂಪಿಸುತ್ತದೆ. ಎಂದರು.

ಮಕ್ಕಳ ಗ್ರಾಮ ಸಭೆಗಳನ್ನು ಶಾಲಾ ಮತ್ತು ಸಮುದಾಯ ಮಟ್ಟದಲ್ಲಿ ಆಯೋಜಿಸುವುದರಿಂದ ಶಾಲಾ ಅಭಿವೃದ್ಧಿ, ಪೌಷ್ಠಿಕಾಂಶ, ಆರೋಗ್ಯ ತಪಾಸಣೆ, ಮತ್ತು ಲಸಿಕೆಗಳ ಬಗ್ಗೆ ಚರ್ಚೆ ನಡೆಯುತ್ತದೆ. ಮಕ್ಕಳ ಹಕ್ಕುಗಳ ಕ್ಲಬ್‌ಗಳ ಮೂಲಕ ಪೂರ್ವಭಾವಿ ಸಭೆಗಳನ್ನು ನಡೆಸುವುದು ಸಹ ಮಕ್ಕಳ ಗ್ರಾಮಸಭೆ ಯಶಸ್ಸಿಗೆ ಕಾರಣವಾಗುತ್ತದೆ. ಒಟ್ಟಾರೆಯಾಗಿ ಮಕ್ಕಳ ಗ್ರಾಮ ಸಭೆಯು ಮಕ್ಕಳಿಗೆ ಶಕ್ತಿ ತುಂಬುವ ಮತ್ತು ಅವರನ್ನು ಗ್ರಾಮದ ಅಭಿವೃದ್ಧಿಯ ಭಾಗವಾಗಿಸುವ ಪ್ರಮುಖ ಸಾಧನವಾಗಿದೆ ಎಂದು ಪ್ರತಿಪಾದಿಸಿದರು.

ಪಿಡಿಓ ಆಚಾರ್, ಶ್ರೀನಿವಾಸ್, ಉಷಾ, ಯುವರಾಜ್ ಮತ್ತಿತರರು ಉಪಸ್ಥಿತರಿದ್ದರು.

## ತಂಬಾಕು ದಾಳಿ: ರೂ.5500/– ದಂಡ



**ದಾವಣಗೆರೆ :** ಬಡಾವಣೆ ಪೊಲೀಸ್ ಠಾಣೆ ವ್ಯಾಪ್ತಿಯ, ಪಿ.ಬಿ ರಸ್ತೆ, ಎವಿಕೆ ಕಾಲೇಜು ರಸ್ತೆ, ಬಾಪೂಜಿ ಆಸ್ಪತ್ರೆಯ ವ್ಯಾಪ್ತಿಯಲ್ಲಿ ಕೋಟ್ಪಾ ಕಾಯ್ದೆನ್ವಯ ಹಾಗೂ ಟಿ.ವಿ.ಎಲ್ ಅನುಷ್ಠಾನದ ಕುರಿತು ತಂಬಾಕು ದಾಳಿ ಕೈಗೊಳ್ಳಲಾಯಿತು.

ಬಡಾವಣೆ ಪೊಲೀಸ್ ಠಾಣೆ ವ್ಯಾಪ್ತಿಯ ತಂಬಾಕು ದಾಳಿ ಕೈಗೊಂಡು ಬಾಪೂಜಿ ಆಸ್ಪತ್ರೆಯ ಮುಂಭಾಗದಲ್ಲಿ ಬರುವ ಎಲ್ಲಾ ಹೋಟೇಲ್ ಅಂಗಡಿಗಳಿಗೆ ಭೇಟಿ ನೀಡಿ ಕಡ್ಡಾಯವಾಗಿ ಆಹಾರ ಪದಾರ್ಥಗಳ ಜೊತೆಗೆ ತಂಬಾಕು ಮಾರಾಟ ಮಾಡದಂತೆ ಎಚ್ಚರಿಕೆ ನೀಡಲಾಯಿತು. ಇದನ್ನು ಹೊರತುಪಡಿಸಿ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡಿದಲ್ಲಿ ಕೋಟ್ಪಾ–2003 ಕಾಯ್ದೆಯ ಅನುಸಾರ ಶಿಸ್ತು ಕ್ರಮ ಕೈಗೊಳ್ಳಲಾಗುವುದು.

ಸೆಕ್ಷನ್–4 ಅಡಿಯಲ್ಲಿ 23 ಪ್ರಕರಣ ದಾಖಲಿಸಿ ರೂ. 4400/– ಹಾಗೂ ಸೆಕ್ಷನ್–6ಬಿ ಅಡಿಯಲ್ಲಿ 6 ಪ್ರಕರಣ ದಾಖಲಿಸಿ 1100/– ದಂಡ ವಿಧಿಸಿ ಒಟ್ಟು 29 ಪ್ರಕರಣ ದಾಖಲಿಸಿ ರೂ.5500/– ದಂಡ ವಿಧಿಸಲಾಯಿತು.

ದಾಳಿಯಲ್ಲಿ ಜಿಲ್ಲಾ ಸಲಹೆಗಾರರಾದ ಸತೀಶ್ ಕಲಹಾಳ್, ಸಮಾಜ ಕಾರ್ಯಕರ್ತರಾದ ಶೈಲಾ ಶಾಮನೂರು, ತಾಲ್ಲೂಕಿನ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಯಾದ ವೆಂಕಟಾಚಲಕುಮಾರ ಟಿ.ಎಸ್. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ, ಉಮಾಪತಿ, ಮಹಾನಗರ ಪಾಲಿಕೆ ಆರೋಗ್ಯ ನಿರೀಕ್ಷಕರಾದ ನಿಖಿಲ್ ಜೆ.ಹೆಚ್ ದಫೇದರ್ ತ್ರಿಮೂರ್ತಿ ಮತ್ತು ಬಡಾವಣೆ ಪೊಲೀಸ್ ಠಾಣೆಯ ಸಿಬ್ಬಂದಿ ವಿರೇಶ್ ಕುಮಾರ್ ಇದ್ದರು.

## ಡಿ.20 ರಂದು ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ

ಶಿವಮೊಗ್ಗ, ಡಿಸೆಂಬರ್ 16(ಕರ್ನಾಟಕ ವಾರ್ತೆ) ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಉಪನಿರ್ದೇಶಕರ ಕಚೇರಿ, ಶಾಲಾ ಶಿಕ್ಷಣ ಇಲಾಖೆ, ಶಿವಮೊಗ್ಗ, ರಾಜ್ಯ ಬಾಲಭವನ ಸೊಸೈಟಿ, ಬೆಂಗಳೂರು, ಜಿಲ್ಲಾ ಬಾಲ ಭವನ ಸಮಿತಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಡಿ.20 ರ ಬೆಳಿಗ್ಗೆ 10 ಗಂಟೆಗೆ ಬಿ ಹೆಚ್ ರಸ್ತೆಯಲ್ಲಿರುವ ಸರ್ಕಾರಿ ತಮಿಳು ಪ್ರೌಢಶಾಲಾ ಆವರಣದಲ್ಲಿ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಮಧು ಬಂಗಾರಪ್ಪ ನೆರವೇರಿಸುವರು. ವಿಶೇಷ ಆಹ್ವಾನಿತರಾಗಿ ಭದ್ರಾವತಿ ಶಾಸಕರು ಹಾಗೂ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಸಾಗರ ಶಾಸಕರು ಹಾಗೂ ಕರ್ನಾಟಕ ಅರಣ್ಯ ಕೈಗಾರಿಕಾ ನಿಗಮ ನಿಯಮಿತದ ಅಧ್ಯಕ್ಷರು ಪಾಲ್ಗೊಳ್ಳುವರು.

ಶಿವಮೊಗ್ಗ ನಗರ ಕ್ಷೇತ್ರದ ಶಾಸಕರಾದ ಎಸ್ ಎನ್ ಚನ್ನಬಸಪ್ಪ ಅಧ್ಯಕ್ಷತೆ ವಹಿಸುವರು. ಸಂಸದರು, ವಿಧಾನ ಸಭಾ, ವಿಧಾನ ಪರಿಷತ್ ಶಾಸಕರು, ವಿವಿಧ ನಿಗಮ, ಮಂಡಳಿ, ಪ್ರಾಧಿಕಾರಗಳ ಅಧ್ಯಕ್ಷರು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಜಿಲ್ಲಾಧಿಕಾರಿಗಳು, ಜಿ.ಪಂ.ಸಿಇಓ, ಜಿಲ್ಲಾ ಪೊಲೀಸ್ ವರಿಷ್ಟಾಧಿಕಾರಿಗಳು, ಅಧಿಕಾರಿಗಳು, ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರು, ಜಿಲ್ಲಾಧ್ಯಕ್ಷರು, ಶಿಕ್ಷಕರ ಸಂಘದ ಪದಾಧಿಕಾರಿಗಳು, ಅಧಿಕಾರಿಗಳು ಪಾಲ್ಗೊಳ್ಳುವರು.

### ವಿಜಯನಗರ ಶ್ರೀಕೃಷ್ಣದೇವರಾಯ ವಿವಿಯಲ್ಲಿ ಎರಡು ದಿನಗಳ ಪುಸ್ತಕ ಪ್ರಕಾಶನ ಕಮ್ಮಟ

## ಮುದ್ರಣ ತಂತ್ರಜ್ಞಾನಕ್ಕೆ ಕೊನೆಯಿಲ್ಲ: ಡಾ.ವಸುಂಧರಾ ಭೂಪತಿ

**ಬಳ್ಳಾರಿ:** ಮುದ್ರಣಗೊಳ್ಳುವ ಪುಸ್ತಕಗಳಿಗೂ ಹಾಗೂ ಮುದ್ರಣ ತಂತ್ರಜ್ಞಾನಕ್ಕೂ ಜೀವ ಸಂಕುಲ ಇರುವವರೆಗೂ ಸಾವಿಲ್ಲ ಎಂದು ಕರ್ನಾಟಕ ಪ್ರಕಾಶಕರ ಸಂಘದ ಅಧ್ಯಕ್ಷರಾದ ಡಾ.ವಸುಂಧರಾ ಭೂಪತಿ ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಹಾಗೂ ಕರ್ನಾಟಕ ಪ್ರಕಾಶಕರ ಸಂಘದ ಜಂಟಿ ಸಹಭಾಗಿತ್ವದಲ್ಲಿ ಆಯೋಜಿಸಿರುವ ಎರಡು ದಿನಗಳ ಪುಸ್ತಕ ಪ್ರಕಾಶನ ಕಮ್ಮಟ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

ಎಐ, ಇ–ಪುಸ್ತಕಗಳು, ಪ್ರಿಂಟ್ ಆನ್ ಡಿಮಾಂಡ್(ಪಿಓಡಿ) ಮುಂತಾದ ತಂತ್ರಜ್ಞಾನದ ಯುಗದಲ್ಲಿ ಕೇವಲ ಗಂಟೆಯಲ್ಲಿಯೇ ಪುಸ್ತಕವನ್ನು ಹೊರತರಬಹುದು. ಆದರೆ ಮುದ್ರಣವಾಗುವ ಪುಸ್ತಕಗಳು, ದಿನನಿತ್ಯ ಬಳಸುವ (ಕರೆನ್ಸಿ) ನೋಟುಗಳು ಮುದ್ರಣದ ಅವಿಭಾಜ್ಯ ಅಂಗವಾಗಿದ್ದು, ಅವುಗಳು ಎಂದಿಗೂ ನಿಲ್ಲುವುದಿಲ್ಲ ಎಂದು ಅಭಿಪ್ರಾಯಪಟ್ಟರು.

ಕ್ರಿ.ಶ. 400ರಲ್ಲಿ ಚೀನಾದಲ್ಲಿ ಉಗಮವಾಗ ಹಿರಾಕಸೂತ್ರ ಎಂಬ ಮುದ್ರಣವು ಮುಂದೆ ಜಪಾನ್, ಜರ್ಮನಿ ದೇಶಗಳಲ್ಲಿ ಅಚ್ಚುಮೊಳೆಗಳ ಮೂಲಕ ಮುಂದುವರೆದು ಗುಟೆನ್‌ಬರ್ಗ್ ಪ್ರೆಸ್ ವಿಕಸನಕ್ಕೆ ನಾಂದಿ ಹಾಡಿದವು. ಕ್ರಿ.ಶ.1556ರಲ್ಲಿ ಭಾರತದಲ್ಲಿ ಪ್ರಥಮ ಮುದ್ರಣ ಯಂತ್ರವು ಗೋವಾದಲ್ಲಿ ಬಂದಿಳಿಯಿತು. 1578ರಲ್ಲಿ ಭಾರತದ ಪ್ರಥಮ ಭಾಷಾ ಪುಸ್ತಕವಾದ ತಮಿಳಿನ ಥಂಬಿರನ್ ಒನಕ್ಕಮ್ ಪ್ರಕಟವಾಯಿತು ಎಂದು ನೆನೆದರು.



ಕ್ರಿ.ಶ. 1826ರಲ್ಲಿ ಕರ್ನಾಟಕದಲ್ಲಿ ಪ್ರಥಮ ಮುದ್ರಣ ಯಂತ್ರವನ್ನು ಬಳ್ಳಾರಿಗೆ ಜಾನ್ ಹ್ಯಾಂಡ್ಸ್ ಎಂಬ ಬ್ರಿಟೀಷ್ ಅಧಿಕಾರಿಯು ಧರ್ಮ ಪ್ರಚಾರಕ್ಕಾಗಿ ತರಿಸಿಕೊಂಡಿದ್ದನು ಎಂದು ತಿಳಿಸಿದರು.

ಕಾರ್ಯಕ್ರಮದ ಉದ್ಘಾಟಕರಾಗಿ ಆಗಮಿಸಿ ವೇದಿಕೆಯಲ್ಲಿದ್ದ ವಿವಿಯ ಸಿಂಡಿಕೇಟ್ ಸದಸ್ಯರಾದ ಅಮರೇಶ್ ನುಗಡೋಣಿ ಅವರು ಮಾತನಾಡಿ, ಲೇಖಕ, ಪ್ರಕಾಶಕ, ಓದುಗ ಮತ್ತು ಪುಸ್ತಕಗಳು ಎಂಬ ನಾಲ್ಕು ದಿಸೆಯ ಅನನ್ಯವಾದ ಸಮಾಗಮ ನೆಲೆಗೊಂಡಿದೆ. 10ನೇ ಶತಮಾನದಲ್ಲಿ ಶಿಕ್ಷಿತರ ಪ್ರಮಾಣ ನಿರೀಕ್ಷಿತ ಮಟ್ಟದಲ್ಲಿ ಇಲ್ಲದಿದ್ದರಿಂದ ವಚನಕಾರರು, ಸಂತಕವಿಗಳು ತಮ್ಮ ಅನುಭವ, ಸಂವಾದ, ಚರ್ಚೆಗಳು ಎಂಬ ಮೌಖಿಕ ಸಂವಹನದ ಮೂಲಕ ಜನಪದ ಕಾವ್ಯಗಳನ್ನು ಎಲ್ಲೆಡೆ ಹರಡಿದರು ಎಂದರು.

ವಿವಿಯ ಮೌಲ್ಯಮಾಪನ ಕುಲಸಚಿವರಾದ ಪ್ರೊ ಎನ್ ಎಂ ಸಾಲಿ ಎರಡು ದಿನಗಳ ಕಾರ್ಯಕ್ರಮ ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು.

ವಿವಿಯ ಸಿಂಡಿಕೇಟ್ ಸದಸ್ಯರಾದ ಬಿ ಪೀರ್‌ಬಾಷಾ, ಶಿವಕುಮಾರ್ ಕೆ ಮತ್ತು ಕರ್ನಾಟಕ ಪ್ರಕಾಶಕರ ಸಂಘದ ಪ್ರಧಾನ ಕಾರ್ಯದರ್ಶಿಗಳಾದ ನ. ರವಿಕುಮಾರ್ ವೇದಕೆಯಲ್ಲಿದ್ದರು. ಕಾರ್ಯಕ್ರಮದ ಸಂಯೋಜಕರಾದ ವಿವಿಯ ಪ್ರಸಾರಾಂಗದ ಪ್ರಭಾರ ನಿರ್ದೇಶಕರಾದ ಪ್ರೊ ತಿಪ್ಪೇರುದ್ರ ಪ್ರಾಸ್ತಾವಿಕವಾಗಿ ಮಾತನಾಡಿದರು. ರಸಾಯನಶಾಸ್ತ್ರ ವಿಭಾಗದ ಪ್ರೊ ಅರುಣ್‌ಕುಮಾರ್ ಲಗಶೆಟ್ಟಿ ಸ್ವಾಗತಿಸಿದರು. ಡಾ ಶಶಿಧರ್ ಕೆಲ್ಲೂರ್ ನಿರೂಪಿಸಿದರು.

ಎರಡು ದಿನಗಳ ಕಮ್ಮಟದಲ್ಲಿ ಒಟ್ಟು 5 ಚರ್ಚಾಗೋಷ್ಠಿಗಳು ನಡೆಯಲಿವೆ. ರಾಜ್ಯದ ವಿವಿಧ ಪ್ರಕಾಶಕರು, ಚಿಂತಕರು, ಉಪನ್ಯಾಸಕರುಗಳು, ವಿದ್ಯಾರ್ಥಿಗಳು ಸೇರಿದಂತೆ ಒಟ್ಟು ನೂರಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಂಡಿದ್ದರು.ವಿವಿಯ ವಿವಿಧ ನಿಕಾಯಗಳ ಡೀನರು, ಮುಖ್ಯಸ್ಥರುಗಳು, ಬೋಧಕ–ಬೋಧಕೇತರ ಸಿಬ್ಬಂದಿ ಇದ್ದರು.

### ಜಿ ಆರ್ ಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆರು ಶಾಲೆಗಳಿಗೆ ಚರಕ ವಿತರಿಸಿದ ಪಿಡಿಓ

## ಗ್ರಾಮಗಳ ಮಹಿಳೆಯರ ಮತ್ತು ಗ್ರಾಮಸ್ಥರ ಅಭಿವೃದ್ಧಿಗೆ ಚರಕ ಸಹಾಯಕವಾಗಲಿದೆ

**ಚಿತ್ರದುರ್ಗ:** ಗ್ರಾಮಗಳ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಶಾಲಾ ಮಕ್ಕಳಿಗೆ, ಸ್ವ ಸಹಾಯ ಸಂಘದ ಮಹಿಳೆಯರಿಗೆ, ಅಂಗನವಾಡಿ ಕಾರ್ಯಕರ್ತರಿಗೆ, ಆಶಾ ಕಾರ್ಯಕರ್ತರಿಗೆ, ಚರಕವನ್ನು ಪರಿಚಯಿಸಿ,

ಅದರಿಂದ ದಾರ ತಯಾರಿಸಿ, ದಾರದಿಂದ ಬಟ್ಟೆ ತಯಾರಿಸಿಕೊಳ್ಳುವಂತಹ ಹಳೆಯ ವ್ಯವಸ್ಥೆಗೆ ಹಿಂದಿರುಗಿ, ಆರ್ಥಿಕ ಸಂಕಷ್ಟದಿಂದ ನರಳುತ್ತಿರುವ ಗ್ರಾಮಗಳ ಸಬಲೀಕರಣಗೊಳಿಸಲು ಚರಕ ಸಹಾಯಕವಾಗುತ್ತದೆ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ಕರೆ ನೀಡಿದರು.

ಅವರು ಚಿತ್ರದುರ್ಗ ನಗರದ ಸಮೀಪವಿರುವ ಜಿಆರ್ ಹಳ್ಳಿ ಗ್ರಾಮ ಪಂಚಾಯಿತಿಯು ಆಯೋಜಿಸಿದ್ದ ಮಹಿಳಾ ಮತ್ತು ಮಕ್ಕಳ ಗ್ರಾಮ ಸಭೆಯಲ್ಲಿ ಗಾಂಧೀಜಿ ಮತ್ತು ಗ್ರಾಮೀಣ ಅಭಿವೃದ್ಧಿ ಎಂಬ ವಿಚಾರವಾಗಿ ಉಪನ್ಯಾಸ ನೀಡುತ್ತಾ ಮಾತನಾಡುತ್ತಿದ್ದರು.

ಗ್ರಾಮ ಸಭೆಗಳಲ್ಲಿ ಶಾಲೆಗಳಿಗೆ ಮಕ್ಕಳ ಶಿಕ್ಷಣದ ಜೊತೆ ಜೊತೆಗೆ, ಗುಡಿ ಕೈಗಾರಿಕೆಗಳನ್ನ ಪರಿಚಯಿಸಿ ಕೊಡಬೇಕಾದದ್ದು ಸಹ ಎಲ್ಲಾ ಗ್ರಾಮ ಪಂಚಾಯಿತಿಯ ಕರ್ತವ್ಯವಾಗಿದೆ, ಬರಗಾಲದಲ್ಲಿ, ಅತಿವೃಷ್ಟಿ ಅನಾವೃಷ್ಟಿಗಳಲ್ಲಿ, ಬಡತನ ನಿವಾರಣೆಗೆ, ಗ್ರಾಮೀಣ ಉದ್ಯೋಗಗಳು ಅವಶ್ಯಕವಾಗಿವೆ. ಗಾಂಧೀಜಿಯವರ ಕನಸಿನ ಭಾರತವನ್ನು ಕಟ್ಟಲು, ಚರಕ ಅನುಕೂಲಕರವಾಗಿದೆ, ಶಾಲೆಗಳಿಗೆ ಮತ್ತೊಮ್ಮೆ ನಾವು ಚರಕರಗಳನ್ನ ಪರಿಚಯಿಸಿ, ಗ್ರಾಮೀಣ ಉದ್ಯೋಗಗಳನ್ನು ಪರಿಚಯಿಸಿ, ಮಕ್ಕಳನ್ನ ಸ್ವಾವಲಂಬಿ ಜೀವನಕ್ಕೆ ಸಿದ್ಧ ಮಾಡಬೇಕಾಗಿದೆ ಎಂದು ಚರಕದ ಮುಖಾಂತರ ದಾರಾ ತೆಗೆದು, ಪ್ರಾತ್ಯಕ್ಷಿಕೆ ಮುಖಾಂತರ ತಿಳಿಸಿಕೊಟ್ಟರು.



ಗ್ರಾಮಗಳಲ್ಲಿ ಹೆಚ್ಚುತ್ತಿರುವಂತಹ ಪರಿಸರ ಮಾಲಿನ್ಯವನ್ನು ತಡೆಯುವ ನಿಟ್ಟಿನಲ್ಲಿ, ಪ್ಲಾಸ್ಟಿಕ್ ಮರುಬಳಿಕೆ ಬಗ್ಗೆ ಜನಜಾಗೃತಿ ಮೂಡಿಸಬೇಕಾಗಿದೆ, ಪ್ರತಿಯೊಂದು ವಸ್ತುವನ್ನು ಸಹ ಮರುಬಳಸುವಂತಹ ವೈಜ್ಞಾನಿಕ ತಿಳುವಳಿಕೆಯನ್ನು, ಮಾತೃಭಾಷೆಯಲ್ಲಿ ನೀಡಿ, ಮಕ್ಕಳನ್ನು ಪರಿಸರ ಸೇವೆಗೆ ಸಿದ್ಧಗೊಳಿಸಬೇಕಾಗಿದೆ ಎಂದು ಹಲವಾರು ಮಾದರಿಗಳ ಮುಖಾಂತರ ವಿವರಿಸಿದರು.

ಗ್ರಾಮ ಪಂಚಾಯಿತಿಯ ಪಿಡಿಓ ಶ್ರೀ ಆನಂದ್ ಎನ್ ಮಾತನಾಡುತ್ತಾ ಮುಖ್ಯೋಪಾಧ್ಯಾಯರುಗಳು, ಶಿಕ್ಷಕರುಗಳು ಶಾಲೆಗೆ ಪಡೆದ ಚರಕವನ್ನು ಮಕ್ಕಳಿಗೆ ತೋರಿಸಿ, ದಾರ ತೆಗೆಯುವುದರ ಬಗ್ಗೆ ಮಾಹಿತಿ ನೀಡಿ, ಅದರ ಮುಖಾಂತರ ಖಾದಿ, ಗ್ರಾಮೀಣ ಅಭಿವೃದ್ಧಿ, ಸ್ವಾವಲಂಬಿ ಜೀವನದ ಬಗ್ಗೆ ಜಾಗೃತಿ ಮೂಡಿಸಬೇಕೆಂದು ವಿನಂತಿಸಿಕೊಂಡರು. ಕಾರ್ಯಕ್ರಮದಲ್ಲಿ ಜಿ ಆರ್ ಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶ್ರೀಮತಿ ರುದ್ರಮ್ಮನವರು ಅಧ್ಯಕ್ಷತೆ ವಹಿಸಿದ್ದರು, ಉಪಾಧ್ಯಕ್ಷರಾದ ಶ್ರೀಮತಿ ರೂಪ ಕಾರ್ಯನಿರ್ವಾಹಕ ಅಧಿಕಾರಿಗಳಾದ ಶ್ರೀ ರವಿಕುಮಾರ್ ವೈ, ಸಹಾಯಕ ನಿರ್ದೇಶಕರಾದ ಶ್ರೀ ಜಯಸಿಂಹ ಜೆ, ಯರ್ರಿಸ್ವಾಮಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀಮತಿ ವೀಣಾ, ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀಮತಿ ಗಿರಿಜಾ ಎಚ್, ಕಾರ್ಯದರ್ಶಿ ಶ್ರೀ ಮಲ್ಲಪ್ಪ, ದ್ವಿ,ದ,ಲೆ ಸಹಾಯಕರಾದ ಶ್ರೀ ಮನೋಹರ್, ರೈನ್ ಟ್ರಸ್ಟಿನ ಕಾರ್ಯದರ್ಶಿಗಳಾದ ಶ್ರೀ ಮಂಜುನಾಥ ಮತ್ತು ಎಲ್ಲಾ ಶಾಲೆಯ ಮುಖ್ಯೋಪಾಧ್ಯಾಯರುಗಳು, ಶಿಕ್ಷಕರು, ಪೊಲೀಸ್ ಇಲಾಖೆಯ ಮುಖ್ಯಸ್ಥರುಗಳು, ವಿದ್ಯಾರ್ಥಿಗಳು, ಗ್ರಾಮಸ್ಥರು ಹಾಜರಿದ್ದರು.

## ಬಿ.ಇಡಿ. ದಾಖಲಾತಿ ಪರಿಶೀಲನೆ

**ಗದಗ :** 2025 ನೇ ಸಾಲಿನ ಬಿ.ಇಡಿ ದಾಖಲಾತಿ ಸಂಬಂಧ ಮೊದಲ ಪಟ್ಟಿಯ ಹಂಚಿಕೆ ಪ್ರಕಾರ ಸೇರ್ಪಡೆಯಾಗಿ ಉಳಿಕೆಯಾಗಿರುವ ಸೀಟುಗಳ ಕಾಲೇಜುವಾರು ಸೀಟ್ ಮ್ಯಾಟ್ರಿಕ್ಸ್ ನ್ನು ದಿನಾಂಕ:08/12/2025 ರಂದು https://schooleducation.karnataka.gov.in / ರಲ್ಲಿ ಪ್ರಕಟಿಸಲಾಗಿತ್ತು. ಮೊದಲ ಪಟ್ಟಿಯಲ್ಲಿ ಸೀಟು ಹಂಚಿಕೆಯಾದ ಕಾಲೇಜುಗಳಿಗೆ ಸೇರದ ಅಭ್ಯರ್ಥಿಗಳು ಎರಡನೇ ಸುತ್ತಿನ ಹಂಚಿಕೆಗಾಗಿ ತಮ್ಮ ಅಭಿಮತವನ್ನು ದಾಖಲಿಸಿದ್ದು ಅದರಂತೆ ಎರಡನೇ ಸೀಟು ಹಂಚಿಕೆ ಪಟ್ಟಿಯನ್ನು ಬಿಡುಗಡೆಗೊಳಿಸಿದೆ.

ಅಭ್ಯರ್ಥಿಗಳು ಈಗ ಹಂಚಿಕೆಯಾದ ಕಾಲೇಜುಗಳಿಗೆ ಸೇರಬಯಸಿದಲ್ಲಿ ತಮ್ಮ ಯೂಸರ್ ಐಡಿ ಮತ್ತು ಪಾಸವರ್ಡ ಬಳಸಿ ದಿನಾಂಕ:15–12–2025 ರಿಂದ 20–12–2025 ರವರೆಗೆ ನಿಗದಿತ ಶುಲ್ಕದ ಚಲನನ್ನು ಮುದ್ರಿಸಿಕೊಂಡು ಭಾರತೀಯ ಸ್ಟೇಟ್ ಬ್ಯಾಂಕಿನ ಯಾವುದೇ

ಶಾಖೆಯಲ್ಲಿ ಪಾವತಿಸಿ ಅದರ ಮೂಲ ಪ್ರತಿ ಹಾಗೂ ಇತರ ಎಲ್ಲಾ ಮೂಲ ದಾಖಲೆಗಳೊಂದಿಗೆ ಸಂಬಂಧಿಸಿದ ಜಿಲ್ಲಾ ನೋಡಲ್ ಕೇಂದ್ರಕ್ಕೆ ಹಾಜರಾಗಿ ಸಲ್ಲಿಸಿ ದಾಖಲಾತಿ ಪತ್ರವನ್ನು ಪಡೆದುಕೊಳ್ಳುವುದು ಹಾಗೂ ನಿಗದಿತ ದಿನಾಂಕದೊಳಗೆ ಸಂಬಂಧಿಸಿದ ಕಾಲೇಜಿಗೆ ಸೇರ್ಪಡೆಗೊಳ್ಳಲು ಸೂಚಿಸಿದೆ.

ಮೊದಲ ಪಟ್ಟಿಯಲ್ಲಿ ಸೀಟು ಹಂಚಿಕೆಯಾಗಿ ಸೇರ್ಪಡೆಯಾಗದ ಅಭ್ಯರ್ಥಿಗೆ ಈ ಬಾರಿ ಸೀಟು ಹಂಚಿಕೆಯಾಗಿದ್ದಲ್ಲಿ ಇದು ಅವರಿಗೆ ಕೊನೆಯ ಅವಕಾಶವಾಗಿರುತ್ತದೆ ಅಂಥವರನ್ನು ಮುಂದಿನ ಅಯ್ಕೆ ಪಟ್ಟಿಯಲ್ಲಿ ಪರಿಗಣಿಸಲಾಗುವುದಿಲ್ಲ ಮೊದಲ ಪಟ್ಟಿಯಲ್ಲಿ ಗುರುತು ಬಂದು ಸೀಟು ಹಂಚಿಕೆಯಾಗದ ಅಭ್ಯರ್ಥಿಗಳಿಗೆ ಇದು ಮೊದಲ ಹಂಚಿಕೆಯಾಗಿದ್ದು ಅವರು ಈಗ ಹಂಚಿಕೆಯಾದ ಕಾಲೇಜಿಗೆ ಸೇರ್ಪಡೆಗೊಳ್ಳಲು ಬಯಸದೇ ಇದ್ದಲ್ಲಿ ಯಾವುದೇ ಶುಲ್ಕವನ್ನು ಪಾವತಿಸದೆ, ಔಣಣಜಜ ಜಿಂಡಿ ಣುಜ ಓಜಥಣ ಖಡಿಣಟಿಜ ಎಂದು ಅಭಿಮತವನ್ನು ಇದೇ ಅವಧಿಯಲ್ಲಿ ದಾಖಲಿಸಬೇಕು.

## ಬೆಳೆಹಾನಿ ಮಧ್ಯಂತರ ಪರಿಹಾರಕ್ಕೆ ಆಗ್ರಹ

**ಚಿತ್ರದುರ್ಗ:** ಬೆಳೆ ಹಾನಿಗೆ ಮಧ್ಯಂತರ ಪರಿಹಾರ ನೀಡುವಂತೆ ವಿಮಾ ಕಂಪನಿಗೆ ಜಿಲ್ಲಾಧಿಕಾರಿ ಆದೇಶಿಸಬೇಕು ಎಂದು ಚಳ್ಳಕೆರೆ ತಾಲೂಕು ಕಸಬಾ ಹೋಬಳಿ ಶೇಂಗಾ ಮತ್ತು ತೊಗರಿ ಬೆಳೆಗಾರರ ಸಂಘದ ಅಧ್ಯಕ್ಷ ಡಾ.ಸಿ. ಶಿವಲಿಂಗಪ್ಪ ಮನವಿ ಮಾಡಿದರು. ನಗರದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, 2025–26ನೇ ಸಾಲಿನ ತೊಗರಿ ಬೆಳೆ ಮಧ್ಯಂತರ ಪರಿಹಾರ ಕೊಡಿಸುವ ಮೂಲಕ ರೈತರ ನೆರವಿಗೆ ಧಾವಿಸಬೇಕು ಎಂದು ಒತ್ತಾಯಿಸಿದರು. ಜಂಟಿ ಸಮೀಕ್ಷೆ ನಡೆಸುವಂತೆ ಇಲಾಖೆಗೆ ಡಿಸಿ ಸೂಚಿಸಿದರೆ ಹೊರತು ಅದರಿಂದ ಯಾವುದೇ ಉಪಯೋಗವಾಗಿಲ್ಲ ಎಂದರು.

## ದೆಹಲಿ: ಬೆಳ್ಳಿ ದರ ರೂ 2 ಲಕ್ಷ

**ನವದೆಹಲಿ (ಪಿಟಿಐ):** ಇಲ್ಲಿನ ಚಿನಿವಾರ ಪೇಟೆಯಲ್ಲಿ ಬುಧವಾರ ನಡೆದ ವಹಿವಾಟಿನಲ್ಲಿ ಕೆ.ಜಿ.ಬೆಳ್ಳಿ ಧಾರಣೆಯು ಇದೇ ಮೊದಲಬಾರಿಗೆ ರೂ 2 ಲಕ್ಷ ದಾಟಿದೆ.

ಕೆ.ಜಿ ಬೆಳ್ಳಿಧಾರಣೆ ರೂ 7,300ರಷ್ಟು ಹೆಚ್ಚಳವಾಗಿ, ರೂ 2,05,80000 ಮಾರಾಟವಾಗಿದೆ. ಜಾಗತಿಕ ಮತ್ತು ದೇಶಿ ಮಾರುಕಟ್ಟೆ–ಯಲ್ಲಿ ಬೆಳ್ಳಿಗೆ ಹೆಚ್ಚಿದ ಬೇಡಿಕೆಯು ಬೆಲೆ ಏರಿಕೆಗೆ ಕಾರಣ ಎಂದು ಅಖಿಲ ಭಾರತ ಸರಾಫ್ ಅಸೋಸಿಯೇಷನ್ ತಿಳಿಸಿದೆ. ಮಂಗಳವಾರದ ವಹಿವಾಟಿನಲ್ಲಿ ಬೆಳ್ಳಿ ಬೆಲೆಯು ಕೆ.ಜಿಗೆ ರೂ1,98,500 ಇತ್ತು. 10ಗ್ರಾಂ ಚಿನ್ನದ (ಶೇ99.9ರಷ್ಟು ಪರಿಶುದ್ಧತೆ) ದರವು ರೂ 600 ಹೆಚ್ಚಳವಾಗಿ, ರೂ 1,36,500 ಆಗಿದೆ ಎಂದು ತಿಳಿಸಿದೆ.

ಬೆಂಗಳೂರಿನಲ್ಲಿ ಕೆ.ಜಿ.ಬೆಳ್ಳಿ ದರ ಈಗಾಗಲೇ ರೂ 2 ಲಕ್ಷದ ಗಡಿ ದಾಟಿ, ರೂ2,13,000 ಆಗಿದೆ

## ನಿಧನ ಸುದ್ದಿಗಳು

### ಸವಣೂರು ಮೊಹಮ್ಮದ್ ರಫೀಕ್

**ಹರಿಹರ:** ಇಲ್ಲಿನ ವಿದ್ಯಾನಗರ 'ಬಿ' ಬ್ಲಾಕ್ ನಿವಾಸಿ ಸವಣೂರು ಮೊಹಮ್ಮದ್ ರಫೀಕ್ (64) ಬುಧವಾರ ನಿಧನರಾದರು. ಇವರಿಗೆ ಪತ್ನಿ, ಪುತ್ರ, ಪುತ್ರಿ ಇದ್ದಾರೆ. ಸಂಜೆ ನಗರದಲ್ಲಿ ಅಂತ್ಯಕ್ರಿಯೆ ನಡೆಯಿತು.

### ಗುಬ್ಬಿ ಕೊಟ್ರಪ್ಪ ನಿಧನ

**ಕಡರನಾಯ್ಕನ–ಹಳ್ಳಿ:** ಗ್ರಾಮದ ಗುಬ್ಬಿ ಕೊಟ್ರಪ್ಪ (92) ಬುಧವಾರ ನಿಧನರಾದರು.ಇವರಿಗೆ ಪುತ್ರ ಮತ್ತು ನಾಲ್ವರು ಪುತ್ರಿಯರು ಇದ್ದಾರೆ. ಅಂತ್ಯಕ್ರಿಯೆ ಗುರುವಾರ ಮಧ್ಯಾಹ್ನ ನಡೆದಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

# ಕಾನೂನು ಉಲ್ಲಂಘಿಸಿ ವಾಣಿಜ್ಯ ಕಟ್ಟಡ ನಿರ್ಮಾಣ : ಕ್ರಮಕ್ಕೆ ಆಯುಕ್ತರಿಗೆ ಮನವಿ




**ಶಿವಮೊಗ್ಗ :** ಕಾನೂನು ಉಲ್ಲಂಘಿಸಿ ನಗರದ ಮಿಳ್ಳಘಟ್ಟ ಮುಖ್ಯ ರಸ್ತೆ ಅಣ್ಣ ನಗರದ ನಾಲ್ಕನೇ ತಿರುವು ಬಲ ಭಾಗದಲ್ಲಿ ವಾಣಿಜ್ಯ ಕಟ್ಟಡ ನಿರ್ಮಿಸಲಾಗುತ್ತಿದೆ ಎಂದು ಗ್ಯಾರಂಟಿ ಯೋಜನೆ ಅನುಷ್ಠಾನದ ಪ್ರಾಧಿಕಾರ ಜಿಲ್ಲಾ ಸದಸ್ಯೆ ಬಿ.ಎ.ಅರ್ಚನಾ ನಿರಂಜನ್ ಆರೋಪಿಸಿದರು.

ರಾಜಕಾಲುವೆ ಒಡೆದು ಹಾಕಿರುವ ಪರಿಣಾಮ ಕಸ ಕಡ್ಡಿ ಗಲೀಜು ತುಂಬಿಕೊಂಡು ಸಾಂಕ್ರಾಮಿಕ ಕಾಯಿಲೆಗೆ ಅಹ್ವಾನವಾಗಿದೆ ಹಾಗಾಗಿ ಇದರ ವಿರುದ್ಧ ಕಾನೂನು ರೀತಿ ಕ್ರಮ ಕೈಗೊಂಡು ಸ್ಥಳೀಯ ನಿವಾಸಿಗಳಿಗೆ ಅನುಕೂಲ ಮಾಡಿಕೊಡುವಂತೆ ಆಯುಕ್ತರಿಗೆ ಮನವಿ ಮೂಲಕ ಒತ್ತಾಯಿಸಿದರು.

ವಾಣಿಜ್ಯ ಕಟ್ಟಡವು ನೀಲಿ ನಕ್ಷೆಯಲ್ಲಿ ತೋರಿಸಿರುವಂತೆ ನಿರ್ಮಾಣ ಮಾಡದೇ, ಅಕ್ಕ-ಪಕ್ಕ ಒತ್ತವರಿ ಮಾಡಿಕೊಂಡು, ಯಾವುದೇ ರೀತಿ ಪಾರ್ಕಿಂಗ್ ಸ್ಥಳಾವಕಾಶ ಬಿಡದೆ ನಿರ್ಮಿಸಲಾಗುತ್ತಿದೆ, ರಸ್ತೆಯಲ್ಲಿ ಮರಳು, ಜಲ್ಲಿ ಕಲ್ಲು ಹಾಗೂ ಸಿಮೆಂಟ್ ಬ್ರಿಕ್ಸ್‌ನ್ನು ಎಲ್ಲೆಂದರಲ್ಲಿ ಹಾಕಿರುವುದರಿಂದ ವಾಹನ ಸವಾರರಿಗೆ ಹಾಗೂ ಸ್ಥಳೀಯರಿಗೆ ಓಡಾಡಲು ತೊಂದ್ರೆಯಾಗುತ್ತಿದೆ ಎಂದು ದೂರಿದರು.

# ಜೆವಿಎಸ್ ಪಿ.ಯು ಕಾಲೇಜಿನ ಅಬ್ದುಲ್ ರಜೀಕ್ ರಾಷ್ಟ್ರ ಮಟ್ಟಕ್ಕೆ ಆಯ್ಕೆ

**ಚಿಕ್ಕಮಗಳೂರು:** 2025-26ನೇ ಸಾಲಿನ ಜೆವಿಎಸ್ ಪಿ.ಯು ಕಾಲೇಜಿನಿಂದ ಅಬ್ದುಲ್ ರಜೀಕ್ ಎಂಬ ವಿದ್ಯಾರ್ಥಿ ಪದವಿ ಪೂರ್ವ ಕಾಲೇಜು ಮಟ್ಟದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಆಯೋಜಿಸಲಾದ ವಿಜ್ಞಾನ ಮಾದರಿ ತಯಾರಿಕೆ ಸ್ಪರ್ಧೆಯಲ್ಲಿ ಜಿಲ್ಲಾ ಮಟ್ಟಕ್ಕೆ ಆಯ್ಕೆಗೊಂಡು, ರಾಜ್ಯ ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿರುವ ಇವರಿಗೆ ಪದವಿಪೂರ್ವ ಕಾಲೇಜುಗಳ ಉಪನಿರ್ದೇಶಕರಾದ ಮಂಜುಳ, ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷರಾದ ಟಿ.ರಾಜಶೇಖರ್, ಉಪಾಧ್ಯಕ್ಷರಾದ ಟಿ.ಡಿ.ಮಲ್ಲೇಶ್, ಗೌರವಕಾರ್ಯದರ್ಶಿ ಎಂ.ಎಸ್.ಪ್ರದೀಪ್‌ಕುಮಾರ್, ಕಾಲೇಜು ಸಹಕಾರ್ಯದರ್ಶಿ



ಯು.ಪಿ.ಮನುಕುಮಾರ್, ಪ್ರಾಂಶುಪಾಲರಾದ ತೇಜಸ್ವಿನಿ ಅಭಿನಂದಿಸಿದರು.

## ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆ-2 ನಡೆಸಿ ಡಿಸಿ ನಾಗೇಂದ್ರ ಪ್ರಸಾದ್ ನಿರ್ದೇಶನ

# ಐದು ವರ್ಷದೊಳಗಿನ ಪ್ರತಿ ಮಗುವಿಗೆ ಪೋಲಿಯೋ ಲಸಿಕೆ ನೀಡಿ

**ಬಳ್ಳಾರಿ:** ಜಿಲ್ಲೆಯಲ್ಲಿ ಇದೇ ಡಿ.21 ರಿಂದ 24 ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ಪಲ್ಸ್ ಪೋಲಿಯೋ ಲಸಿಕೆ ನೀಡಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ನಗರದ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಎರಡನೇ ಹಂತದ ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇದೇ ಡಿಸೆಂಬರ್ 21 ರಂದು ಬೂತ್ ಮಟ್ಟದ ಪೋಲಿಯೋ ಲಸಿಕಾ ಕಾರ್ಯಕ್ರಮ ನಡೆಯಲಿದ್ದು, ಡಿ.22, 23 ರಂದು ಗ್ರಾಮೀಣ ಪ್ರದೇಶದಲ್ಲಿ ಹಾಗೂ ಡಿ.22 ರಿಂದ 24 ರವರೆಗೆ ಮನೆ ಮನೆಗೆ ಭೇಟಿ ನೀಡಿ ಪಲ್ಸ್ ಪೋಲಿಯೋ ಲಸಿಕೆ ನೀಡಲಾಗುತ್ತಿದೆ. ಯಾವುದೇ ಅರ್ಹ ಮಗು ಈ ಲಸಿಕೆಯಿಂದ ವಂಚಿತರಾಗದಂತೆ ನಿಗಾವಹಿಸಲು ಅವರು ಸೂಚಿಸಿದರು.

ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಬಗ್ಗೆ ಪಾಲಕರಲ್ಲಿ ಅರಿವು, ಶಾಲಾ ಮಕ್ಕಳಿಗೆ ಸೂಕ್ತ ಜಾಗೃತಿ ಕಾರ್ಯಕ್ರಮ, ಶಿಕ್ಷಕರ ಮೂಲಕ ಮಕ್ಕಳಿಗೆ ಲಸಿಕೆ ಹಾಕಿಸಲು, ಅವಶ್ಯಕ ಕ್ರಮ ಕೈಗೊಳ್ಳಬೇಕು. ಲಸಿಕಾ ಸಿಬ್ಬಂದಿಗಳಿಗೆ ಸೂಕ್ತ ವಾಹನಗಳ ವ್ಯವಸ್ಥೆ ಮಾಡಲು ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಸೂಚಿಸಿದರು.

ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಸಂಬಂಧಿಸಿದ ತಂಡಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳ



ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಯಾವುದೇ ಮಗು ಪೋಲಿಯೋ ಲಸಿಕೆಯಿಂದ ವಂಚಿತರಾಗದಂತೆ ನಿಗಾವಹಿಸಬೇಕು. ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಜನನಿಬೀಡ, ದೂರದ ಪ್ರದೇಶ, ವಲಸಿಗ ಕಾರ್ಮಿಕರ ಮಕ್ಕಳು, ಜಿಲ್ಲೆಗೆ ಆಗಮಿಸುವ ಕಾರ್ಮಿಕರ ಹಾಗೂ ವಿವಿಧ ಸಮುದಾಯ ವ್ಯಾಪ್ತಿಯಲ್ಲಿನ ಮಕ್ಕಳನ್ನು, ಗುರುತಿಸಿ ಲಸಿಕೆ ಹಾಕಿಸಬೇಕು ಎಂದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಜಿಲ್ಲೆಯಲ್ಲಿ ಈ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಅಂಗವಾಗಿ 1,89,745 ಐದು ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಇದಕ್ಕಾಗಿ ಒಟ್ಟು 920 ಬೂತ್ ಮಟ್ಟದ ಲಸಿಕಾ ತಂಡಗಳನ್ನು ರಚಿಸಲಾಗಿದ್ದು, 49 ಟ್ರಾನ್ಸಿಟ್(ಸಂಚಾರಿ) ತಂಡಗಳನ್ನು ನೇಮಿಸಲಾಗಿದೆ. 1,968 ಲಸಿಕಾ ಸಿಬ್ಬಂದಿಗಳು, 984 ತಂಡಗಳು ಮನೆ ಮನೆಗೆ ಭೇಟಿ ನೀಡಲಿವೆ, ಎಲ್ಲಾ ತಂಡಗಳಿಗೆ ಲಸಿಕೆ ನೀಡುವ ವಿಧಾನ ಕುರಿತು ತರಬೇತಿ ನೀಡಲಾಗಿದೆ ಎಂದು ಸಭೆಗೆ ತಿಳಿಸಿದರು.

ನಗರಸಭೆ ಮತ್ತು ಇನ್ನಿತರೆ ಸ್ಥಳೀಯ ಸಂಸ್ಥೆಗಳ ವತಿಯಿಂದ ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ಆಡಿಯೋ ಮೂಲಕ ಕಸ ವಿಲೇವಾರಿ ವಾಹನಗಳಲ್ಲಿ ಪ್ರಚುರಪಡಿಸಬೇಕು. ಸಾಮಾಜಿಕ ಜಾಲತಾಣಗಳ ಮೂಲಕ ಜಾಗೃತಿ ವಿಡೀಯೋ ಚಿತ್ರೀಕರಿಸಿ ಪ್ರಚಾರ ಕೈಗೊಳ್ಳಬೇಕು ಎಂದು ತಿಳಿಸಿದರು.

ಲಸಿಕಾ ಕಾರ್ಯಕ್ಕೆ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು, ಎನ್ ಸಿಸಿ, ಗೃಹರಕ್ಷಕ ದಳ, ಎನ್ ಜಿಓ ಸಂಸ್ಥೆಗಳ ಸಹಕಾರ ಪಡೆದುಕೊಳ್ಳಬೇಕು. ಸಾಧ್ಯವಾದಲ್ಲಿ ಲಸಿಕೆ ಪಡೆದ ಮಕ್ಕಳ ಪೋಷಕರ ಮೊಬೈಲ್ ಸಂಖ್ಯೆ ಮಾಹಿತಿ ಪಡೆದುಕೊಳ್ಳಬಹುದು. ಇದರಿಂದ ಮುಂದಿನ ಅಭಿಯಾನಗಳಲ್ಲಿ ಸಹಾಯವಾಗಲಿದೆ ಎಂದು ನಿರ್ದೇಶನ ನೀಡಿದ ಜಿಲ್ಲಾಧಿಕಾರಿಯವರು ಲಸಿಕಾ ಕಾರ್ಯದ ತಂಡದವರಿಗೆ ಅಭಿಯಾನದ ಕ್ಯಾಪ್, ಊಟದ ವ್ಯವಸ್ಥೆ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಮುಖ್ಯವಾಗಿ ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳು, ಕಾರ್ಮಿಕರ ಮಕ್ಕಳು, ಗಣಿಗಾರಿಕೆ ಕಾರ್ಮಿಕರ ಮಕ್ಕಳು ಹಾಗೂ ಇತರೆ ವಲಸೆ ಪ್ರದೇಶಗಳಲ್ಲಿ ಹುಟ್ಟಿನಿಂದ 05 ವರ್ಷದೊಳಗಿನ ಮಕ್ಕಳನ್ನು ಗುರುತಿಸಿ ಲಸಿಕೆ ಹಾಕಿಸುವಂತೆ ಕ್ರಮವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿಇಓ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಸಂಡೂರು ಭಾಗದ ಎಲ್ಲಾ ಗ್ರಾಮಗಳೂ ಕೂಡ ಪಲ್ಸ್ ಪೋಲಿಯೋ ಲಸಿಕೆ ನೀಡಬೇಕು. ಅದರಲ್ಲೂ ಜೆಎಸ್ ಡಬ್ಲ್ಯೂ, ಎನ್‌ಎಂಡಿಸಿ ಕೈಗಾರಿಕಾ ಪ್ರದೇಶಗಳಲ್ಲಿ ವಾಸಿಸುತ್ತಿರುವ ಮತ್ತು ಹೊರ ರಾಜ್ಯದಿಂದ ಬಂದಂತಹ ಕಾರ್ಮಿಕರ ಮಕ್ಕಳನ್ನು ಗುರುತಿಸಿ ಪ್ರತಿಯೊಂದು ಮಗುವಿಗೂ ಲಸಿಕೆ ನೀಡಬೇಕು ಎಂದು ತಾಕೀತು ಮಾಡಿದರು.


ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತಚಿಕಿತ್ಸಕ ಡಾ.ಬಸರೆಡ್ಡಿ, ವಿಶ್ವ ಆರೋಗ್ಯ ಸಂಸ್ಥೆಯ ಎಸ್.ಎಮ್.ಓ ಡಾ.ಶ್ರೀಧರ್, ಜಿಲ್ಲಾ ಯೋಜನಾಭಿವೃದ್ಧಿ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಷಿದ್ ಬೇಗಮ್ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ತಾಲ್ಲೂಕು ಮಟ್ಟದ ಆರೋಗ್ಯಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

### ಪೋಷಕರಲ್ಲಿ ವಿನಂತಿ:

ಪಲ್ಸ್ ಪೋಲಿಯೊ ಮಕ್ಕಳ ಭವಿಷ್ಯದ ರಕ್ಷಣೆಯಾಗಿದ್ದು, 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಎಲ್ಲಾ ಮಕ್ಕಳಿಗೂ ಅವಶ್ಯಕವಾಗಿದೆ. ಇದು ಉಚಿತ, ಸುರಕ್ಷಿತ ಮತ್ತು ಪರಿಣಾಮಕಾರಿಯಾಗಿದೆ. ಹಾಗಾಗಿ ಪೋಷಕರು ಹತ್ತಿರದ ಹತ್ತಿರದ ಆರೋಗ್ಯ ಕೇಂದ್ರ ಅಥವಾ ಬೂತ್ ಗೆ ತೆರಳಿ ತಮ್ಮ ಮಗುವಿಗೆ ಪಲ್ಸ್ ಪೋಲಿಯೊ ದಿನದಂದು ಮಿಸ್ ಮಾಡದೇ ಬಾಯಲ್ಲಿ 2 ಹನಿ ಪೋಲೀಯೋ ಲಸಿಕೆ ಹಾಕಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಅವರು ಪೋಷಕರಲ್ಲಿ ಮನವಿ ಮಾಡಿದ್ದಾರೆ.

## ಪೌಷ್ಠಿಕ ಆಹಾರ ಬಳಕೆಯಿಂದ ಉತ್ತಮ ಆರೋಗ್ಯ-ಎಸ್.ಬಸವರಾಜು

# ಸಾವಯವ ಕೃಷಿ ಪದ್ಧತಿಯಲ್ಲಿ ಕೈತೋಟ ನಿರ್ಮಾಣ ಡಯಟ್ ಉಪನ್ಯಾಸಕರ ಮೆಚ್ಚುಗೆ



**ಚಿತ್ರದುರ್ಗ/ಸಿರಿಗೆರೆ:** ಪೌಷ್ಠಿಕ ಆಹಾರ ಬಳಕೆಯಿಂದ ಆರೋಗ್ಯಪೂರ್ಣ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂದು ಡಯಟ್ ಉಪನ್ಯಾಸಕ ಎಸ್.ಬಸವರಾಜು ಹೇಳಿದರು. ಭರಮಸಾಗರದ ಬಾಪೂಜಿ ಪ್ರೌಢಶಾಲೆಗೆ ಬುಧವಾರ ಭೇಟಿ ನೀಡಿ ಸಾವಯವ ಕೃಷಿ ಪದ್ಧತಿಯಲ್ಲಿ ನಿರ್ಮಿಸಿರುವ ಶಾಲಾ ಕೈತೋಟ ವೀಕ್ಷಿಸಿ ಮಾತನಾಡಿದ ಅವರು ಜಗತ್ತಿನ ಸಕಲ ಜೀವರಾಶಿಗಳಿಗೆ ಪರಿಸರ ದೊಡ್ಡ ಶಕ್ತಿ. ಭವಿಷ್ಯದ ಉತ್ತಮ ಜೀವನ ನಡೆಸಲು ಶುದ್ಧ ಗಾಳಿ, ನೀರು, ಆಹಾರ ಪಡೆಯಲು ವಿದ್ಯಾರ್ಥಿ ದೆಸೆಯಲ್ಲಿಯೆ ಪರಿಸರ ಪ್ರಜ್ಞೆ ಬೆಳೆಸುವುದು ಅಗತ್ಯ ಎಂದು ತಿಳಿಸಿದರು. ಶಿಕ್ಷಕರು ಕ್ರಿಯಾಶೀಲತೆಯಿಂದ ಕೆಲಸ ನಿರ್ವಹಿಸಿದಾಗ ಶಾಲೆಯ ಶೈಕ್ಷಣಿಕ ಚಟುವಟಿಕೆಗಳು ಯಶಸ್ವಿಯಾಗಿ ನಡೆಯುತ್ತವೆ. ಶಿಕ್ಷಕರು ಪರಿಸರ ಸ್ನೇಹಿ ವಾತಾವರಣ ಸೃಜಿಸಿ ಪಠ್ಯವಿಷಯ ಬೋಧನೆ ಜತೆಗೆ ಪ್ರಾಯೋಗಿಕ ಜ್ಞಾನದ ಮೂಲಕ ಪರಿಸರ ಪ್ರಜ್ಞೆ ಬೆಳೆಸುತ್ತಿರುವುದು ಸಂತಸದ ವಿಷಯ. ಶಾಲೆಯ ಹಿಂಬದಿಯಲ್ಲಿ ಸಾವಯವ ಗೊಬ್ಬರ ಬಳಸಿ ಮಿಶ್ರಬೆಳೆ ಬೇಸಾಯ ಪದ್ಧತಿ ಮೂಲಕ ಪೌಷ್ಠಿಕಾಂಶ ದೊರೆಯುವ ಪಾಲಕ್, ಮೆಂತೆ, ನುಗ್ಗೆ ಸೊಪ್ಪು, ಕರಿಬೇವು, ಲಿಂಬೆ, ಬೆಟ್ಟದ ನೆಲ್ಲಿ, ಬಾಳೆ, ಮೂಲಂಗಿ, ನೇರಲೆ, ಹಲಸು, ಪಪ್ಪಾಯಿ, ಡ್ರ್ಯಾಗನ್, 200 ಕ್ಕೂ ಹೆಚ್ಚು ಅಡಕೆ ಗಿಡಗಳನ್ನು ಬೆಳೆಸಿ ಸುಂದರವಾದ ಕೈತೋಟ ನಿರ್ಮಿಸಿರುವುದು ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮುಖ್ಯ ಶಿಕ್ಷಕ ಜಿ.ಸಿ.ಎಚ್ ಗೊಂಚಿಗಾರ್ ಮಾತನಾಡಿ, ಶಿಕ್ಷಕರ ಸಹಕಾರದಿಂದ ವಿದ್ಯಾರ್ಥಿಗಳಿಗೆ ಶಾಲಾ ಹಂತದಲ್ಲಿ ಪರಿಸರ ಪ್ರಜ್ಞೆ ಬೆಳೆಸಲು ಕೈತೋಟ ನಿರ್ಮಿಸಿರುವುದು ಸಹಕಾರಿಯಾಗಿದೆ. ಸಾವಯವ ಕೃಷಿ ಪದ್ಧತಿ, ನೀರಿನ ಸದ್ಬಳಕೆ, ಪೌಷ್ಠಿಕ ಆಹಾರ ಬಳಕೆ ಕುರಿತು ಮಾರ್ಗದರ್ಶನ ನೀಡಲಾಗುತ್ತಿದೆ. ಪ್ರತಿ ವಿದ್ಯಾರ್ಥಿಗೆ ಒಂದು ಗಿಡ ದತ್ತು ನೀಡಿ ಪರಿಸರ ಸಂರಕ್ಷಣೆ ಮನೋಭಾವ ಬೆಳೆಸಲಾಗುತ್ತಿದೆ ಎಂದು ತಿಳಿಸಿದರು. ಮಧ್ಯಾಹ್ನದ ಬಿಸಿಯೂಟಕ್ಕೆ ದಿನನಿತ್ಯ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ಬಗೆಯ ಸೊಪ್ಪು, ತರಕಾರಿಯನ್ನು ಬಳಕೆ ಮಾಡುತ್ತೇವೆ ಇದರಿಂದ ಮಕ್ಕಳಿಗೆ ಉತ್ತಮ ಪೌಷ್ಠಿಕಾಂಶಗಳು ದೊರೆಯುತ್ತಿವೆ ಎಂದು ಮಾಹಿತಿ ನೀಡಿದರು.

# ರಾಷ್ಟ್ರ ಮಟ್ಟದ ಕರಾಟೆ ಪಂದ್ಯಾವಳಿಯಲ್ಲಿ ದ್ವಿತೀಯ ಸ್ಥಾನ

**ಚಿಕ್ಕಮಗಳೂರು:** ಹೊಯ್ಸಳ ಕಪ್-2025ರ 6ನೇ ಅಖಿಲ ಭಾರತ ಓಪನ್ ಕರಾಟೆ ಚಾಂಪಿಯನ್‌ಶಿಪ್ ಇವರ ಸಹಯೋಗದಲ್ಲಿ ಬೇಲೂರು ನಗರದ ಒಳಾಂಗಣ ಕ್ರೀಡಾಂಗಣದಲ್ಲಿ ನೆಡೆದ ಬೇಲೂರು ಓಪನ್ 6ನೇ ರಾಷ್ಟ್ರ ಮಟ್ಟದ ಕರಾಟೆ ಪಂದ್ಯಾವಳಿ ಜಾಕಿರ್ ಮತ್ತು ಜಹೀರ್ ಮೆರೂನ್ ಬೆಲ್ಟ್ ವಿಭಾಗದಲ್ಲಿ ದ್ವಿತೀಯ ಹಾಗೂ ಕತ ದ್ವಿತೀಯ ಸ್ಥಾನ, ಪಡೆದು ರಾಷ್ಟ್ರ ಮಟ್ಟದ ಪ್ರಶಸ್ತಿಯನ್ನು ಗಳಿಸಿದ್ದಾರೆ. ಚಿಕ್ಕಮಗಳೂರು ತಾಲ್ಲೂಕಿನ ನಿವಾಸಿಗಳಾದ ಜಮೀರ್ ಹಾಗೂ ಶಾಹಿನಾ ಇವರ ಮಕ್ಕಳಾದ ಇವರು ಬಾನುಪ್ರಕಾಶ್ ಶಾಲೆಯಲ್ಲಿ ಜಾಕಿರ್ 9ನೇ ತರಗತಿ, ಉಪ್ಪಳ್ಳಿಯ ಸರ್ಕಾರಿ ಶಾಲೆಯಲ್ಲಿ 7 ಜಹೀರ್ ನೇ ತರಗತಿ ವ್ಯಾಸಂಗ ಮಾಡುತ್ತಿದ್ದಾರೆ, ಶೋಟಕಾನ್ ಕರಾಟೆ ಶಾಲೆಯಲ್ಲಿ ವೆಂಕಟೇಶ್.ಸಿ.ಆರ್ ರವರ ಮಾರ್ಗದರ್ಶನದಲ್ಲಿ ತರಬೇತಿ ಪಡೆಯುತ್ತಿದ್ದಾರೆ.



# ಕೃಷಿ ಭಾಗ್ಯ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಹಾವೇರಿ:** ಕೃಷಿ ಭಾಗ್ಯ ಯೋಜನೆ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಲಾಗಿದ್ದು, ಕ್ಷೇತ್ರ ಬದು ನಿರ್ಮಾಣ, ಕೃಷಿ ಹೊಂಡ ನಿರ್ಮಾಣ, ನೀರು ಇಂಗದಂತೆ ತಡೆಯಲು ಕೃಷಿ ಹೊಂಡಕ್ಕೆ ಪಾಲಿಥೀನ್ ಹೊದಿಕೆ, ಸುರಕ್ಷತೆಗಾಗಿ ಕೃಷಿ ಹೊಂಡದ ಸುತ್ತಲು ತಂತಿ ಬೇಲಿ ನಿರ್ಮಾಣ, ಹೊಂಡದಿಂದ ನೀರು ಎತ್ತಲು ಡಿಸೇಲ್ ಪಂಪಸೆಟ್ ಬಳಕೆ, ಹಾಗೂ ಬೆಳೆಗಳಿಗೆ ನೀರು ಹಾಯಿಸಲು ಸಿಂಕರ್ ಘಟಕ ಹೀಗೆ ಒಟ್ಟು 6 ಘಟಕಗಳನ್ನು ಕೃಷಿ ಭಾಗ್ಯ ಪ್ಯಾಕೆಜ್ ನಲ್ಲಿ ರೈತರು ಕಡ್ಡಾಯವಾಗಿ ಅಳವಡಿಸಿಕೊಳ್ಳಬಹುದಾಗಿದೆ. ಸಾಮಾನ್ಯ ವರ್ಗದ ರೈತರಿಗೆ ಶೇ.40 ರಿಂದ ಶೇ.90 ರವರೆಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ರೈತರಿಗೆ ಶೇ.50 ರಿಂದ ಶೇ.90 ರವರೆಗೆ ಸಹಾಯಧನವನ್ನು ನೀಡಲಾಗುವುದು. ಆಸಕ್ತ ರೈತರು ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ದಾಖಲಾತಿಗಳೊಂದಿಗೆ ಸಂಬಂಧಪಟ್ಟ ಹೋಬಳಿಯ ರೈತ ಸಂಪರ್ಕ ಕೇಂದ್ರಗಳಿಗೆ ನೀಡಬಹುದಾಗಿರುತ್ತದೆ. ನಿಗದಿತ ಗುರಿಗಿಂತ ಹೆಚ್ಚಿನ ಅರ್ಜಿಗಳು ಸ್ವೀಕೃತವಾಗಿದ್ದಲ್ಲಿ ವಿಯಮಾನುಸಾರ ಫಲಾನುಭವಿಗಳನ್ನು ಆಯ್ಕೆ ಮಾಡಲಾಗುವುದು. ಕೆ. ಕಿಸಾನ್ ತಂತ್ರಾಂಶದಲ್ಲಿ ನೋಂದಾಯಿಸಿದ ಅರ್ಹ ಅರ್ಜಿಗಳನ್ನು ಆಯ್ಕೆ ಮಾಡಿ ಕ್ಷೇತ್ರ ಪರಿಶೀಲನೆ ಕೈಗೊಂಡು ಅರ್ಹ ರೈತರಿಗೆ ತಂತ್ರಾಂಶದ ಮೂಲಕವೇ ಕಾರ್ಯಾದೇಶವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಹಾಗೂ ತಾಲುಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಸಂಪರ್ಕಿಸಬಹುದಾಗಿರುತ್ತದೆ ಎಂದು ಹಾವೇರಿ ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.18 ಜಿಲ್ಲಾಮಟ್ಟದ ಪ್ರಬಂಧ ಸ್ಪರ್ಧೆ

**ಚಿಕ್ಕಮಗಳೂರು:** ರಾಷ್ಟ್ರೀಯ ಮತದಾರರ ದಿನಾಚರಣೆಯ ಅಂಗವಾಗಿ ತಾಲ್ಲೂಕು ಹಂತದಲ್ಲಿ ನಡೆದ ಕನ್ನಡ ಪ್ರಬಂಧ ಸ್ಪರ್ಧೆಯಲ್ಲಿ ಪ್ರೌಢಶಾಲಾ ವಿಭಾಗ, ಪದವಿ ಪೂರ್ವ ವಿಭಾಗ ಮತ್ತು ಪದವಿ ಮತ್ತು ಸ್ನಾತಕೋತ್ತರ ವಿಭಾಗದಲ್ಲಿ ಪ್ರಥಮ ಸ್ಥಾನ ಪಡೆದು ವಿಜೇತರಾದ ವಿದ್ಯಾರ್ಥಿಗಳಿಗೆ ಡಿಸೆಂಬರ್ 18 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಬಸವನಹಳ್ಳಿಯ ಸರ್ಕಾರಿ ಬಾಲಕಿಯರ ಪ.ಪೂ.ಕಾಲೇಜಿ(ಪ್ರೌಢಶಾಲಾ ವಿಭಾಗ) ನಲ್ಲಿ ಜಿಲ್ಲಾ ಹಂತದ ಕನ್ನಡ ಪ್ರಬಂಧ ಸ್ಪರ್ಧೆಯನ್ನು ಆಯೋಜನೆ ಮಾಡಲಾಗಿದೆ.

2025-26 ನೇ ಸಾಲಿಗೆ ಭವಿ?ದ ಯುವ ಮತದಾರರಲ್ಲಿ ಚುನಾವಣೆ ಮತ್ತು ಮತದಾನ ಪ್ರಕ್ರಿಯೆಗಳಿಗೆ ಸಂಬಂಧಿಸಿದಂತೆ ಜಾಗೃತಿ ಮೂಡಿಸುವ ಸಲುವಾಗಿ ಸಾಕ್ಷರತಾ ಸಂಘಗಳ ಮೂಲಕ ಈ ಸ್ಪರ್ಧೆಯನ್ನು ಆಯೋಜಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ಸರ್ಕಾರ

## ಪಿ.ಎಂ. ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಟಿ ಬಿ ವೃತ್ತ ದೇವನಾಯಕನಹಳ್ಳಿ

ಹೊನ್ನಾಳಿ ತಾಲ್ಲೂಕು ದಾವಣಗೆರೆ ಜಿಲ್ಲೆ

### ಪ್ರಕಟಣೆ

ಪಿ.ಎಂ. ಶ್ರೀ ಯೋಜನೆಯಡಿಯಲ್ಲಿ 2025-26ನೇ ಶೈಕ್ಷಣಿಕ ವರ್ಷಕ್ಕಾಗಿ ಒಟ್ಟು 5 ತಾತ್ಕಾಲಿಕ ಅತಿಥಿ ಶಿಕ್ಷಕರ ಹುದ್ದೆಗಳು ಮಂಜೂರಾಗಿದ್ದು ಆಸಕ್ತ ಅಭ್ಯರ್ಥಿಗಳು ದಿನಾಂಕ 15-12-2025 ರಿಂದ 20-12-2025 ರ ಸಾಯಂಕಾಲ 5:00 ಗಂಟೆಯ ಒಳಗಾಗಿ ನಮ್ಮ ಶಾಲಾ ಕಛೇರಿಗೆ ತಮ್ಮ ಅರ್ಹತಾ ವಿದ್ಯಾರ್ಥಿಯ ಮೂಲ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಲು ಕೋರಿದೆ. ದಿನಾಂಕ 20-12-2025 ರ ಸಾಯಂಕಾಲ 5:00 ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ನೇಮಕಗೊಂಡ ಸದರಿ ಹುದ್ದೆಗಳ ಕಾಲಾವಧಿಯು 31 ಮಾರ್ಚ್ 2026 ರವರೆಗೆ ಮಾತ್ರ ಚಾಲ್ತಿಯಲ್ಲಿ ಇರುತ್ತದೆ. ಸದರಿ ಹುದ್ದೆಗಳ ವಿವರ ಈ ಕೆಳಗಿನಂತಿದೆ

| ಕ್ರಸಂ | ಹುದ್ದೆಯ ಹೆಸರು | ವಿದ್ಯಾರ್ಹತೆ | ವೇತನ | ಷರಾ |
|---|---|---|---|---|
| 1 | ಕಂಪ್ಯೂಟರ್ ಶಿಕ್ಷಕರು | ಪಿ.ಯು.ಸಿ ಉತ್ತೀರ್ಣ. ಕಂಪ್ಯೂಟರ್ ಶಿಕ್ಷಣದಲ್ಲಿ ಡಿಪ್ಲೋಮಾ | 12000/- | |
| 2 | ಅರ್ಟ್ ಮತ್ತು ಕ್ರಾಫ್ಟ್ ಶಿಕ್ಷಕರು | ಎಸ್.ಎಸ್ ಎಲ್.ಸಿ.ಉತ್ತೀರ್ಣ. ಸಂಬಂಧಿಸಿದ ಕ್ಷೇತ್ರದಲ್ಲಿ ಸರ್ಟಿಫಿಕೇಟ್ | 12000/- | |
| 3 | ನೃತ್ಯ ಮತ್ತು ಸಂಗೀತ ಶಿಕ್ಷಕರು | ಎಸ್.ಎಸ್ ಎಲ್.ಸಿ.ಉತ್ತೀರ್ಣ. ಸಂಬಂಧಿಸಿದ ಕ್ಷೇತ್ರದಲ್ಲಿ ಸರ್ಟಿಫಿಕೇಟ್ | 12000/- | |
| 4 | ಆಂಗ್ಲ ಭಾಷಾ ಸ್ಪೋಕನ್ ಇಂಗ್ಲೀಷ್ ಶಿಕ್ಷಕರು | ಇಂಗ್ಲೀಷ್ ಭಾಷೆಯನ್ನು ಒಂದು ಬೋಧನಾ ವಿಷಯವಾಗಿ ಆಯ್ಕೆ ಮಾಡಿಕೊಂಡು ಶಿಕ್ಷಣದಲ್ಲಿ ಪದವಿಯನ್ನು ಪಡೆದಿರಬೇಕು | 12000/- | |

ಅರ್ಜಿ ಸಲ್ಲಿಸುವ ಸ್ಥಳ : ಪಿ.ಎಂ.ಶ್ರೀ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಟಿಬಿಸಿ ದೇವನಾಯಕನಹಳ್ಳಿ,
ಹೊನ್ನಾಳಿ ತಾಲ್ಲೂಕು. ದಾವಣಗೆರೆ ಜಿಲ್ಲೆ
ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ :20-12-2025ರ ಸಾಯಂಕಾಲ 5:00 ಗಂಟೆಯ ಒಳಗೆ



ಸಂಜೀವಿನಿ ಕ್ಯಾನ್ಸರ್ ಸೇವಾ ಟ್ರಸ್ಟ್

ಸರಳ ಗ್ರಾಮ, ಆರಗ ಗ್ರಾಮ ಸಮೀಪ, ತೀರ್ಥಹಳ್ಳಿ, ತಾಲೂಕು, ಶಿವಮೊಗ್ಗ ಜಿಲ್ಲೆ
(ಮಂಗಳೂರು ಇನ್ಸಿಟ್ಯೂಟ್ ಆಫ್ ಆಂಕಾಲಜಿ ಸೂಪರ್ ಸ್ಪೆಷಾಲಿಟಿ ಕ್ಯಾನ್ಸರ್ ಆಸ್ಪತ್ರೆಯ ಅಂಗ ಸಂಸ್ಥೆ)

ಕ್ಯಾನ್ಸರ್ ಮಾಹಿತಿ ಕೇಂದ್ರದಲ್ಲಿ ಉಚಿತ ಸಲಹೆ ಹಾಗೂ ಮಾರ್ಗದರ್ಶನ

ಕ್ಯಾನ್ಸರ್ ರೋಗಿಗಳ ಪಾಲಿನ ಸೇವೆ ಮತ್ತು ಭರವಸೆಯ ಆಶಾಕಿರಣ

ಡಾ. ಡಿ ಸುರೇಶ್ ರಾವ್ ರವರ ಕನಸಿನ ಸಂಜೀವಿನಿ ಕ್ಯಾನ್ಸರ್ ಸೇವಾ ಟ್ರಸ್ಟ್‌ನಲ್ಲಿ ಲಭ್ಯವಿರುವ ಸೇವೆಗಳು



ಕ್ಯಾನ್ಸರ್ ಎಂದರೇನು? ಇದರ ಮುಖ್ಯ ಕಾರಣಗಳು ಮತ್ತು ಅಪಾಯಗಳು, ಆರಂಭಿಕ ಲಕ್ಷಣಗಳು ಗುರುತಿಸುವುದು, ತಡೆಗಟ್ಟುವ ಮಾರ್ಗಗಳು, ಚಿಕಿತ್ಸೆಯ ಅಗತ್ಯ ಅರಿವು ಮೂಡಿಸುವುದು, ಸಮಾಜದ ಪಾತ್ರ, ಜೊತೆಗೆ ಕ್ಯಾನ್ಸರ್ ರೋಗದ ಬಗ್ಗೆ ಜನರಲ್ಲಿರುವ ಭಯವನ್ನು ಹೋಗಲಾಡಿಸಿ, ಜನರಲ್ಲಿ ಧೈರ್ಯವನ್ನು ತರುವುದು, ಜನರಲ್ಲಿ ಕ್ಯಾನ್ಸರ್ ಬಗ್ಗೆ ಜಾಗೃತಿ ಮತ್ತು ಅದರ ಬಗ್ಗೆ ಶಿಕ್ಷಣದ ಅರಿವು ಮೂಡಿಸುವುದು, ರೋಗಿಗಳಿಗೆ ಆರ್ಥಿಕವಾಗಿ ತೊಂದರೆ ಇದ್ದರೆ ಆರ್ಥಿಕ ಸಹಾಯಾದ ಕುರಿತು ಮಾಹಿತಿ ನೀಡುವುದು.

**ಶಿವಮೊಗ್ಗ:** ನಂ.15, ನೆಲಮಹಡಿ, ಹೊಟೇಲ್ ಮಥುರಾ ಪ್ಯಾರಡೈಸ್, ಬಾಲರಾಜ ಅರಸ್ ರಸ್ತೆ, ಶಿವಮೊಗ್ಗ-577202 ಮೊ: 918951683508, **ಕೊಪ್ಪ:** 2ನೇ ಮಹಡಿ, ಸರ್ಕಾರಿ ಆಸ್ಪತ್ರೆ ಮುಂಭಾಗ, ಬಾಳಗಾಡಿ ರಸ್ತೆ, ಕೊಪ್ಪ-577126 ಮೊ: 918792836096, **ಕುಮಟ:** ಶಾಪ್ ನಂಬರ್ 7, ಶ್ರೀನಿವಾಸ ಕಾಂಪ್ಲೆಕ್ಸ್, ಗಿಬ್ಸ್ ಸರ್ಕಲ್ ಹತ್ತಿರ, ಎನ್. ಎಚ್ 66, ಕುಮಟ-581343, ಮೊ: 918951639325, **ರಾಣೆಬೆನ್ನೂರು:** ಗಂಗಾ ಸಹಕಾರಿ ಸಂಘ, ಹನಗೊಡಿಯವರ್ ಓಣಿ, ಶಂಕರ್ ಟಾಕಿಸ್ ಹತ್ತಿರ, ರಾಣೆಬೆನ್ನೂರು-581115, ಮೊ: 918904853106, **ಶಿಕಾರಿಪುರ:** ಮಾಸೂರು ಸರ್ಕಲ್ ಕುಲ್ಮಿಕೇರಿ, 3ನೇ ರೂಮ್, ಜಯನಗರ ಶಿಕಾರಿಪುರ-577427 ಮೊ: 918904655104

ನಮ್ಮ ಕ್ಯಾನ್ಸರ್ ಮಾಹಿತಿ ಕೇಂದ್ರಕ್ಕೆ ಆಗಮಿಸಿ ಮುಕ್ತವಾಗಿ ಮಾಹಿತಿ ಪಡೆಯಿರಿ

ಹೆಚ್ಚಿನ ಮಾಹಿತಿಗಾಗಿ 8762096205, 9980813910 ದೂರವಾಣಿಗೆ ಸಂಪರ್ಕಿಸಿ

# ವಿದ್ಯಾರ್ಥಿಗಳು ನಾಯಕತ್ವ ಗುಣ ಬೆಳೆಸಿಕೊಳ್ಳಿ



**ಬಳ್ಳಾರಿ:** ವಿದ್ಯಾರ್ಥಿಗಳಲ್ಲಿ ಸಮಾಜ ಸೇವೆ, ನಾಯಕತ್ವ ಗುಣ ಹಾಗೂ ಸಾಮಾಜಿಕ ಸೇವಾ ಮನೋಭಾವ ಬೆಳೆಸಲು ರಾಷ್ಟ್ರೀಯ ಸೇವಾ ಯೋಜನೆಯು ಹಗಲಿರುಳು ಶ್ರಮಿಸುತ್ತಿದೆ ಎಂದು ವಿಶ್ರೀಕೃವಿವಿ ಕುಲಪತಿಗಳಾದ ಪ್ರೊ ಎಂ ಮುನಿರಾಜು ಹೇಳಿದರು.

ವಿಶ್ವವಿದ್ಯಾಲಯದ ಡಾ. ಬಿ ಆರ್ ಅಂಬೇಡ್ಕರ್ ಸಭಾಂಗಣದಲ್ಲಿ ವಿವಿ ರಾಷ್ಟ್ರೀಯ ಸೇವಾ ಯೋಜನೆ ಕೋಶವು ಆಯೋಜಿಸಿದ್ದ ವಿಶ್ವವಿದ್ಯಾಲಯ ಮಟ್ಟದ ರಾಷ್ಟ್ರೀಯ ಸೇವಾ ಯೋಜನೆಯ 2023–24ನೇ ಸಾಲಿನ ಉತ್ತಮ ಎನ್‌ಎಸ್‌ಎಸ್. ಘಟಕ ಕಾರ್ಯಕ್ರಮ ಅಧಿಕಾರಿಗಳು ಮತ್ತು ಸ್ವಯಂ ಸೇವಕ/ಸೇವಕಿಯರಿಗೆ ಪ್ರಶಸ್ತಿ ಪ್ರದಾನ ಸಮಾರಂಭ ಹಾಗೂ ವಿವಿ ವ್ಯಾಪ್ತಿಗೆ ಒಳಪಡುವ ರಾ.ಸೇ.ಯೋ. ಘಟಕಗಳನ್ನು ಹೊಂದಿರುವ ಪದವಿ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ ಮತ್ತು ಘಟಕಗಳ ಕಾರ್ಯಕ್ರಮಧಿಕಾರಿಗಳಿಗೆ 'ಒಂದು ದಿನದ ನಾಯಕತ್ವ ತರಬೇತಿ ಶಿಬಿರ'ವನ್ನು ಗಣ್ಯರು ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿ ಚಾಲನೆ ನೀಡಿದರು.

ನಾಯಕತ್ವ ಗುಣ ಎಲ್ಲರಲ್ಲೂ ಕಾಣಲು ಸಾಧ್ಯವಿಲ್ಲ. ನಾಯಕತ್ವವನ್ನು ವಹಿಸಿಕೊಂಡಾಗ ನಾಯಕತ್ವದ ಪ್ರಜ್ಞೆ ಬೆಳೆಯುತ್ತದೆ. ಎಲ್ಲವನ್ನು ಮೆಟ್ಟಿ ನಿಲ್ಲುವವನೆ ನಿಜವಾದ ನಾಯಕ. ವಿದ್ಯಾರ್ಥಿಗಳನ್ನು ಶೈಕ್ಷಣಿಕ ಚಟುವಟಿಕೆಗಳಿಗೆ ಮಾತ್ರ ಸೀಮಿತವಾಗಿರಿಸದೆ ಸಾಮಾಜಿಕವಾಗಿ ತೊಡಗಿಸಿಕೊಳ್ಳಲು ಶಿಕ್ಷಕರು ಉತ್ತೇಜಿಸಬೇಕು ಎಂದು ಹೇಳಿದರು.

ವಿವಿಯ ಮೌಲ್ಯಮಾಪನ ಕುಲಸಚಿವರಾದ ಪ್ರೊ ಎನ್ ಎಂ ಸಾಲಿ ಮಾತನಾಡಿ, ವಿದ್ಯಾರ್ಥಿಗಳು ಸಾಮಾಜಿಕ ಜವಾಬ್ದಾರಿಯನ್ನು ಅರಿತುಕೊಳ್ಳಬೇಕು ಎಂಬುದು ಮಹಾತ್ಮ ಗಾಂಧೀಜಿಯವರ ಕನಸಾಗಿತ್ತು. ನಾಯಕನಾದವನು ತ್ಯಾಗ ಮನೋಭಾವವನ್ನು ಹೊಂದಿರಬೇಕು. ಎಲ್ಲರೊಂದಿಗೆ ಬೆರೆತು ಎಲ್ಲವನ್ನು ಸರಿದೂಗಿಸಿಕೊಂಡು ಹೋಗುವ ದಿಟ್ಟತನವಿರಬೇಕು ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ವಿಶ್ವವಿದ್ಯಾಲಯ ಮಟ್ಟದ ರಾಷ್ಟ್ರೀಯ ಸೇವಾ ಯೋಜನೆಯ 2023–24ನೇ ಸಾಲಿನ ಉತ್ತಮ ಎನ್‌ಎಸ್‌ಎಸ್ ಘಟಕ ಕಾರ್ಯಕ್ರಮ ಅಧಿಕಾರಿಗಳು ಮತ್ತು ಸ್ವಯಂ ಸೇವಕ/ಸೇವಕಿಯರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ರಾ.ಸೇ.ಯೋ. ಸಂಯೋಜನಾಧಿಕಾರಿಗಳಾದ ಡಾ ಕುಮಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ಬೆಂಗಳೂರಿನ ನ್ಯಾಷನಲ್ ಲಾ ಸ್ಕೂಲ್ ಆಫ್ ಇಂಡಿಯಾ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಾದ ಡಾ ಆರ್ ವಿ ಚಂದ್ರಶೇಖರ ವೇದಿಕೆಯಲ್ಲಿದ್ದರು.

ಕನ್ನಡ ಅಧ್ಯಯನ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ ಕೆ ಎಸ್ ಶಿವಕುಮಾರ ನಿರೂಪಿಸಿದರು. ಡಾ ಗಾದೆಪ್ಪ ವಂದಿಸಿದರು.

ವಿವಿಧ ನಿಕಾಯಗಳ ಡೀನರು, ವಿಭಾಗಗಳ ಮುಖ್ಯಸ್ಥರುಗಳು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ, ಸಂಶೋಧನಾ ವಿದ್ಯಾರ್ಥಿಗಳು, ವಿದ್ಯಾರ್ಥಿಗಳು ಇದ್ದರು.

### ಮಹಿಳೆಗೆ ಯಶಸ್ವಿ ಅಂಡಾಶಯ ಕ್ಯಾನ್ಸರ್ ಶಸ್ತ್ರಚಿಕಿತ್ಸೆ

# ರೋಗಿಗಳಿಗೆ ಬೇಕಾಗಿರುವುದು ಚಿಕಿತ್ಸೆ ಮಾತ್ರವಲ್ಲ ಗೌರವ, ಮಾನಸಿಕ ಬೆಂಬಲ ಡಾ. ಸುರೇಶ್

**ಶಿವಮೊಗ್ಗ:** ಕರ್ನಾಟಕದ 36 ವರ್ಷದ ಮಹಿಳೆಯೊಬ್ಬರು ಇತ್ತೀಚೆಗೆ ಮಂಗಳೂರು ಇನ್ಸ್ಟಿಟ್ಯೂಟ್ ಆಫ್ ಆಂಕೋಲಜಿ ತೀರ್ಥಹಳ್ಳಿ ಆಸ್ಪತ್ರೆಗೆ ಬಲ ಅಂಡಾಶಯದ ಗಡ್ಡೆಯೊಂದಿಗೆ ಆಸ್ಪತ್ರೆಗೆ ದಾಖಲಾಗಿದ್ದರು. ಈ ಸಂಕೀರ್ಣ ಶಸ್ತ್ರಚಿಕಿತ್ಸೆಯಲ್ಲಿ ಪರಿಣಾಮಗೊಂಡ ಅಂಡಾಶಯವನ್ನು ತೆಗೆದುಹಾಕುವುದು, ಇನ್ಫ್ರಾಕೋಲಿಕ್ ಓಮೆಂಟೆಕ್ಟಮಿ ಹಾಗೂ ಪೆಲ್ವಿಕ್ ಮತ್ತು ಪ್ಯಾರಾ–ಆರ್ಟಿಕ್ ಲಿಂಫ್ ನೋಡ್‌ಗಳ ಸಂಪೂರ್ಣ ಡಿಸೆಕ್ಷನ್ ಮಾಡಲಾಯಿತು. ಸುಮಾರು ಎಂಟು ಗಂಟೆಗಳ ಕಾಲ ನಡೆದ ಈ ದೊಡ್ಡ ಶಸ್ತ್ರಚಿಕಿತ್ಸೆಯನ್ನು ಹಿರಿಯ ಶಸ್ತ್ರಚಿಕಿತ್ಸಾ ಆಂಕೋಲಜಿಸ್ಟ್ ಡಾ. ವಿಶ್ವನಾಥ್ ಅವರ ನೇತೃತ್ವದಲ್ಲಿ,

ಡಾ. ದಿವ್ಯಾ ಮತ್ತು ಡಾ. ಭವ್ಯಾ ಅವರ ಸಹಕಾರದೊಂದಿಗೆ ಯಶಸ್ವಿಯಾಗಿ ನೆರವೇರಿಸಲಾಯಿತು. ಕ್ಯಾನ್ಸರ್ ಚಿಕಿತ್ಸೆ ನೀಡುವ ಜೊತೆಗೆ, ಗರ್ಭಾಶಯ ಮತ್ತು ವಿರುದ್ಧದ ಅಂಡಾಶಯವನ್ನು ಉಳಿಸುವ ಮೂಲಕ, ರೋಗಿಗೆ ಮುಂದಿನ ಜೀವನದಲ್ಲಿ ತಾಯಿಯಾಗುವ ಅವಕಾಶವನ್ನು ಕಲ್ಪಿಸಲಾಯಿತು.

ಯಶಸ್ವಿ ಶಸ್ತ್ರಚಿಕಿತ್ಸೆ ನಡೆಸಿದ ವೈದ್ಯರ ತಂಡವನ್ನು ಅಭಿನಂದಿಸಿ ಮಾತನಾಡಿದ ಆಸ್ಪತ್ರೆಯ ಮುಖ್ಯಸ್ಥರಾದ ಡಾ. ಸುರೇಶ್ ರಾವ್, ರೋಗವು ಹಂತ–1 (ಸ್ಟೇಜ್ 1) ನಲ್ಲಿ ಪತ್ತೆಯಾಗಿರುವುದರಿಂದ ಗುಣ ಪಡಿಸಲು ಸಹಾಯವಾಯಿತು. ಈ ಪ್ರಕರಣವು ವೈದ್ಯಕೀಯ ಸಾಧನೆಯಷ್ಟೇ ಅಲ್ಲ, ಸಮಾಜದ ಕಠಿಣ ಸತ್ಯವನ್ನೂ ಬಹಿರಂಗಪಡಿಸುತ್ತದೆ.



ಇಂದಿಗೂ ಕ್ಯಾನ್ಸರ್ ಅನ್ನು ಚಿಕಿತ್ಸೆಗೊಳಗಾಗುವ ರೋಗವೆಂದು ನೋಡದೆ, ಸಾಮಾಜಿಕ ಕಳಂಕವಾಗಿ ಕಾಣುವ ಮನೋಭಾವ ವಿಶೇಷವಾಗಿ ಮಹಿಳೆಯರ ವಿಷಯದಲ್ಲಿ ಇದೆ ಎಂದು ವಿಷಾದ ವ್ಯಕ್ತಪಡಿಸಿದರು. ಇಂದಿನ ವಿಜ್ಞಾನದಲ್ಲಿ, ಪ್ರಾರಂಭಿಕ ಹಂತದ ಕ್ಯಾನ್ಸರ್‌ಗಳು ಬಹುತೇಕ ಗುಣಮುಖವಾಗುವ ಸಾಧ್ಯತೆಯಿವೆ. ಜೊತೆಗೆ, ಸಂತಾನೋತ್ಪತ್ತಿ ಉಳಿಸುವ ಚಿಕಿತ್ಸೆಗಳೂ ಲಭ್ಯವಿವೆ. ರೋಗಿಗಳಿಗೆ ಬೇಕಾಗಿರುವುದು ಚಿಕಿತ್ಸೆ ಮಾತ್ರವಲ್ಲ ಗೌರವ, ಮಾನಸಿಕ ಬೆಂಬಲ ಮತ್ತು ಸಾಮಾಜಿಕಜೊತೆಗೆ, ಸಂತಾನೋತ್ಪತ್ತಿ ಉಳಿಸುವ ಚಿಕಿತ್ಸೆಗಳೂ ಲಭ್ಯವಿವೆ. ರೋಗಿಗಳಿಗೆ ಬೇಕಾಗಿರುವುದು ಚಿಕಿತ್ಸೆ ಮಾತ್ರವಲ್ಲ ಗೌರವ, ಮಾನಸಿಕ ಬೆಂಬಲ ಮತ್ತು ಸಾಮಾಜಿಕ ಅಂಗೀಕಾರ. ಆಸ್ಪತ್ರೆಗಳು ದೇಹವನ್ನು ಗುಣಪಡಿಸಬಹುದು.

ಆದರೆ ಸಮಾಜ ತನ್ನ ಚಿಂತನೆಗಳನ್ನು ಗುಣಪಡಿಸಿಕೊಳ್ಳಬೇಕು. ನಿಜವಾದ ಪ್ರಗತಿ ಎಂದರೆ ಕೇವಲ ಆಧುನಿಕ ಶಸ್ತ್ರಚಿಕಿತ್ಸೆ ಅಥವಾ ಸರ್ಕಾರಿ ಯೋಜನೆಗಳಲ್ಲ; ಸಂಕಷ್ಟದಲ್ಲಿರುವವರ ಪಕ್ಕದಲ್ಲಿ ನಿಲ್ಲುವ ಮಾನವೀಯ ಸಮಾಜವನ್ನು ನಿರ್ಮಿಸುವುದೇ ನಿಜವಾದ ಅಭಿವೃದ್ಧಿ ಎಂದರು.

## ಸಹಕಾರ ಮ್ಯಾನೇಜ್ಮೆಂಟ್ ಡಿಪ್ಲೋಮಾ ಹಾಗೂ ಹಾಸ್ಟೇಲ್ ಪ್ರವೇಶಕ್ಕೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಚಿಕ್ಕಬಳ್ಳಾಪುರ :** ಕರ್ನಾಟಕ ಇನ್ಸ್ಟಿಟ್ಯೂಟ್ ಆಫ್ ಕೋ ಆಪರೇಟಿವ್ ಮ್ಯಾನೇಜ್ಮೆಂಟ್ ಬೆಂಗಳೂರು ಸಹಕಾರ ತರಬೇತಿ ಸಂಸ್ಥೆಯು 2026 ರ ಜನವರಿಯಿಂದ 6 ತಿಂಗಳ ಅವಧಿಯ ರೆಗ್ಯುಲರ್ ಡಿಪ್ಲೋಮಾ ಇನ್ ಕೋ ಆಪರೇಟಿವ್ ಮ್ಯಾನೇಜ್ಮೆಂಟ್ ತರಬೇತಿಯನ್ನು ಪ್ರಾರಂಭಿಸಲಿದೆ. ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ ಹಾಗೂ ರಾಮನಗರ ಜಿಲ್ಲೆಗಳ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕನಿಷ್ಠ ಎಸ್ ಎಸ್ ಎಲ್ ಸಿ ಹಾಗೂ ಮೇಲ್ಪಟ್ಟ ವಿದ್ಯಾರ್ಹತೆಯುಳ್ಳ ಎಲ್ಲಾ ಅಭ್ಯರ್ಥಿಗಳು ಪ್ರವೇಶ ಪಡೆಯಲು ಅವಕಾಶವಿರುತ್ತದೆ. ಪ್ರವೇಶ ಪಡೆಯುವ ಎಲ್ಲಾ ಸಾಮಾನ್ಯ ವರ್ಗಗಳ ಅಭ್ಯರ್ಥಿಗಳಿಗೆ ಮಾಹೆಯಾನ ರೂ. 500 ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಮಾಸಿಕ ರೂ. 600 ಶಿಷ್ಯವೇತನ ನೀಡಲಾಗುವುದು.

ಪುರುಷರಿಗೆ ವಸತಿ (ಹಾಸ್ಟೇಲ್) ಸೌಲಭ್ಯ ಲಭ್ಯವಿರುತ್ತದೆ. ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕೊನೆಯ ದಿನವಾಗಿದೆ. ಅರ್ಜಿ ದೊರೆಯುವ ಸ್ಥಳ ಕೆ.ಐ.ಸಿ.ಎಂ. 1/3, ಎರಡನೇ ಮಹಡಿ, ಮೂರನೇ ಮುಖ್ಯರಸ್ತೆ, ಕನ್ನಡ ಸಾಹಿತ್ಯ ಪರಿಷತ್ ಹಿಂಭಾಗ ಮಕ್ಕಳ ಕೂಟ ಹತ್ತಿರ, ಚಾಮರಾಜಪೇಟೆ, ಬೆಂಗಳೂರು 560018. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080–35541407, 9449007661, 9036256781 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ವೃತ್ತಿಪರ ಕುಶಲಕರ್ಮಿಗಳಿಂದ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2025–26ನೇ ಸಾಲಿನ ಜಿಲ್ಲಾ ವಲಯ ಯೋಜನೆಯ ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತವಾಗಿ ಸುಧಾರಿತ ಸಲಕರಣೆ ಯೋಜನೆಯಡಿ ಗ್ರಾಮೀಣ ಪ್ರದೇಶದ ವೃತ್ತಿ ನಿರತ ಬಡಿಗೆ, ಗಾರೆ, ದೋಬಿ, ಕ್ಷೌರಿಕ, ಕಮ್ಮಾರಿಕೆ ಮತ್ತು ಕಲ್ಲುಕೆಲಸ ಕಸುಬುದಾರರಿಗೆ ಉಚಿತವಾಗಿ ಉಪಕರಣ ವಿತರಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಅವಧಿಯನ್ನು ಜನವರಿ 5 ರವರೆಗೆ ವಿಸ್ತರಿಸಲಾಗಿದೆ.

ಆಸಕ್ತರು ನಿಗದಿತ ದಿನಾಂಕದೊಳಗೆ ಅಗತ್ಯ ದಾಖಲೆಗಳೊಂದಿಗೆ ವೆಬ್ ಸೈಟ್ https://zpchikkaballapura.karnataka.gov.in, http://chikkaballapura.nic.in ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08156274401 / 7259161522 ಗೆ ಸಂಪರ್ಕಿಸಬಹುದು ಅಥವಾ ಹೆಚ್ಚಿನ ವಿವರ ಮತ್ತು ಸಹಾಯಕ್ಕಾಗಿ ಆಯಾ ತಾಲೂಕಿನ ಕೈಗಾರಿಕಾ ವಿಸ್ತರಣಾಧಿಕಾರಿಗಳಾದ ಚಿಕ್ಕಬಳ್ಳಾಪುರ, ಗೌರಿಬಿದನೂರು, ಬಾಗೇಪಲ್ಲಿ, ಗುಡಿಬಂಡೆ–9741234125 ಮತ್ತು ಚಿಂತಾಮಣಿ, ಶಿಡ್ಲಘಟ್ಟ–9972095093 ಗೆ ಸಂಪರ್ಕಿಸಬಹುದೆಂದು ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಶಿಕ್ಷಣ ವೆಂಬ ಮರ ಬಳಿಗೆ ಹಸಿರು ಉಸಿರು ಹಾಗೂ ಬೆಳಕಾಗಿರುತ್ತೆ ಜಿಲ್ಲಾಧಿಕಾರಿ ರವೀಂದ್ರ

## ಶಿವಲಿಂಗೇಶ್ವರ ಸ್ವಾಮಿ ಗದ್ದುಗೆ ಮಠದಲ್ಲಿ ಪ್ರತಿಷ್ಠಾಪನೆ

ಚನ್ನಗಿರಿ: ಪಟ್ಟಣದಲ್ಲಿ ಮಹೇಶ್ವರ ಜಾತ್ರೆ ನಿಮಿತ್ತ ಬುಧವಾರ ಸ್ವಾಮಿಯನ್ನು ಅಲಂಕೃತಪಲ್ಲಕ್ಕಿಯಲ್ಲಿ ಕೂರಿಸಿ ವಿವಿಧ ಕಲಾತಂಡಗಳೊಂದಿಗೆ ಪಟ್ಟಣದ ಶ್ರೀ ಹಾಲಸ್ವಾಮಿ ವಿರಕ್ತ ಮಠದಿಂದ ಚಿಕ್ಕಹುಲಿಕರೆ ಗ್ರಾಮದ ಹೊರವಲಯದಲ್ಲಿರುವ ಶ್ರೀ ಶಿವಲಿಂಗೇಶ್ವರ ಸ್ವಾಮಿ ಗದ್ದುಗೆ ಮಠಕ್ಕೆ ಕರೆತಂದು ಪ್ರತಿಷ್ಠಾಪಿಸಲಾಯಿತು. ಬೆಳಗ್ಗೆ 10ಕ್ಕೆ ಹಾಲಸ್ವಾಮಿ ವಿರಕ್ತ ಮಠದ ಬಸವಜಯಚಂದ್ರ ಸ್ವಾಮೀಜಿ ಸಾನ್ನಿಧ್ಯದಲ್ಲಿ 101 ಕುಂಭಗಳನ್ನು ಹೊತ್ತ ಮುತ್ತೈದೆಯರೊಂದಿಗೆ ಸ್ವಾಮಿಯನ್ನು ಕರೆತರಲಾಯಿತು. ಡಿ.19ರವರೆಗೆ ಮಹೇಶ್ವರ ಸ್ವಾಮಿ, ಶಿವಲಿಂಗೇಶ್ವರ ಸ್ವಾಮಿ, ಜಯದೇವ ಸ್ವಾಮಿಗಳ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸಲಾಗುತ್ತದೆ ಮತ್ತು ಭಕ್ತಾದಿಗಳಿಗೆ ದಾಸೋಹವಿರುತ್ತದೆ. ವೀರಶೈವ ಸಮಾಜದ ಮಾಜಿ ಅಧ್ಯಕ್ಷ ಸಾಗರದ ಶಿವಲಿಂಗಪ್ಪ, ಅಧ್ಯಕ್ಷ ರಾಜಶೇಖರಯ್ಯ, ಚಂದ್ರಯ್ಯ, ಎಚ್.ಬಿ. ರುದ್ರಯ್ಯ, ಕಾರಮಂಡಕ್ಕಿ ಸಂತೋಷ್, ಶ್ರೀನಿವಾಸ್, ನಾಗೇಂದ್ರಯ್ಯ, ಕೆ.ಪಿ.ಎಂ. ಗಿರೀಶ್, ಜವಳಿ ಮಹೇಶ್, ಜ್ಯೋತಿ ಪ್ರಸಾದ್, ಕೆ.ಪಿ.ಎಂ. ಲತಾ, ಕಮಲಾ ಹರೀಶ್, ಜ್ಯೋತಿ ಕೊಟ್ರೇಶ್ ಕೋರಿ, ಎಲ್.ಎಂ. ರೇಣುಕಾ, ಮಲ್ಲಿಕಾರ್ಜುನ್ ಇದ್ದರು.

## ಬಿಡಾಡಿ ದನಕರುಗಳನ್ನು ಸುಪರ್ದಿಯಲ್ಲಿಯೇ ಕಟ್ಟಿಕೊಳ್ಳಿ

**ಬಳ್ಳಾರಿ:** ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿನ ಬಿಡಾಡಿ ದನಕರುಗಳ ಮಾಲೀಕರು ತಮ್ಮ ಮನೆಯಲ್ಲಿಯೇ ಕಟ್ಟಿಕೊಂಡು ಪೋಷಿಸಬೇಕು ಎಂದು ಸಿರುಗುಪ್ಪ ನಗರಸಭೆ ಪೌರಾಯುಕ್ತ ಗಂಗಾಧರ ಅವರು ತಿಳಿಸಿದ್ದಾರೆ.

ಸಿರುಗುಪ್ಪ ಪಟ್ಟಣದಲ್ಲಿ ಬಿಡಾಡಿ ದನಕರುಗಳ ಹಾವಳಿ ಹೆಚ್ಚಾಗಿದ್ದು, ರಸ್ತೆ ಸೇರಿದಂತೆ ಸಾರ್ವಜನಿಕರಿಗೆ, ವಾಹನ ಸವಾರರಿಗೆ ಸಮಸ್ಯೆಯಾಗುತ್ತಿದೆ. ಹಾಗಾಗಿ ಮಾಲೀಕರು ತಮ್ಮ ತಮ್ಮ ದನಕರುಗಳನ್ನು ತಮ್ಮ ಸುಪರ್ದಿಯಲ್ಲಿಯೇ ಕಟ್ಟಿಕೊಳ್ಳಬೇಕು.
ತಪ್ಪಿದಲ್ಲಿ ಕಾನೂನು ರೀತ್ಯಾ ಕ್ರಮ ಜರುಗಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರೋಗ ಬಾಧಿತ ಗಿಡಗಳನ್ನು ಆಗಾಗ ಕಿತ್ತು ಸುಡಬೇಕು





**ಗದಗ :** ತೊಗರಿಯಲ್ಲಿ ಕಾಯಿಕೊರಕದ (ಹೆಲಿಕೊವರ್ಪಾ) ನಿರ್ವಹಣೆಗಾಗಿ ಶೇ. 25–50ರಷ್ಟು ಹೂ ಬಿಡುವ ಸಮಯದಲ್ಲಿ ಮತ್ತು ಕಾಯಿ ಬಲಿಯುವ ಹಂತದಲ್ಲಿದ್ದಾಗ ಮೀಟರಿಗೆ 1 ಕೀಡೆ ಅಥವಾ 10 ಗಿಡಗಳಲ್ಲಿ 1 ಕೀಡೆ ಕಂಡುಬಂದಾಗ ಅಥವಾ ಪ್ರತಿ ಗಿಡದಲ್ಲಿ 2 ತತ್ತಿ ಅಥವಾ ಒಂದು ಕೀಡೆ ಕಾಣಿಸಿಕೊಂಡರೆ ಮೊದಲನೆ ಸಿಂಪರಣೆಯಾಗಿ ತತ್ತಿ ನಾಶಕಗಳಾದ 0.6 ಗ್ರಾಂ. ಥೈಯೊಡಿಕಾರ್ಬ 75ಡಬ್ಲೂ.ಪಿ. ಅಥವಾ 2 ಮಿ.ಲೀ.ಪ್ರೊಪೆನೊಫಾಸ್ 50 ಇ.ಸಿ.ಅಥವಾ 0.6ಗ್ರಾಂ. ಮಿಥೋಮಿಲ್ 40 ಎಸ್.ಪಿ.ಯನ್ನು ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಬೇಕು.

ಕಡಲೆಯಲ್ಲಿ ಕಾಯಿಕೊರಕದ ನಿಯಂತ್ರಣಕ್ಕಾಗಿ ಪ್ರತಿ ಲೀಟರ ನೀರಿನಲ್ಲಿ 2 ಗ್ರಾಂ.ಇಮಾಮೆಕ್ಟಿನ್ ಬೆಂಝೋಯೇಟ್ ಬೆರೆಸಿ ಸಿಂಪಡಿಸಬೇಕು. ಬೆಳೆಯ 35 ರಿಂದ 40 ದಿವಸದ ಬೆಳೆಯಲ್ಲಿ ಕುಡಿ ಚಿವುಟಬೇಕು. ಹಾಗೂ 20 ಪಿಪಿಎಮ್ ಎನ್.ಎ.ಎ.ಸಿಂಪಡಿಸುವುದರಿಂದ ಹೆಚ್ಚಿನ ಇಳುವರಿ ಪಡೆಯಬಹುದು.

ಕಡಲೆಯಲ್ಲಿ ಕಾಯಿಕೊರಕದ ನಿರ್ವಹಣೆಗಾಗಿ : ಬೆಳೆಯು ಕಾಳು ಕಟ್ಟುವ ಹಂತದಲ್ಲಿದ್ದಾಗ ಪ್ರತಿ ಎಕರೆಗೆ 10 ಸೇರು ಚುರಿಮುರಿಯನ್ನು (ಮಂಡಕ್ಕಿ) ಹೊಲದ ತುಂಬೆಲ್ಲಾ ಚೆಲ್ಲುವುದರಿಂದ ಪಕ್ಷಿಗಳಿಗೆ ಕೀಡೆಗಳನ್ನು ತಿನ್ನಲು ಪ್ರೋತ್ಸಾಹಿಸಿದಂತೆ ಆಗುತ್ತದೆ. ಈ ಕೀಡೆಯು ಸರಾಸರಿ ಶೇ. 40 ರಿಂದ 50 ರಷ್ಟು ಹಾನಿ ಮಾಡುತ್ತದೆ.

ಕೀಟನಾಶಕಗಳಾದ 2.00 ಮಿ.ಲೀ. ಕ್ಲೋರಫೆನಾಪೈರ್ 24% ಎಸ್.ಸಿ. ಅಥವಾ 0.075 ಮಿ. ಲೀ ಫ್ಲೂಬೆಂಡಿಯಾಮೈಡ್ 39.35 ಎಸ್.ಸಿ ಅಥವಾ ಕ್ಲೋರೆಂಟ್ರಿನಾ ಲಿಪ್ರೋಲ್ 18.5 ಎಸ್.ಸಿ. 0.15 ಮಿ. ಲೀ. ಅಥವಾ 0.2 ಗ್ರಾಂ ಇಮಾಮೆಕ್ಟಿನ್ ಬೆಂಜೊಯೇಟ್ 5 ಎಸ್. ಜಿ. ಅಥವಾ 0.1 ಮಿ. ಲೀ. ಸ್ಪೈನೊಸ್ಯಾಡ್ 45 ಎಸ್.ಸಿ. ಅಥವಾ 0.3 ಮಿ.ಲೀ. ಇಂಡಾಕ್ಸಾಕಾರ್ಬ್ 14.5 ಎಸ್.ಸಿ. ಅಥವಾ 4 ಗ್ರಾಂ ಕಾರ್ಬರಿಲ್ 50 ಡಬು.□□ಪಿ. ಅಥವಾ 1.0 ಮಿ.ಲೀ. ಮಿಥೈಲ್ ಪ್ಯಾರಾಥಿಯಾನ್ 50 ಇ.ಸಿ. ಅಥವಾ 2 ಮಿ.ಲೀ. ಕ್ವಿನಾಲ್‌ಫಾಸ್ 25 ಇ.ಸಿ. ಅಥವಾ 2 ಮಿ.ಲೀ. ಮಿಥೊಮಿಲ್ 40 ಎಸ್.ಪಿ. ಅಥವಾ 2 ಮಿ.ಲೀ. ಪ್ರೊಫೆನೋಫಾಸ್ 50 ಇ. ಸಿ. ಅಥವಾ 1 ಗ್ರಾಂ ಅಸಿಫೇಟ್ 75 ಎಸ್.ಪಿ. ಅಥವಾ ಬೆಳ್ಳುಳ್ಳಿ ಮತ್ತು ಹಸಿಮೆಣಸಿನಕಾಯಿ ಕಷಾಯವನ್ನು 20 ಮಿ. ಲೀ. ಅಥವಾ ಹೆಲಿಕೋವರ್ಪಾ ಎನ್.ಪಿ.ವಿ (ಎನ್.ಬಿ.ಎ.ಐ.ಆರ್) 2.0 ಮಿ.ಲೀ. ಪ್ರತಿ ಲೀಟರ್ ನೀರಿನಲ್ಲಿ ಬೆರೆಸಿ ಸಿಂಪಡಿಸಬೇಕು. ಬೆಳ್ಳುಳ್ಳಿ ಮತ್ತು ಹಸಿ ಮೆಣಸಿನಕಾಯಿ ಕಷಾಯ ತಯಾರಿಸುವ ವಿಧಾನ : ಒಂದು ಕಿ.ಗ್ರಾಂ. ಬೆಳ್ಳುಳ್ಳಿ ಮತ್ತು ಒಂದು ಕಿ.ಗ್ರಾಂ. ಹಸಿ ಮೆಣಸಿನಕಾಯಿ ಕುಟ್ಟಿ 2 ಲೀಟರ್ ನೀರಿನಲ್ಲಿ 8–10 ತಾಸು ನೆನೆಸಿ ನಂತರ ಸೋಸಬೇಕು.

ನೆಟೆ ರೋಗ / ಸಿಡಿ ರೋಗ / ಸೊರಗು ರೋಗ ಮತ್ತು ಬೇರು ಕೊಳೆ ರೋಗ ನಿರ್ವಹಣೆಗಾಗಿ ರೋಗ ಬಾಧಿತ ಗಿಡಗಳನ್ನು ಆಗಾಗ ಕಿತ್ತು ಸುಡಬೇಕು. ಬೂದಿ ರೋಗದ ನಿರ್ವಹಣೆಗಾಗಿ ರೋಗ ಲಕ್ಷಣ ಕಂಡಾಗ 0.5 ಗ್ರಾಂ ಕಾರ್ಬನ್‌ಡೈಜಿಮ್ 50 ಡಬ್ಲ್ಯೂ.ಪಿ. ಒಂದು ಲೀಟರ್ ನೀರಲ್ಲಿ ಬೆರೆಸಿ ಸಿಂಪಡಿಸಬೇಕು.

ಕುಸುಬೆಯಲ್ಲಿ ಹೇನು ನಿರ್ವಹಣೆಗೆ : ಶೇ. 5 ರ ಬೇವಿನ ಬೀಜದ ಕಷಾಯ ಅಥವಾ ಶೇ.1 ರ ಹತ್ತಿಕಾಳು ಎಣ್ಣೆ (ಶೇ.0.2 ಸೋಪಿನ ದ್ರಾವಣದೊಂದಿಗೆ ಬೆರೆಸಿ) ಅಥವಾ 1.7 ಮಿ. ಲೀ ಡೈಮಿಥೊಯೇಟ್ 30 ಇ. ಸಿ. ಅಥವಾ 0.2 ಗ್ರಾಂ ಥೈಯಾಮಿಥಾಕ್ಸಾಮ್ 25 ಡಬ್ಲ್ಯು. ಜಿ. ಅಥವಾ 1 ಗ್ರಾಂ ಆಸಿಫೇಟ್ 75 ಎಸ್.ಪಿ. ಅಥವಾ 1 ಮಿ. ಲೀ. ಮೊನೊಕ್ರೊಟೋಫಾಸ್ 36 ಎಸ್. ಎಲ್. ಒಂದು ಲೀಟರ್ ನೀರಿಗೆ ಬೆರೆಸಿ ಬೆಳೆಗೆ ಸಿಂಪಡಿಸಬೇಕು. ಪ್ರತಿ ಎಕರೆಗೆ 200 ಲೀ. ಸಿಂಪರಣಾ ದ್ರಾವಣವನ್ನು ಬಳಸಬೇಕು. ನೀರಿನ ಅಭಾವವಿದ್ದಲ್ಲಿ ಎಕರೆಗೆ 8–10 ಕಿ. ಗ್ರಾಂ ನಂತೆ ಕ್ವಿನಾಲ್‌ಫಾಸ್ ಶೇ. 1.5 ರ ಪುಡಿ ಅಥವಾ ಮೆಲಾಥಿಯಾನ್ ಶೇ. 5 ರ ಪುಡಿಯನ್ನು ಬೆಳೆಯ ಮೇಲೆ ಬೆಳಗಿನ ಜಾವ ಧೂಳೀಕರಿಸುವುದು ಸೂಕ್ತ. ಎಲೆತಿನ್ನುವ ಹುಳುವಿನ ನಿಯಂತ್ರಣಕ್ಕೆ 0.3 ಮಿ. ಲೀ ಇಂಡಾಕ್ಸಾಕಾರ್ಬ್ 15 ಇ.. ಸಿ. ಪ್ರತಿ ಲೀಟರ್ ನೀರಲ್ಲಿ ಬೆರೆಸಿ ಸಿಂಪಡಿಸಬೇಕು. ಎಲೆ ಮಚ್ಚೆ ರೋಗ ಕಂಡುಬಂದಲ್ಲಿ 15 ದಿನಗಳ ಅಂತರದಲ್ಲಿ ಒಂದು ಅಥವಾ ಎರಡು ಸಲ 2 ಗ್ರಾಂ ಮ್ಯಾಂಕೋಜೆಬ್ 75 ಡಬ್ಲ್ಯೂ.ಪಿ. ನ್ನು ಒಂದು ಲೀ. ನೀರಿನಲ್ಲಿ ಕರಗಿಸಿ ಸಿಂಪಡಿಸಬೇಕು. ಎಲೆ ಚುಕ್ಕೆ ರೋಗ ಕಂಡುಬಂದಲ್ಲಿ ತಕ್ಷಣ 2 ಗ್ರಾಂ ಮ್ಯಾಂಕೋಜೆಬ್ 75 ಡಬ್ಲ್ಯೂ.ಪಿ. ನ್ನು ಒಂದು ಲೀ. ನೀರಿನಲ್ಲಿ ಕರಗಿಸಿ ಬೆಳೆಗೆ ಸಿಂಪಡಿಸಬೇಕು ಮತ್ತು ಇದೇ ಸಿಂಪರಣೆಯನ್ನು ರೋಗದ ತೀವ್ರತೆಗೆ ತಕ್ಕಂತೆ 15 ದಿನಗಳ ನಂತರ ಪುನರಾವರ್ತಿಸಬೇಕು.

ಕೀಟ ಹಾಗೂ ರೋಗ ಬಾಧೆಯ ಲಕ್ಷಣಗಳು ಕಂಡುಬಂದಲ್ಲಿ ಮಾತ್ರ ಸಸ್ಯ ಸಂರಕ್ಷಣಾ ಕ್ರಮಗಳನ್ನು ಕೈಗೊಳ್ಳಬೇಕು. ಯಾವ ಪ್ರದೇಶಗಳಲ್ಲಿ ಕೀಟ ಮತ್ತು ರೋಗದ ಬಾಧೆ ಪ್ರತಿ ವರ್ಷವೂ ತಪ್ಪದೇ ಬರುತ್ತದೆಯೋ ಅಂತಹ ಸಂದರ್ಭದಲ್ಲಿ ಕೀಟ ಹಾಗೂ ರೋಗಗಳು ಬರುವುದಕ್ಕೆ ಮೊದಲೇ ಸಸ್ಯ ಸಂರಕ್ಷಣಾ ಕ್ರಮ ತೆಗೆದುಕೊಳ್ಳುವುದು ಸೂಕ್ತ ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಾ.ಆರ್.ಎನ್. ಕೆಂಚರೆಡ್ಡಿ ಹೇಳಿಕೆ | ಚನ್ನಗಿರಿಯಲ್ಲಿ ತರಬೇತಿ ಕಾರ್ಯಕ್ರಮ

# ಜೇನು ಸಾಕಣೆ ಕೃಷಿ ಇಳುವರಿಗೂ ತರಲಿದೆ ತುಪ್ಪ

**ಚನ್ನಗಿರಿ :** ಜೇನು ನೊಣಗಳು ಪರಾಗಸ್ಪರ್ಶದ ಮೂಲಕ ಮಕರಂದ ತಯಾರಿಸುವುದರಿಂದ ಶೇ.30 ರಷ್ಟು ಹೆಚ್ಚುವರಿ ಇಳುವರಿ ಲಭ್ಯವಾಗುತ್ತದೆ ಎಂದು ಪೊನ್ನಂಪೇಟೆ ಕೃಷಿ ವಿಶ್ವ ವಿದ್ಯಾಲಯದ ವಿಸ್ತರಣಾ ಶಿಕ್ಷಣ ಘಟಕದ ಮುಖ್ಯಸ್ಥ ಡಾ.ಆರ್. ಎನ್. ಕೆಂಚರೆಡ್ಡಿ ತಿಳಿಸಿದರು.

ಶಿವಮೊಗ್ಗದ ಕೆಳದಿ ಶಿವಪ್ಪ ನಾಯಕ ಕೃಷಿ–ತೋಟಗಾರಿಕೆ ವಿವಿಯ ಕತ್ತಲಗೆರೆ ವಿಸ್ತರಣಾ ಶಿಕ್ಷಣ ಘಟಕ, ದಾವಣಗೆರೆ ಕೃಷಿ ಇಲಾಖೆ ಸಹಯೋಗದಡಿ ಕತ್ತಲಗೆರೆಯಲ್ಲಿ ಬುಧವಾರ ಹಮ್ಮಿ ಕೊಂಡಿದ್ದ ವೈಜ್ಞಾನಿಕ ಜೇನು ಕೃಷಿ ತರಬೇತಿಉದ್ಘಾಟಿಸಿ ಮಾತನಾಡಿದರು.

ಮಳೆ ಪ್ರಮಾಣ ಕಡಿಮೆ ಆಗುತ್ತಿರುವ ಈ ಸಂದರ್ಭದಲ್ಲಿ ರೈತರು ಏಕ ಬೆಳೆ ಪದ್ಧತಿ ಬಿಟ್ಟು ಬಹು ವಾರ್ಷಿಕ ಹಣ್ಣು, ತರಕಾರಿ, ಪುಷ್ಪ ಬೇಸಾಯದ ಕಡೆ ಗಮನ ಹರಿಸಿದಾಗ ಕಡಿಮೆ ವೆಚ್ಚದಲ್ಲಿ ಜೇನು ಕೃಷಿ ಕೈಗೊಳ್ಳಬಹುದು ಎಂದರು.

ಉಪಕಸುಬಾಗಿ ಆಯ್ಕೆ ಮಾಡಿಕೊಂಡರೆ ಹೆಚ್ಚಿನ ಲಾಭ ಗಳಿಸಬಹುದು. ಜೇನು ಸಾಕಣೆಯಿಂದ ಕೃಷಿ ಬೆಳೆಗಳ ಉತ್ಪಾದನೆ ಕೂಡ ಶೇ.20 ರಷ್ಟು ಹೆಚ್ಚಳವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಜೇನು ಸಂತತಿ ಕಾಪಾಡಲು ಪರಿಸರ ಪೀಡೆಗಳ ಸ್ನೇಹಿ ನಿರ್ವಹಣಾ ಕ್ರಮ ಅಳವಡಿಸಿಕೊಳ್ಳಬೇಕು. ಆಸಕ್ತರಿಗೆ ಕರ್ನಾಟಕ ತೋಟಗಾರಿಕೆ ಮತ್ತು ಇತರ ಸಂಸ್ಥೆಗಳು ಸಾಕಣೆ ವಿಧಾನ, ನಿರ್ವಹಣೆ, ಸಂಗ್ರಹಣೆ, ಮಾರಾಟ, ಪರಾಗಸ್ಪರ್ಶದ ಲಾಭ ಕುರಿತು ತಜ್ಞರಿಂದ ತರಬೇತಿ ನೀಡುತ್ತವೆ ಎಂದರು.

ಕೃಷಿ ಮತ್ತು ತೋಟಗಾರಿಕೆ ಸಂಸ್ಕರಣಾ 5.2.20. ಕೇಂದ್ರದ ಮುಖ್ಯಸ್ಥ ಅನಂದಕುಮಾರ್ ಅಧ್ಯಕ್ಷತೆ ವಹಿಸಿದ್ದರು. ಡಾ. ಗಂಗಪ್ಪಗೌಡ ಬಿರಾದಾರ, ಡಾ. ಸಣ್ಣತಿಮ್ಮಪ್ಪ, ಡಾ. ಮಂಜುನಾಥ್, ಡಾ. ಶರಣಪ್ಪ, ಡಾ

# ಎಸ್.ಪಿ.ಇ. ಕಾಯ್ದೆ ರಕ್ಷಿಸಲು ಆಗ್ರಹಿಸಿ ಪ್ರತಿಭಟನೆ

**ದಾವಣಗೆರೆ:** ಕರ್ನಾಟಕ ರಾಜ್ಯ ವೈದ್ಯಕೀಯ ಮತ್ತು ಮಾರಾಟ ಪ್ರತಿನಿಧಿಗಳ ಸಂಘದಿಂದ ಎಸ್.ಪಿ.ಇ. ಕಾಯ್ದೆಯನ್ನು ರಕ್ಷಿಸಲು ಆಗ್ರಹಿಸಿ ನಗರದ ರೈಲ್ವೆ ಸ್ಟೇಷನ್ ಪಕ್ಕದಲ್ಲಿರುವ ಎಸಿ ಕಚೇರಿಯ ಮುಂದೆ ಪ್ರತಿಭಟನಾ ಧರಣಿ ನಡೆಸಿ ಕೇಂದ್ರ ಕಾರ್ಮಿಕ ಸಚಿವರಿಗೆ ಎಸಿ ಅವರ ಮುಖಾಂತರ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಪ್ರತಿಭಟನಾಕಾರರು, ಭಾರತ ವೈದ್ಯಕೀಯ ಮತ್ತು ಮಾರಾಟ ಪ್ರತಿನಿಧಿಗಳ ಸಂಘಗಳ ಒಕ್ಕೂಟ ತನ್ನ ಸಂಯೋಜಿತ ಒಕ್ಕೂಟವಾದ ಕರ್ನಾಟಕ ರಾಜ್ಯ ವೈದ್ಯಕೀಯ ಮತ್ತು ಮಾರಾಟ ಪ್ರತಿನಿಧಿಗಳ ಸಂಘ ಜೊತೆಗೂಡಿ ಕೇಂದ್ರ ಸರ್ಕಾರದ ದಮನಕಾರಿ ಕಾರ್ಮಿಕ ಸಂಹಿತೆಗಳ ಜಾರಿಗೆ ತೀವ್ರ ಖಂಡನೆ ಹಾಗೂ 1976ರ ಎಸ್.ಪಿ.ಇ. ಕಾಯ್ದೆಯನ್ನು ರಕ್ಷಿಸಲು ದೇಶವ್ಯಾಪಿ ಪ್ರತಿಭಟನಾ ಕಾರ್ಯಕ್ರಮಗಳನ್ನು ನಡೆಸುತ್ತಿದೆ ಎಂದು ಹೇಳಿದರು.

ಕೇಂದ್ರೀಯ ಟ್ರೇಡ್ ಯೂನಿಯನ್‌ಗಳು, ಸ್ವತಂತ್ರ ಕೈಗಾರಿಕಾ ಫೆಡರೇಶನ್‌ಗಳು ಮತ್ತು ದೇಶದ ಲಕ್ಷಾಂತರ ಕಾರ್ಮಿಕರ ವ್ಯಾಪಕ ವಿರೋಧ ಇದ್ದರೂ ಕೇಂದ್ರದಲ್ಲಿರುವ ಮೋದಿ ಸರ್ಕಾರವು 21 ನವೆಂಬರ್ 2025 ರಿಂದ ಏಕಪಕ್ಷೀಯವಾಗಿ ನಾಲ್ಕು ಕಾರ್ಮಿಕ ಸಂಹಿತೆಗಳನ್ನ ಜಾರಿಗೆ ತಂದಿದೆ, ಈ ಕಾರ್ಮಿಕ ವಿರೋಧಿ ನಡೆಯನ್ನು ಕಟುವಾಗಿ ಟೀಕಿಸಿ ಈಗಾಗಲೇ ಕಾರ್ಮಿಕ ವಿರೋಧಿ ಕಾರ್ಮಿಕ ಸಂಹಿತೆಗಳ ಪ್ರತಿಗಳನ್ನು ದೇಶಾದ್ಯಂತ ಕಾರ್ಮಿಕ ಸಂಘಟನೆಗಳು ಸುಟ್ಟುಹಾಕುವ ಮೂಲಕ ದೇಶವ್ಯಾಪಿ ಪ್ರತಿಭಟನೆ ಮಾಡಿವೆ ಎಂದರು.

ಆದರೂ ಚುನಾವಣಾ ಬಾಂಡ್ ಹೆಸರಲ್ಲಿ ಸಾವಿರಾರು ಕೋಟಿ ಹಣ ಪಡೆದ ಕೇಂದ್ರದಲ್ಲಿ ಆಡಳಿತ ಮಾಡುತ್ತಿರುವ ಬಿಜೆಪಿ ಸರ್ಕಾರವು ಕಾರ್ಪೋರೇಟ್ ಕಂಪನಿಗಳ ಋಣ ತೀರಿಸುವ ಸಲುವಾಗಿ ಇದುವರೆಗೂ ಕಾರ್ಮಿಕ ವಿರೋಧಿ ಕಾರ್ಮಿಕ ಸಂಹಿತೆಗಳನ್ನು ವಾಪಸ್ ಪಡೆಯದೇ ಇರುವುದರಿಂದ ಎಫ್.ಎಂ.ಆರ್.ಎ.ಐ. ತನ್ನ ಹೋರಾಟವನ್ನು ದೇಶವ್ಯಾಪಿ ತೀವ್ರಗೊಳಿಸಿದೆ ಎಂದು ಮಾಹಿತಿ ನೀಡಿದರು.

ಔಷಧ ಮತ್ತು ಮಾರಾಟ ಪ್ರತಿನಿಧಿಗಳ ರಕ್ಷಣೆಗೆ ಇದ್ದಂತಹ ಟ್ರೇಡ್ ಯೂನಿಯನ್ ಅಧಿನಿಯಮ,1926; ಕೈಗಾರಿಕಾ ವಿವಾದ ಅಧಿನಿಯಮ,1947; ಮತ್ತು ಮಾರಾಟ ಪ್ರತಿನಿಧಿಗಳ (ಸರ್ವಿಸ್ ಕಂಡಿಶನ್ಸ್) ಅಧಿನಿಯಮ,1976 (ಎಸ್.ಪಿ.ಇ. ಅಧಿನಿಯಮ) ಸೇರಿದಂತೆ 29 ಅಸ್ತಿತ್ವದಲ್ಲಿರುವ ಕಾರ್ಮಿಕ ಕಾನೂನುಗಳನ್ನು ರದ್ದುಗೊಳಿಸಿದೆ. ದೀರ್ಘಕಾಲದಿಂದ ಕಾರ್ಮಿಕರ ರಕ್ಷಣೆಗೆ ಇದ್ದ ಈ ಕಾನೂನುಗಳಿಂದ ಕಾರ್ಮಿಕರು ತಮ್ಮ ಕೆಲಸಗಳನ್ನು ರಕ್ಷಿಸಿಕೊಳ್ಳಲು ಅಲ್ಪಮಟ್ಟಿಗೆ ಸಹಕಾರಿಯಾಗಿದ್ದವು, ಇಂತಹ ಸಂಧರ್ಭದಲ್ಲಿ ಕಾರ್ಮಿಕ ಕಾನೂನುಗಳನ್ನ ಬಲಪಡಿಸುವ ಬದಲು ದುರ್ಬಲಗೊಳಿಸಲು, ಸಾಮೂಹಿಕ ಚೌಕಾಸಿಯ ಹಕ್ಕುಗಳನ್ನು ಕುಗ್ಗಿಸಲು ಮತ್ತು ಮಾಲಿಕರ ಪಾಲಿಗೆ ಭಾರೀ ಅನುಕೂಲವಾಗುವಂತೆ ಕಾರ್ಮಿಕ ವಿರೋಧಿ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಉದ್ದೇಶಪೂರ್ವಕ ಜಾರಿಗೆ ತರುವ ಪ್ರಯತ್ನವನ್ನು ಕೇಂದ್ರ ಸರಕಾರವು ಮಾಡಿದೆ ಎಂದರು.

## ಸಿರುಗುಪ್ಪ ನಗರಸಭೆ: ಬೀದಿನಾಯಿ ದತ್ತು ಪಡೆದು ಪೋಷಿಸಲು ಆಸಕ್ತರಿದ್ದಲ್ಲಿ ಸಂಪರ್ಕಿಸಿ

**ಬಳ್ಳಾರಿ:** ಸಿರುಗುಪ್ಪ ನಗರಸಭೆ ವ್ಯಾಪ್ತಿಯಲ್ಲಿನ ಬೀದಿನಾಯಿಗಳನ್ನು ದತ್ತು ಪಡೆದು ಪೋಷಣೆ ಮಾಡಲು ಇಚ್ಛಿಸುವವರು ಹಾಗೂ ಆಶ್ರಯ ತಾಣದಲ್ಲಿರುವ ಬೀದಿನಾಯಿಗಳಿಗೆ ಆಹಾರ ಪೂರೈಸಲು ಇಚ್ಛಿಸುವ ಪ್ರಾಣಿಗಳ ಸಂರಕ್ಷಣೆ ಸಂಕಲ್ಪ ಹೊಂದಿರುವವರು, ಪ್ರಾಣಿಗಳ ಮೇಲೆ ದಯೆ ಇರುವವರು ಕೂಡಲೇ ಸಿರುಗುಪ್ಪ ನಗರಸಭೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದಾಗಿದೆ.
ಬೀದಿನಾಯಿಗಳಿಂದ ಸಾರ್ವಜನಿಕರಿಗೆ ಹಾಗೂ ಸಂಚರಿಸುವ ವಾಹನ ಸವಾರರಿಗೆ ಆಗುವ ತೊಂದರೆ ನಿಯಂತ್ರಿಸಲು ನಗರಸಭೆ ವತಿಯಿಂದ ಹಿಡಿದು ಅವುಗಳನ್ನು ಆಶ್ರಯತಾಣಕ್ಕೆ ಸಾಗಿಸಲಾಗುತ್ತಿದೆ. ಹಾಗಾಗಿ ಆಶ್ರಣ ತಾಣದಲ್ಲಿರುವ ಬೀದಿನಾಯಿಗಳಿಗೆ ಆಹಾರ ಪೂರೈಸಲು ಇಚ್ಛಿಸುವವರು ಇದ್ದಲ್ಲಿ ಎನ್.ಜಿ.ಓ ಸಂಘ ಸಂಸ್ಥೆಗಳು, ಪ್ರಾಣಿದಯಾ ಸಂಘಗಳು ಹಾಗೂ ಇತರೆ ಪ್ರಾಣಿ ಪ್ರಿಯರು ಸಿರುಗುಪ್ಪ ನಗರಸಭೆ ಕಾರ್ಯಾಲಯಕ್ಕೆ ಸಂಪರ್ಕಿಸಬಹುದು ಎಂದು ಸಿರುಗುಪ್ಪ ನಗರಭೆಯ ಪೌರಾಯುಕ್ತ ಗಂಗಾಧರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೃಷಿ ಭಾಗ್ಯ ಸೌಲಭ್ಯಕ್ಕೆ ಅರ್ಜಿ ಆಹ್ವಾನ

**ಹಾವೇರಿ:** ಕೃಷಿ ಭಾಗ್ಯ ಯೋಜನೆ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಲಾಗಿದ್ದು, ಕ್ಷೇತ್ರ ಬದು ನಿರ್ಮಾಣ, ಕೃಷಿ ಹೊಂಡ ನಿರ್ಮಾಣ, ನೀರು ಇಂಗದಂತೆ ತಡೆಯಲು ಕೃಷಿ ಹೊಂಡಕ್ಕೆ ಪಾಲಿಥೀನ್ ಹೊದಿಕೆ, ಸುರಕ್ಷತೆಗಾಗಿ ಕೃಷಿ ಹೊಂಡದ ಸುತ್ತಲು ತಂತಿ ಬೇಲಿ ನಿರ್ಮಾಣ, ಹೊಂಡದಿಂದ ನೀರು ಎತ್ತಲು ಡಿಸೇಲ್ ಪಂಪಸೆಟ್ ಬಳಕೆ, ಹಾಗೂ ಬೆಳೆಗಳಿಗೆ ನೀರು ಹಾಯಿಸಲು ಸಿಂಕರ್ ಘಟಕ ಹೀಗೆ ಒಟ್ಟು 6 ಘಟಕಗಳನ್ನು ಕೃಷಿ ಭಾಗ್ಯ ಪ್ಯಾಕೇಜ್ ನಲ್ಲಿ ರೈತರು ಕಡ್ಡಾಯವಾಗಿ ಅಳವಡಿಸಿಕೊಳ್ಳಬಹುದಾಗಿದೆ. ಸಾಮಾನ್ಯ ವರ್ಗದ ರೈತರಿಗೆ ಶೇ.40 ರಿಂದ ಶೇ.90 ರವರೆಗೆ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗದ ರೈತರಿಗೆ ಶೇ.50 ರಿಂದ ಶೇ.90 ರವರೆಗೆ ಸಹಾಯಧನವನ್ನು ನೀಡಲಾಗುವುದು. ಆಸಕ್ತ ರೈತರು ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ದಾಖಲಾತಿಗಳೊಂದಿಗೆ ಸಂಬಂಧಪಟ್ಟ ಹೋಬಳಿಯ ರೈತ ಸಂಪರ್ಕ ಕೇಂದ್ರಗಳಿಗೆ ನೀಡಬಹುದಾಗಿರುತ್ತದೆ. ನಿಗದಿತ ಗುರಿಗಿಂತ ಹೆಚ್ಚಿನ ಅರ್ಜಿಗಳು ಸ್ವೀಕೃತವಾಗಿದ್ದಲ್ಲಿ ವಿಯಮಾನುಸಾರ ಪಲಾನುಭವಿಗಳನ್ನು ಆಯ್ಕೆಮಾಡಲಾಗುವುದು. ಅರ್ಜಿಗಳನ್ನು ಜೇಷ್ಠತೆಯ ಅನುಸಾರ ಇಲಾಖೆಯ ಕೆ–ಕಿಸಾನ್ ತಂತ್ರಾಂಶದಲ್ಲಿ ನೋಂದಣಿ ಮಾಡಲಾಗುವುದು, ರೈತರ ಒಟ್ಟು ಹಿಡುವಳಿ ಕ್ಷೇತ್ರದ ಒಂದು ಸರ್ವೇ ನಂಬರನಲ್ಲಿ ಕನಿಷ್ಠ 1 ಎಕರೆ ಜಮೀನು ಇರಬೇಕು. ಈ ಹಿಂದೆ ಕೃಷಿ ಭಾಗ್ಯ ಹಾಗೂ ವಿವಿಧ ಯೋಜನೆಗಳಲ್ಲಿ ಕೃಷಿ ಹೊಂಡ ನಿರ್ಮಾಣ ಮಾಡಿಕೊಂಡಿದ್ದಲ್ಲಿ ಈ ಯೋಜನೆಗೆ ಅರ್ಹತೆ ಹೊಂದಿರುವುದಿಲ್ಲ, ಕೆ.ಕಿಸಾನ್ ತಂತ್ರಾಂಶದಲ್ಲಿ ನೋಂದಾಯಿಸಿದ ಅರ್ಹ ಅರ್ಜಿಗಳನ್ನು ಆಯ್ಕೆ ಮಾಡಿ ಕ್ಷೇತ್ರ ಪರಿಶೀಲನೆ ಕೈಗೊಂಡು ಅರ್ಹ ರೈತರಿಗೆ ತಂತ್ರಾಂಶದ ಮೂಲಕವೇ ಕಾರ್ಯಾದೇಶವನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಹಾಗೂ ತಾಲುಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ಸಂಪರ್ಕಿಸಬಹುದಾಗಿರುತ್ತದೆ ಎಂದು ಹಾವೇರಿ ತಾಲೂಕು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಶುಪಾಲನೆಯಲ್ಲಿ ಉದ್ಯಮಶೀಲತೆ, ವಿನೂತನ ತಂತ್ರಜ್ಞಾನಗಳ ತರಬೇತಿ

**ಗದಗ:** ಪಶುವೈದ್ಯಕೀಯ ಮಹಾವಿದ್ಯಾಲಯ, ಗದಗನಲ್ಲಿ ಪಶುಪಾಲಕ ರೈತರಿಗೆ ಮತ್ತು ಆಸಕ್ತ ಯುವಕ–ಯುವತಿಯರಿಗೆ ಪಶುಪಾಲನೆಯಲ್ಲಿ ಉದ್ಯಮಶೀಲತೆ ಮತ್ತು ವಿನೂತನ ತಂತ್ರಜ್ಞಾನಗಳು ಎಂಬ ವಿಷಯದ ಕುರಿತು ಡಿ. 22 ರಿಂದ ಡಿ. 23ರ ವರೆಗೆ ಎರಡು ದಿನಗಳ ತರಬೇತಿ ಕಾರ್ಯಕ್ರಮ ಆಯೋಜಿಸಲಾಗಿದೆ. ತರಬೇತಿಯು ಉಚಿತವಾಗಿರುತ್ತದೆ, ತರಬೇತಿಗೆ ಮುಂಚಿತವಾಗಿಯೇ ನೊಂದಾಯಿಸುವುದು ಕಡ್ಡಾಯ,

ಆಸಕ್ತ ರೈತರು ಸದರಿ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಲು, ಮೊಬೈಲ್, ವಾಟ್ಸಪ್ ಅಥವಾ ಈ–ಮೇಲ್ ಮೂಲಕ ತಮ್ಮ ವಿವರಗಳನ್ನು ಕಳುಹಿಸಿ ನೊಂದಣಿ ಮಾಡಿಸಬೇಕು. ತರಬೇತಿಯ ಬಗ್ಗೆ ಹೆಚ್ಚಿನ ಮಾಹಿತಿಯನ್ನು ಪಶುವೈದ್ಯಕೀಯ ವಿಸ್ತರಣ ಶಿಕ್ಷಣ ವಿಭಾಗ, ಪಶುವೈದ್ಯಕೀಯ ಮಹಾವಿದ್ಯಾಲಯದ ಮುಖ್ಯಸ್ಥರು ಡಾ.ಶಿವಕುಮಾರ ಕ ರಡ್ಡೇರ, ಸಂಪರ್ಕಿಸಬಹುದಾಗಿದೆ

## ಜನ ಸಂಪರ್ಕ ಸಭೆ

**ದಾವಣಗೆರೆ:** ದಾವಣಗೆರೆ–ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ವತಿಯಿಂದ ದಿನಾಂಕ ಪೆ:14 ರ ಶುಕ್ರವಾರ ದಂದು ಬೆಳಗ್ಗೆ 11:00 ಯಿಂದ ಮಧ್ಯಾಹ್ನ 2 ಗಂಟೆಯವರೆಗೆ ಹರಿಹರದ ನಗರ ಸಭೆ ಆವರಣದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ ಶೆಟ್ಟಿ ಅವರ ಅಧ್ಯಕ್ಷತೆಯಲ್ಲಿ ಜನ ಸಂಪರ್ಕ ಸಭೆಯನ್ನು ಏರ್ಪಡಿಸಲಾಗಿದೆ ಎಂದು ದುಡಾ ಆಯುಕ್ತರಾದ ಹುಲ್ಮನೆ ತಿಮ್ಮಣ್ಣ ಅವರು ತಿಳಿಸಿದರು.ದೂಡಾ ಎಲ್ಲಾ ಅಧಿಕಾರಿ ವರ್ಗದವರು, ನೌಕರರು ಅಂದು ಉಪಸ್ಥಿತರಿರುವರು ಹರಿಹರ ನಗರದ ಸುತ್ತಮುತ್ತಲಿನ ಜನರು ತಮ್ಮ ಕುಂದು ಕೊರತೆಗಳನ್ನು ಬಗೆಹರಿಸಿಕೊಳ್ಳುವುದರ ಮುಖಾಂತರ ಜನ ಸಂಪರ್ಕಸಭೆಯನ್ನು ಸದುಪಯೋಗಪಡಿಸಿಕೊಳ್ಳಬೇಕಾಗಿ ದೂಡಾ ಆಯುಕ್ತಾರಾದ ಹುಲ್ಮನೆ ತಿಮ್ಮಣ್ಣ ಅವರು ತಿಳಿಸಿದ್ದಾರೆ

## ಯುವನಿಧಿ ಸ್ವಯಂ ಘೋಷಣೆ ಡಿ.31 ರವರೆಗೆ ವಿಸ್ತರಣೆ

**ಚಿತ್ರದುರ್ಗ:** ಯುವನಿಧಿ ಸ್ವಯಂ ಘೋಷಣೆ ಮಾಡುವ ಪ್ರಕ್ರಿಯೆ ಡಿಸೆಂಬರ್–2025ರ ತಿಂಗಳಾಂತ್ಯಕ್ಕೆ ವಿಸ್ತರಣೆ ಮಾಡಲಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ ತಿಳಿಸಿದ್ದಾರೆ.

ಗ್ಯಾರಂಟಿ ಯೋಜನೆಯಾದ ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ಡಿ.ಬಿ.ಟಿ.ಮೂಲಕ ಹಣ ಸಂದಾಯ ಮಾಡಲಾಗುತ್ತಿದ್ದು, ಫಲಾನುಭವಿಗಳಿಗೆ ನಂತರದ ತಿಂಗಳುಗಳ ಯುವನಿಧಿ ಹಣ ಸಂದಾಯವಾಗಲು ಕಡ್ಡಾಯವಾಗಿ ಪ್ರತಿ ತಿಂಗಳ 25ನೇ ತಾರೀಖಿನೊಳಗೆ ಸ್ವಯಂ ದೃಢೀಕರಣ ಮಾಡಿಕೊಳ್ಳಬೇಕಾಗಿತ್ತು. ಆದರೆ ಡಿಸೆಂಬರ್ –2025ರ ಮಾಹೆಯಲ್ಲಿ ಸ್ವಯಂ ಘೋಷಣೆ ಮಾಡುವ ಮುನ್ನ ಹಲವು ಹೆಚ್ಚುವರಿ ಮಾಹಿತಿಯನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್ ಲೈನ್ ನಲ್ಲಿ ಸಲ್ಲಿಸಬೇಕಾಗಿದ್ದು, ಈ ಸಂಬಂಧ ಸ್ವಯಂ ಘೋಷಣೆ ಮಾಡುವ ಅವಧಿಯನ್ನು ಡಿಸೆಂಬರ್ 31 ರವರೆಗೆ ವಿಸ್ತರಿಸಲಾಗಿದೆ. ಯುವನಿಧಿ ಫಲಾನುಭವಿಗಳು ಈ ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಕಚೇರಿ, ಚಿತ್ರದುರ್ಗ–9448460786, 9945587060, 8105619020 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ ತಿಳಿಸಿದ್ದಾರೆ.

## ಇಂದು ಮಕ್ಕಳೊಂದಿಗೆ ಅಹವಾಲು ಸ್ವೀಕಾರ ಕಾರ್ಯಕ್ರಮ

**ಚಿತ್ರದುರ್ಗ:** ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರುಗಳ ಸಂಯುಕ್ತಾಶ್ರಯದಲ್ಲಿ ಇದೇ ಡಿ.19ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ತಾಲ್ಲೂಕು ಸಿರಿಗೆರೆಯ ಗುರುಶಾಂತೇಶ್ವರ ದಾಸೋಹ ಸಭಾಂಗಣದಲ್ಲಿ "ಮಕ್ಕಳೊಂದಿಗೆ ಅಹವಾಲು ಸ್ವೀಕಾರ ಕಾರ್ಯಕ್ರಮ" ಆಯೋಜಿಸಲಾಗಿದೆ.

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಸದಸ್ಯ ಡಾ.ಕೆ.ಟಿ.ತಿಪ್ಪೇಸ್ವಾಮಿ ಉದ್ಘಾಟನೆ ನೆರವೇರಿಸುವರು. ತಹಶೀಲ್ದಾರ್ ಪಿ.ಎಂ.ಗೋವಿಂದ ರಾಜ್ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕ ಡಾ.ಎಂ.ಜೆ.ಮಹೇಶ್, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಪಿ.ಶೀಲಾ, ತಾ.ಪಂ. ಇಒ ವೈ.ರವಿಕುಮಾರ್, ಬಿಇಒ ಹೆಚ್.ಗಿರಿಜಾ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಓ.ಪರಮೇಶ್ವರಪ್ಪ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪುಷ್ಪಲತಾ ಬಾವಿಮಠ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ಭರಮಸಾಗರ ಪೊಲೀಸ್ ವೃತ್ತ ನಿರೀಕ್ಷಕ ಪಿ.ಪ್ರಸಾದ್, ಕಾರ್ಮಿಕ ನಿರೀಕ್ಷಕ ಪಿ.ಭೀಮೇಶ್, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾದ ಎ.ಎಂ.ವೀಣಾ, ನಿರ್ಮಲ ಎಸ್.ಚಿಕ್ಕಣ್ಣನವರ್, ಸಿರಿಗೆರೆ ಮಠ ಆಡಳಿತಾಧಿಕಾರಿ ಹೆಚ್.ವಿ.ವಾಮದೇವಪ್ಪ, ಸಿರಿಗೆರೆ ಪಿಡಿಒ ಆರ್. ಉಮಾ ಭಾಗವಹಿಸುವರು ಎಂದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕೆ.ಪ್ರೇಮಮೂರ್ತಿ ತಿಳಿಸಿದ್ದಾರೆ.

## ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

**ಚಿಕ್ಕಬಳ್ಳಾಪುರ:** 2025–26ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆಗಳಾದ ಉದ್ಯೋಗಿನಿ, ಧನಶ್ರೀ, ಚೇತನಾ ಮತ್ತು ಲಿಂಗತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆಗಳಿಗೆ ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಜನವರಿ 15 ರವರೆಗೆ ವಿಸ್ತರಿಸಲಾಗಿದೆ.

ಅರ್ಜಿದಾರರು ಹತ್ತಿರದ ಬಾಪೂಜಿ ಸೇವಾ ಕೇಂದ್ರ, ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಕೇಂದ್ರಗಳಲ್ಲಿ http://sevasindhu.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಈ ಯೋಜನೆಗಳಿಗೆ ಅರ್ಜಿ ಸಲ್ಲಿಸಿರುವವರು ಮತ್ತೊಮ್ಮೆ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ.

ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಹಾಗೂ ಅಭಿವೃದ್ಧಿ ನಿರೀಕ್ಷಕರು, ಕನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ, 6 ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಆರ್. ವೆಂಕಟೇಶರೆಡ್ಡಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಸಿಬ್ಬಂದಿ ನೇಮಕಾತಿ ಆಯೋಗ, ಕೇಂದ್ರ ಸಶಸ್ತ್ರ ಪೊಲೀಸ್ (ಅಂಕಈ) ಮತ್ತು ಖಖಈ ಪಡೆಗಳಲ್ಲಿ ಕಾನ್‌ಸ್ಟೆಬಲ್ (ಉಆ) ಮತ್ತು ಅಸ್ಸಾಂ ರೈಫಲ್ಸ್ ನಲ್ಲಿ, ರೈಫಲ್ ಮ್ಯಾನ್ (ಉಆ) ಹುದ್ದೆಗಳ ನೇಮಕಾತಿಗಾಗಿ ಕಂಪ್ಯೂಟರ್ ಅಧಾರಿತ ಪರೀಕ್ಷೆಯನ್ನು ನಡೆಸುತ್ತಿದ್ದು, ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಆನ್ ಲೈನ್ ನ ವೆಬ್ ಸೈಟ್ ವಿಳಾಸ: ಠಣಣಠಿ:// ಛಿ.ರಠಠ.ಟಿ ಮತ್ತು ಠಣಣಠಿ://ಛಿ.ಟುಛಿ.ಟಿ ನಲ್ಲಿ ಅರ್ಜಿಗಳನ್ನು ಡಿಸೆಂಬರ್ 31 ರೊಳಗೆ ಸಲ್ಲಿಸಬಹುದು.

ಅರ್ಹತೆಗಳು: ವಯೋಮಿತಿ 18 ರಿಂದ 23 ವರ್ಷಗಳು (01/01/2026 ರಂತೆ), ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ, ಅರ್ಜಿ ಶುಲ್ಕ 100/– (ಮಹಿಳೆ/ SC/ST/EXS ವರ್ಗಗಳಿಗೆ ಯಾವುದೇ ಶುಲ್ಕವಿಲ್ಲ).

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 080–25502520 ಗೆ ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ಎಂ.ಪ್ರಸಾದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವನಿಧಿ ಫಲಾನುಭವಿಗಳು ಸ್ವಯಂ ಘೋಷಣೆ ಕಡ್ಡಾಯ

**ಚಿಕ್ಕಬಳ್ಳಾಪುರ:** ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ ಯುವನಿಧಿ ಯೋಜನೆಯ ನೋಂದಣಿ 2022–23 ರಿಂದಲ್ಲೇ ಪ್ರಾರಂಭವಾಗಿದ್ದು, 2022–23ನೇ ಸಾಲಿನಿಂದ ಉತ್ತೀರ್ಣರಾಗಿ 180 ದಿನಗಳು ಪೂರೈಸಿದ ಅಭ್ಯರ್ಥಿಗಳಿಗೆ ಜನವರಿ–2024 ರಿಂದ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ. ಕೆಲವು ತಿಂಗಳುಗಳ ಹಿಂದೆ ರಾಜ್ಯ ಸರ್ಕಾರವು 3 ತಿಂಗಳಿಗೆ ಒಮ್ಮೆ "ನಾನು ನಿರುದ್ಯೋಗಿ" ಮತ್ತು "ಸ್ವಯಂ ಉದ್ಯೋಗ ಹೊಂದಿರುವುದಿಲ್ಲ" ಎಂದು ಸ್ವಯಂ ಘೋಷಣೆ ಮಾಡುವಂತೆ ಸೂಚಿಸಿತ್ತು ಆದರೆ ಆ ಅದೇಶವನ್ನು ಪುನಃ ತಿದ್ದುಪಡಿಗೊಳಿಸಿ ದಿನಾಂಕ: 27/10/2025 ರಿಂದ, ಮುಂದೆ ಪ್ರತಿ ತಿಂಗಳು 25ನೇ ತಾರೀಖಿನ ಒಳಗೆ ಅಭ್ಯರ್ಥಿಯು "ನಾನು ನಿರುದ್ಯೋಗಿ" ಮತ್ತು "ಸ್ವಯಂ ಉದ್ಯೋಗ ಹೊಂದಿರುವುದಿಲ್ಲ" ಎಂದು ಆನ್ ಲೈನ್ ನಲ್ಲಿ (https://sevasindhugs.karnataka.gov.in) ಘೊಷಣೆ ಮಾಡಬೇಕೆಂದು ತಿಳಿಸಿದೆ. ಆದ್ದರಿಂದ ಎಲ್ಲ ಫಲಾನುಭವಿ ಅಭ್ಯರ್ಥಿಗಳು ಪ್ರತಿ ತಿಂಗಳು "ನಾನು ನಿರುದ್ಯೋಗಿ" "ಸ್ವಯಂ ಉದ್ಯೋಗ ಹೊಂದಿರುವುದಿಲ್ಲ" ಎಂದು ಆನ್ ಲೈನ್ ನಲ್ಲಿ ಘೊಷಣೆ ಮಾಡಬೇಕೆಂಬ ಮಾಹಿತಿಯನ್ನು ಫಲಾನುಭವಿಯಾಗಿರುವ ಎಲ್ಲಾ ಆಭ್ಯರ್ಥಿಗಳಿಗೆ ಈ ಮೂಲಕ ತಿಳಿಸಲಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಎಂ.ಪ್ರಸಾದ್ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 26 ವರ್ಷಗಳ ಸ್ನೇಹ ಸಂಗಮ

### ಗುರುವಂದನಾ ಕಾರ್ಯಕ್ರಮ ಮತ್ತು ಸ್ನೇಹ ಸಮ್ಮಿಲನ ಕಾರ್ಯಕ್ರಮ



**ದಾವಣಗೆರೆ:** ನಗರದ ಸರ್ಕಾರಿ ಪ್ರೌಢ ಶಾಲೆ ಅವರಗೆರೆಯ 1998–1999 ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳು ಗುರುವಂದನಾ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮದಲಿ. ವಿದ್ಯಾ ಕಲಿಸಿದ ಗುರುಗಳಿಂದ ಶಾಲಾ ಆವರಣದಲ್ಲಿ ಗಿಡಗಳನ್ನು ನೆಡುವ ಮೂಲಕ ಕಾರ್ಯಕ್ರಮ ಉದ್ಘಾಟಿಸಿದರು.

1997 –1999ರ ವರೆಗೆ ಸೇವೆ ಮಾಡಿದ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಪ್ರಾಂಶುಪಾಲರಾದ ಎಸ್, ಗೀತಾ. ನಿವೃತ ವಿಷಯ ಪರೀವಿಕ್ಷಕರು ಉಪನಿರ್ದೇಶಕ ಎ,ಎಸ್, ರೇಣುಕಾ ಪ್ರಸಾದ್. ನಿವೃತ ತಾಲ್ಲೂಕು ದೈಹಿಕ ಶಿಕ್ಷಣಾಧಿಕಾರಿ ಎ,ಎನ್,ಜಯಪ್ಪ ನಿವೃತ ಮುಖ್ಯೋಪಾಧ್ಯಾಯ ವೈ,ಎಸ್, ರುದ್ರಸ್ವಾಮಿ. ನಿವೃತ ಮುಖ್ಯೋಪಾಧ್ಯಾಯ ಆರ್, ಗಣೇಶ್‌ಚಾರ್. ನಿವೃತ ಮುಖ್ಯೋಪಾಧ್ಯಾಯ ಡಿ,ಹೆಚ್, ರಾಜೇಶ್ವರಿ. ನಿವೃತ ಉಪನ್ಯಾಸಕ ಹೆಚ್,ಎಂ, ಮಲ್ಲಿಕಾರ್ಜುನಯ್ಯ. ನಿವೃತ ಶಿಕ್ಷಕಿ ಗಿರಿಯಮ್ಮ. ನಿವೃತ ಶಿಕ್ಷಕಿ ಸಿ, ರಾಜೇಶ್ವರಿ. ಹಾಗೂ ಶಿಕ್ಷಕಿ ಕಲಾವತಿ. ಶಿಕ್ಷಕ ಕೋಟ್ರೇಶ್. ಅವರಿಗೆ ಸವಿನೆನಪಿನ ಕಾಣಿಕೆ ನೀಡಿ ಗುರುವಂದನೆ ಸಲ್ಲಿಸಿದ್ದರು.

ಸರ್ಕಾರಿ ಪ್ರೌಢ ಶಾಲೆ ಮುಖ್ಯೋಪಾಧ್ಯಾಯ ಕೇಶವಮೂರ್ತಿ ಅಧ್ಯಕ್ಷತೆಯಲ್ಲಿ ದೀಪಾ ಮತ್ತು ರಾಧಾ ಕಾರ್ಯಕ್ರಮವನ್ನು ನಡೆಸಿದರು.

ಕಾರ್ಯಕ್ರಮದಲ್ಲಿ ಎಸ್,ಡಿ,ಎಂ,ಸಿ, ಅಧ್ಯಕ್ಷ ಪರಮೇಶ್ವರಪ್ಪ, ಉಪಾಧ್ಯಕ್ಷ ಬಾರಪ್ಪ, ಹಾಗೂ ಸದಸ್ಯರು, ಶಾಲಾ ಶಿಕ್ಚಕರು, ಮತ್ತು ಸಿಂಬ್ಬದಿಗಳು, ಹಳೆಯ ವಿದ್ಯಾಥಿಗಳು, ಮಕ್ಕಳು ಇದ್ದರು.

## ಎಚ್.ಡಿ ಕುಮಾರಸ್ವಾಮಿ ಅವರ ಜನ್ಮದಿನದ ಅಂಗವಾಗಿ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ಪೆನ್ ವಿತರಣೆ



**ಗದಗ:** ಕೇಂದ್ರ ಸಚಿವರು ಹಾಗೂ ಮಾಜಿ ಮುಖ್ಯಮಂತ್ರಿಗಳಾದ ಎಚ್.ಡಿ.ಕುಮಾರಸ್ವಾಮಿ ಅವರ ಜನ್ಮದಿನ ಅಂಗವಾಗಿ ನಗರದ ಗಂಗಾಪೂರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ವಿದ್ಯಾರ್ಥಿಗಳಿಗೆ ಜೆಡಿಎಸ್ ಯುವ ಮುಖಂಡ ಪ್ರಭುರಾಜಗೌಡ ಪಾಟೀಲ ನೇತೃತ್ವದಲ್ಲಿ ನೋಟ್‌ಬುಕ್ ಪೆನ್ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜೆಡಿಎಸ್ ಜಿಲ್ಲಾ ಉಪಾಧ್ಯಕ್ಷ ಗಿರೀಶ ಸಂಶಿ, ತಾಲ್ಲೂಕ ಪ್ರಧಾನ ಕಾರ್ಯದರ್ಶಿ ಸಂತೋಷ ಪಾಟೀಲ, ಹಿರಿಯ ಮುಖಂಡರಾದ ರಮೇಶ ಹುಣಸಿಮರದ, ಅಜಯ ಕುಲಕರ್ಣಿ, ಸಂಘಟನಾ ಕಾರ್ಯದರ್ಶಿ ಕೆ.ಎಫ್.ದೊಡ್ಡಮನಿ, ರೋಣ ತಾಲ್ಲೂಕು ಅಧ್ಯಕ್ಷ ಜಿ.ಬಿ.ಹನುಮನಾಳ, ಸನ್ಮಾನಿತರಾದ ರಾಷ್ಟ್ರೀಯ ಪ್ಯಾರಾ ಓಲಂಪಿಕ್ ವಿಜೇತರಾದ ಮಾಲತಿ ಇನಾಮತಿ, ಮಹಾಂತೇಶ ಬೇವೂರು, ಆನಂದ ಬೇದ್ರೆ, ಶ್ರೀ ದುರ್ಗಾದೇವಿ ಶಿಕ್ಷಣ ಸಮಿತಿಯ ನಿರ್ದೇಶಕರಾದ ಮೋಹನ ಇಮರಾಪೂರ, ಸಲಹಾ ಸಮಿತಿಯ ಸದಸ್ಯರಾದ ಮುತ್ತು ಜಡಿ, ಲೋಕೇಶ ಮಲ್ಲಿಗವಾಡ, ಮುಖ್ಯೋಪಾಧ್ಯಾಯನಿ ಶ್ರೀಮತಿ ಎಚ್.ಎಂ.ನದಾಫ್, ಸಹ ಶಿಕ್ಷಕರಾದ ಮಂಜುಳಾ ಹಿಡ್ಕಿಮಠ, ರೇಖಾ ಅಂಗಡಿ, ಸುಧಾ ತಿರಕಣ್ಣವರ, ಶೋಭಾ ಸಂಬರಗಿಮಠ, ಮಂಜುಳಾ ದಾಸರ, ಅಂಜಲಿ ಕಲಾಲ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಎಸ್.ಪಿ.ಇ. ಕಾಯ್ದೆ ರಕ್ಷಿಸಲು ಆಗ್ರಹಿಸಿ ಪ್ರತಿಭಟನೆ

**ದಾವಣಗೆರೆ:** ಕರ್ನಾಟಕ ರಾಜ್ಯ ವೈದ್ಯಕೀಯ ಮತ್ತು ಮಾರಾಟ ಪ್ರತಿನಿಧಿಗಳ ಸಂಘದಿಂದ ಎಸ್.ಪಿ.ಇ. ಕಾಯ್ದೆಯನ್ನು ರಕ್ಷಿಸಲು ಆಗ್ರಹಿಸಿ ನಗರದ ರೈಲ್ವೆ ಸ್ಟೇಷನ್ ಪಕ್ಕದಲ್ಲಿರುವ ಎಸಿ ಕಚೇರಿಯ ಮುಂದೆ ಪ್ರತಿಭಟನಾ ಧರಣಿ ನಡೆಸಿ ಕೇಂದ್ರ ಕಾರ್ಮಿಕ ಸಚಿವರಿಗೆ ಎಸಿ ಅವರ ಮುಖಾಂತರ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಪ್ರತಿಭಟನಾಕಾರರು, ಭಾರತ ವೈದ್ಯಕೀಯ ಮತ್ತು ಮಾರಾಟ ಪ್ರತಿನಿಧಿಗಳ ಸಂಘಗಳ ಒಕ್ಕೂಟ ತನ್ನ ಸಂಯೋಜಿತ ಒಕ್ಕೂಟವಾದ ಕರ್ನಾಟಕ ರಾಜ್ಯ ವೈದ್ಯಕೀಯ ಮತ್ತು ಮಾರಾಟ ಪ್ರತಿನಿಧಿಗಳ ಸಂಘ ಜೊತೆಗೂಡಿ ಕೇಂದ್ರ ಸರ್ಕಾರದ ದಮನಕಾರಿ ಕಾರ್ಮಿಕ ಸಂಹಿತೆಗಳ ಜಾರಿಗೆ ತೀವ್ರ ಖಂಡನೆ ಹಾಗೂ 1976ರ ಎಸ್.ಪಿ.ಇ. ಕಾಯ್ದೆಯನ್ನು ರಕ್ಷಿಸಲು ದೇಶವ್ಯಾಪಿ ಪ್ರತಿಭಟನಾ ಕಾರ್ಯಕ್ರಮಗಳನ್ನು ನಡೆಸುತ್ತಿದೆ ಎಂದು ಹೇಳಿದರು.

ಕೇಂದ್ರೀಯ ಟ್ರೇಡ್ ಯೂನಿಯನ್‌ಗಳು, ಸ್ವತಂತ್ರ ಕೈಗಾರಿಕಾ ಫೆಡರೇಶನ್‌ಗಳು ಮತ್ತು ದೇಶದ ಲಕ್ಷಾಂತರ ಕಾರ್ಮಿಕರ ವ್ಯಾಪಕ ವಿರೋಧ ಇದ್ದರೂ ಕೇಂದ್ರದಲ್ಲಿರುವ ಮೋದಿ ಸರ್ಕಾರವು 21 ನವೆಂಬರ್ 2025 ರಿಂದ ಏಕಪಕ್ಷೀಯವಾಗಿ ನಾಲ್ಕು ಕಾರ್ಮಿಕ ಸಂಹಿತೆಗಳನ್ನ ಜಾರಿಗೆ ತಂದಿದೆ, ಈ ಕಾರ್ಮಿಕ ವಿರೋಧಿ ನಡೆಯನ್ನು ಕಟುವಾಗಿ ಟೀಕಿಸಿ ಈಗಾಗಲೇ ಕಾರ್ಮಿಕ ವಿರೋಧಿ ಕಾರ್ಮಿಕ ಸಂಹಿತೆಗಳ ಪ್ರತಿಗಳನ್ನು ದೇಶಾದ್ಯಂತ ಕಾರ್ಮಿಕ ಸಂಘಟನೆಗಳು ಸುಟ್ಟುಹಾಕುವ ಮೂಲಕ ದೇಶವ್ಯಾಪಿ ಪ್ರತಿಭಟನೆ ಮಾಡಿವೆ ಎಂದರು.

ಆದರೂ ಚುನಾವಣಾ ಬಾಂಡ್ ಹೆಸರಲ್ಲಿ ಸಾವಿರಾರು ಕೋಟಿ ಹಣ ಪಡೆದ ಕೇಂದ್ರದಲ್ಲಿ ಆಡಳಿತ ಮಾಡುತ್ತಿರುವ ಬಿಜೆಪಿ ಸರ್ಕಾರವು ಕಾರ್ಪೋರೇಟ್ ಕಂಪನಿಗಳ ಋಣ ತೀರಿಸುವ




ಸಲುವಾಗಿ ಇದುವರೆಗೂ ಕಾರ್ಮಿಕ ವಿರೋಧಿ ಕಾರ್ಮಿಕ ಸಂಹಿತೆಗಳನ್ನು ವಾಪಸ್ ಪಡೆಯದೇ ಇರುವುದರಿಂದ ಎಫ್.ಎಂ.ಆರ್.ಎ.ಐ. ತನ್ನ ಹೋರಾಟವನ್ನು ದೇಶವ್ಯಾಪಿ ತೀವ್ರಗೊಳಿಸಿದೆ ಎಂದು ಮಾಹಿತಿ ನೀಡಿದರು.

ಔಷಧ ಮತ್ತು ಮಾರಾಟ ಪ್ರತಿನಿಧಿಗಳ ರಕ್ಷಣೆಗೆ ಇದ್ದಂತಹ ಟ್ರೇಡ್ ಯೂನಿಯನ್ ಅಧಿನಿಯಮ,1926; ಕೈಗಾರಿಕಾ ವಿವಾದ ಅಧಿನಿಯಮ,1947; ಮತ್ತು ಮಾರಾಟ ಪ್ರತಿನಿಧಿಗಳ (ಸರ್ವಿಸ್ ಕಂಡಿಶನ್ಸ್) ಅಧಿನಿಯಮ,1976 (ಎಸ್.ಪಿ.ಇ. ಅಧಿನಿಯಮ) ಸೇರಿದಂತೆ 29 ಅಸ್ತಿತ್ವದಲ್ಲಿರುವ ಕಾರ್ಮಿಕ ಕಾನೂನುಗಳನ್ನು ರದ್ದುಗೊಳಿಸಿದೆ. ದೀರ್ಘಕಾಲದಿಂದ ಕಾರ್ಮಿಕರ ರಕ್ಷಣೆಗೆ ಇದ್ದ ಈ ಕಾನೂನುಗಳಿಂದ ಕಾರ್ಮಿಕರು ತಮ್ಮ ಕೆಲಸಗಳನ್ನು ರಕ್ಷಿಸಿಕೊಳ್ಳಲು ಅಲ್ಪಮಟ್ಟಿಗೆ ಸಹಕಾರಿಯಾಗಿದ್ದವು, ಇಂತಹ ಸಂಧರ್ಭದಲ್ಲಿ ಕಾರ್ಮಿಕ ಕಾನೂನುಗಳನ್ನ ಬಲಪಡಿಸುವ ಬದಲು ದುರ್ಬಲಗೊಳಿಸಲು, ಸಾಮೂಹಿಕ ಚೌಕಾಸಿಯ ಹಕ್ಕುಗಳನ್ನು ಕುಗ್ಗಿಸಲು ಮತ್ತು ಮಾಲಿಕರ ಪಾಲಿಗೆ ಭಾರೀ ಅನುಕೂಲವಾಗುವಂತೆ ಕಾರ್ಮಿಕ ವಿರೋಧಿ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಉದ್ದೇಶಪೂರ್ವಕ ಜಾರಿಗೆ ತರುವ ಪ್ರಯತ್ನವನ್ನು ಕೇಂದ್ರ ಸರಕಾರವು ಮಾಡಿದೆ ಎಂದರು.

ಆದ್ದರಿಂದ ಕೇಂದ್ರ ಸರ್ಕಾರವು ತಕ್ಷಣ ಕಾರ್ಪೋರೇಟ್ ಕಂಪನಿಗಳ ಪರವಾಗಿರುವ ಈ ನಾಲ್ಕೂ ಸಂಹಿತೆಗಳನ್ನ ವಾಪಾಸು ಪಡೆಯಬೇಕು ಮತ್ತು ರಾಜ್ಯ ಸರ್ಕಾರವು ತಕ್ಷಣ ಎಚ್ಚೆತ್ತು ಕಾರ್ಮಿಕ ವಿರೋಧಿ ಕಾರ್ಮಿಕ ಸಂಹಿತೆಗಳನ್ನ ರಾಜ್ಯದಲ್ಲಿ ಜಾರಿ ಮಾಡುವುದಿಲ್ಲ ಎಂದು ಕಾರ್ಮಿಕರಿಗೆ ಅಭಯ ನೀಡಬೇಕೆಂದು ಒತ್ತಾಯಿಸಿದರು.

ದೇಶದಾದ್ಯಂತ ಹಾಗೂ ಕರ್ನಾಟಕದೊಳಗೆ ಸಾಮಾನ್ಯ ಕಾರ್ಮಿಕರ ಮತ್ತು ವಿಶೇಷವಾಗಿ ಸೇಲ್ಸ್ ಪ್ರಮೋಷನ್ ಉದ್ಯೋಗಿಗಳ ಹಕ್ಕುಗಳು ಮತ್ತು ಹಿತಾಸಕ್ತಿಗಳ ರಕ್ಷಣೆಯ ಸವಾಲುಗಳನ್ನು ತಿಳಿಸಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳನ್ನು ಸಂವೇದನಾಶೀಲಯಿಂದ ನಮ್ಮ ಬೇಡಿಕೆಗಳನ್ನು ಈಡೇರಿಸಲು ಮುಂದಾಗಬೇಕೆಂದು ಆಗ್ರಹಿಸಿದರು.

ಈ ವೇಳೆ ಸಂಘದ ರಾಜ್ಯ ಅಧ್ಯಕ್ಷರಾದ ಆನಂದರಾಜು ಕೆ.ಹೆಚ್., ರಾಜ್ಯ ಕಾರ್ಯದರ್ಶಿ ವೆಂಕಟೇಶ್ ಎಂ., ಘಟಕದ ಕಾರ್ಯದರ್ಶಿ ಶ್ರೀಧರ ಟಿ, ರಹಮತ್, ಪ್ರವೀಣ್, ಪ್ರಶಾಂತ್, ಶಶಿಧರ, ಅರುಣ್, ಗುರುರಾಜ್, ಜಗದೀಶ್ ಇತರರು ಇದ್ದರು.

## ಯುವನಿಧಿ ಸ್ವಯಂ ಘೋಷಣೆ: ಡಿ.31 ರವರೆಗೆ ವಿಸ್ತರಣೆ

**ಚಿತ್ರದುರ್ಗ:** ಯುವನಿಧಿ ಸ್ವಯಂ ಘೋಷಣೆ ಮಾಡುವ ಪ್ರಕ್ರಿಯೆ ಡಿಸೆಂಬರ್–2025ರ ತಿಂಗಳಾಂತ್ಯಕ್ಕೆ ವಿಸ್ತರಣೆ ಮಾಡಲಾಗಿದೆ ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ ತಿಳಿಸಿದ್ದಾರೆ.ಗ್ಯಾರಂಟಿ ಯೋಜನೆಯಾದ ಯುವನಿಧಿ ಯೋಜನೆಯ ಫಲಾನುಭವಿಗಳಿಗೆ ಡಿ.ಬಿ.ಟಿ.ಮೂಲಕ ಹಣ ಸಂದಾಯ ಮಾಡಲಾಗುತ್ತಿದ್ದು, ಫಲಾನುಭವಿಗಳಿಗೆ ನಂತರದ ತಿಂಗಳುಗಳ ಯುವನಿಧಿ ಹಣ ಸಂದಾಯವಾಗಲು ಕಡ್ಡಾಯವಾಗಿ ಪ್ರತಿ ತಿಂಗಳ 25ನೇ ತಾರೀಖಿನೊಳಗೆ ಸ್ವಯಂ ದೃಢೀಕರಣ ಮಾಡಿಕೊಳ್ಳಬೇಕಾಗಿತ್ತು. ಆದರೆ ಡಿಸೆಂಬರ್ –2025ರ ಮಾಹೆಯಲ್ಲಿ ಸ್ವಯಂ ಘೋಷಣೆ ಮಾಡುವ ಮುನ್ನ ಹಲವು ಹೆಚ್ಚುವರಿ ಮಾಹಿತಿಯನ್ನು ಸೇವಾ ಸಿಂಧು ಪೋರ್ಟಲ್‌ನಲ್ಲಿ ಆನ್ ಲೈನ್ ನಲ್ಲಿ ಸಲ್ಲಿಸಬೇಕಾಗಿದ್ದು, ಈ ಸಂಬಂಧ ಸ್ವಯಂ ಘೋಷಣೆ ಮಾಡುವ ಅವಧಿಯನ್ನು ಡಿಸೆಂಬರ್ 31 ರವರೆಗೆ ವಿಸ್ತರಿಸಲಾಗಿದೆ.

ಯುವನಿಧಿ ಫಲಾನುಭವಿಗಳು ಈ ಯೋಜನೆಯ ಸದ್ಬಳಕೆ ಮಾಡಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಕಚೇರಿ, ಚಿತ್ರದುರ್ಗ–9448460786, 9945587060, 8105619020 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ ತಿಳಿಸಿದ್ದಾರೆ.

## ಅಹವಾಲು ಸ್ವೀಕಾರ ಕಾರ್ಯಕ್ರಮ

**ಚಿತ್ರದುರ್ಗ:** ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಇವರುಗಳ ಸಂಯುಕ್ತಾಶ್ರಯದಲ್ಲಿ ಇದೇ ಡಿ.19ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ತಾಲ್ಲೂಕು ಸಿರಿಗೆರೆಯ ಗುರುಶಾಂತೇಶ್ವರ ದಾಸೋಹ ಸಭಾಂಗಣದಲ್ಲಿ "ಮಕ್ಕಳೊಂದಿಗೆ ಅಹವಾಲು ಸ್ವೀಕಾರ ಕಾರ್ಯಕ್ರಮ" ಆಯೋಜಿಸಲಾಗಿದೆ.

# ರಾಜ್ಯ ಮಟ್ಟದ ಉಚಿತ ಅರ್ಚಕ ತರಬೇತಿ ಶಿಬಿರ ಆಯೋಜನೆ

**ಶಿವಮೊಗ್ಗ:** ಮಂಡ್ಯ ಜಿಲ್ಲೆ ನಾಗಮಂಗಲ ತಾಲೂಕಿನ ಶ್ರೀ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದಿಂದ ಪ್ರತಿ ವರುಷದಂತೆ ಈ ಬಾರಿಯು ಡಿಸೆಂಬರ್ 16 ರಿಂದ 26 ರವರಗೆ 18 ನೇ ರಾಜ್ಯ ಮಟ್ಟದ ಉಚಿತ ಅರ್ಚಕ ತರಬೇತಿ ಶಿಬಿರವನ್ನು ಆಯೋಜಿಸಲಾಗುತ್ತಿದೆ. ಈ ಶಿಬಿರವು ಎಲ್ಲಾ ಜಾತಿ, ಧರ್ಮ ಮತ್ತು ಲಿಂಗಗಳ ಬೇಧವಿಲ್ಲದೆ ಸಂಪೂರ್ಣ ಉಚಿತವಾಗಿ ಜನರಿಗೆ ಕ್ಷೇತ್ರದ ಬಿಜಿಎಸ್ ಸಭಾ ಮಂಟಪದಲ್ಲಿ ನಡೆಯಲಿದೆ ಎಂದು ಮಹಾಸಂಸ್ಥಾನ ಮಠದ ಪ್ರಧಾನ ಕಾರ್ಯದರ್ಶಿ ಹಾಗೂ ಶಿವಮೊಗ್ಗ ಶಾಖೆಯ ಕಾರ್ಯದರ್ಶಿಗಳು ಆದ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿ ತಿಳಿಸಿದ್ದಾರೆ. ಪರಮ ಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ಬಾಲಗಂಗಾಧರನಾಥ ಮಹಾ ಸ್ವಾಮೀಜಿಗಳವರ ಆಶಯದಂತೆ 17 ವರ್ಷಗಳಿಂದ ರಾಜ್ಯ ಮಟ್ಟದ ಅರ್ಚಕ ವೃತ್ತಿ ಶಿಕ್ಷಣ ತರಬೇತಿಯನ್ನು ಆಯೋಜಿಸಿದ್ದು,ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಕಾರ್ಯಕ್ರಮದ ಸದುಪಯೋಗವನ್ನು ಪಡೆದುಕೊಳ್ಳಬೇಕಾಗಿ ಆಶಿಸುತ್ತೇವೆ.

ಅಂದು ಶ್ರೀ ಆದಿಚುಂಚನಗಿರಿ ಪೀಠಾಧ್ಯಕ್ಷರಾದ ಪರಮ ಪೂಜ್ಯ ಜಗದ್ಗುರು ಶ್ರೀ ಶ್ರೀ ಶ್ರೀ ಡಾ. ನಿರ್ಮಲಾನಂದನಾಥ ಮಹಾಸ್ವಾಮೀಜಿಯವರ ಸಾನಿಧ್ಯದಲ್ಲಿ,ಮಠದ ಪ್ರಧಾನ ಕಾರ್ಯದರ್ಶಿ ಪೂಜ್ಯ ಶ್ರೀ ಶ್ರೀ ಪ್ರಸನ್ನನಾಥ ಸ್ವಾಮೀಜಿ ಹಾಗೂ ಶಾಖಾಮಠಗಳ ಶ್ರೀಗಳು ಪಾಲ್ಗೊಳ್ಳಲಿದ್ದಾರೆ.

ಯಾರು ಭಾಗವಹಿಸಬಹುದು:

14 ರಿಂದ 60 ವರ್ಷದೊಳಗಿನ ಯಾರಾದರೂ ಈ ಶಿಬಿರದಲ್ಲಿ ಭಾಗವಹಿಸಬಹುದು.

ಏನು ಒದಗಿಸಲಾಗುತ್ತದೆ:

ಉಚಿತ ಊಟ ಮತ್ತು ವಸತಿ,ಉಚಿತ ಸಮವಸ್ತ್ರ, ಪೂಜಾ ಪುಸ್ತಕಗಳು ಮತ್ತು ನೋಟ್‌ಬುಕ್‌ಗಳನ್ನು ವಿತರಿಸಲಾಗುವುದು. ಏನು ತರಬೇಕು:

ತಟ್ಟೆ, ಲೋಟ, ಚಾಪೆ, ದಿಂಬು ಮತ್ತು ಹೊದಿಕೆ, ಉಡುಪು, ದಿನ ನಿತ್ಯ ಬಳಕೆ ವಸ್ತುಗಳು ಮತ್ತು ಲಘು ಹೊದಿಕೆಯನ್ನು ತರಬೇಕು.

### ಶಿಬಿರದಲ್ಲಿ ಏನು ಕಲಿಸಲಾಗುತ್ತದೆ:

ಪೂಜಾ ವಿಧಾನಗಳು,ಸಂಕಲ್ಪ ಹೇಗೆ ಮಾಡುವುದು,ವೇದ ಮಂತ್ರಗಳನ್ನು ಹೇಗೆ ಪಠಿಸುವುದು,ಗಾಯತ್ರಿ ಮಂತ್ರ, ಧ್ಯಾನ ಶ್ಲೋಕಗಳು, ಪಂಚಾಂಗ (ಹಿಂದೂ ಕ್ಯಾಲೆಂಡರ್) ಅಧ್ಯಯನ, ನುರಿತ ಅಧ್ಯಾಪಕರಿಂದ ಭೋಧನೆ ಮತ್ತು ಉತ್ತಮ ವಾಗ್ಮಿಗಳಿಂದ ಉಪನ್ಯಾಸವಿರುವುದು ವಿಶೇಷ.

## ವೀರಶೈವ ಬ್ಯಾಂಕ್‌ನ ಆಡಳಿತ ಮಂಡಳಿಗೆ ಚುನಾವಣೆ



**ಚಿತ್ರದುರ್ಗ:** ನಗರದ ವೀರಶೈವ ಬ್ಯಾಂಕ್‌ನ ಆಡಳಿತ ಮಂಡಳಿಗೆ ಚುನಾವಣೆ ಘೋಷಣೆಯಾಗಿದ್ದು, ಇಂದು ಆಡಳಿತ ರೂಢ ಮಂಡಳಿಯ ನಿರ್ದೇಶಕರು ಪುನರ್ ಆಯ್ಕೆಯನ್ನು ಬಯಸಿ ಪಟೇಲ್ ಶಿವಕುಮಾರ್ ನೇತೃತ್ವದಲ್ಲಿ ಗುರುವಾರ ನಾಮಪತ್ರವನ್ನು ಸಲ್ಲಿಸಲಾಯಿತು.

ಇದಕ್ಕು ಮುನ್ನಾ ನಗರದ ನೀಲಕಂಠೇಶ್ವರ ದೇವಾಲಯದಲ್ಲಿ ಪೂಜೆಯನ್ನು ಸಲ್ಲಿಸಿ ತದ ನಂತರ ಮೆರವಣಿಗೆಯ ಮೂಲಕ ಬ್ಯಾಂಕ್‌ಗೆ ತೆರಳಿ ನಾಮಪತ್ರವನ್ನು ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಆವರ ಅಭಿಮಾನಿಗಳು ಹಿತೈಷಿಗಳು ಆಗಮಿಸಿ ಶುಭ ಕೋರಿದರು.

## ಪುಣ್ಯಾಶ್ರಮದಲ್ಲಿ ಸಂಗೀತ ಕಾರ್ಯಕ್ರಮ

**ಶಿವಮೊಗ್ಗ :–** ಸಾಗರ ರಸ್ತೆಯ ವೀರೇಶ್ವರ ಪುಣ್ಯಾಶ್ರಮ ಸಂಸ್ಕತ ಪಾಠ ಶಾಲೆಯಲ್ಲಿ ಗಾನಲಹರಿ 115ನೇ ಅಮಾವಾಸ್ಯೆಯ ಸಂಗೀತ ಸಂಜೆ ಕಾರ್ಯಕ್ರಮವನ್ನು ನ. 19ರ ನಾಳೆ ಸಂಜೆ 6.30ಕ್ಕೆ ಪುಣ್ಯಾಶ್ರಮದ ಆವರಣದಲ್ಲಿ ಆಯೋಜಿಸಲಾಗಿದೆ.

ರಾಜ್ಯ ಪ್ರಶಸ್ತಿ ಪುರಸ್ಕೃತ ಆರ್.ಬಿ. ಸಂಗಮೇಶ್ವರ ಗವಾಯಿಗಳೂ ಅಧ್ಯಕ್ಷತೆ ವಹಿಸುವರು. ಗೋಪಾಳದ ಶ್ರೀ ಶಾರದಾ ಶಂಕರ ಭಜನಾ ಮಂಡಳಿಯಿಂದ ಭಜನಾ ಸೇವೆ ಮತ್ತು ಆಶ್ರಮದ ಅಂಧ ಮಕ್ಕಳಿಂದ ಪ್ರಾರ್ಥನೆ ನಡೆಯಲಿದೆ. ಹುಬ್ಬಳ್ಳಿಯ ಹಿಂದೂಸ್ಥಾನಿ ಗಾಯಕ ನಿಜಗುಣಿ ಮಂಗಿ ಅವರಿಂದ ಸಂಗೀತ ಸೇವೆ ನಡೆಯಲಿದೆ. ರಾಜ್ಯ ಪ್ರಶಸ್ತಿ ಪುರಸ್ಕೃತ ರಾಮಣ್ಣ ಭಜಂತ್ರಿ ಶಹನಾಯ, ವೀರಭದ್ರಯ್ಯ ಶಾಸ್ತ್ರಿಗಳಿಂದ ವೇದಘೋಷ ಹಾಗೂ ಹಿರಿಯ ತಬಲ ಕಲಾವಿದರಾದ ಪಂ. ಆರ್. ತುಕಾರಾಮ್ ರಂಗಧೋಳ್ ವಿನಾಯಕ್ ಭಟ್ ಅವರ ತಬಲ ಸೇವೆ ಹಾಗೂ ಸಿದ್ದಣ್ಣ ಬಡಿಗಾರ್ ಅವರು ಆರ್ಮೋನಿಯಂ ನೊಂದಿಗೆ ಸಾಥ್ ನೀಡಲಿದ್ದಾರೆ. ಸಂಗೀತ ಶಿಕ್ಷಕಿ ನಾದಶ್ರೀ ಫಕೀರಯ್ಯ ಕಾರ್ಯಕ್ರಮ ಶಾಸ್ತ್ರಿ ಅವರು ನಿರೂಪಿಸಲಿದ್ದಾರೆ.

## ಸೈಬರ್ ಭದ್ರತಾ ಕ್ಷೇತ್ರದಲ್ಲಿನ ಸಾಧನೆ



**ಚಿಕ್ಕಮಗಳೂರು:** ಜಿಲ್ಲೆಯ ಮುದಿಗೆರೆ ತಾಲೂಕಿನವನಾದ ನಿನಾದ್ ಗೌಡ ಅವರ ಸೈಬರ್ ಭದ್ರತಾ ಕ್ಷೇತ್ರದಲ್ಲಿನ ಸಾಧನೆ ಇಂದು ಅನೇಕ ಯುವಕರಿಗೆ ಪ್ರೇರಣೆಯಾಗಿದೆ. ಹಲವು ವರ್ಷಗಳ ಕನಸು, ಕಳೆದ ಮೂರು ತಿಂಗಳುಗಳ ನಿರಂತರ ಶ್ರಮ,

ನಿದ್ದೆಯಿಲ್ಲದ ರಾತ್ರಿಗಳು ಮತ್ತು ಬೆಳಗ್ಗೆಯವರೆಗೆ ನಡೆದ ಪ್ರಯತ್ನಗಳ ಫಲವಾಗಿ ಅವರು ನಾಸಾ ಹಾಲ್ ಆಫ್ ಫೇಮ್ ಪಟ್ಟಿಗೆ ಸೇರ್ಪಡೆ ಗೊಂಡಿದ್ದಾರೆ.

ಈ ಪಯಣದಲ್ಲಿ ಅವರು ಅನೇಕ ಬಾರಿ ವಿಫಲರಾದರು. ಕೆಲವೊಮ್ಮೆ ಮನಸ್ಸು ಕುಗ್ಗಿತು, ಆತ್ಮವಿಶ್ವಾಸ ಕಳೆದುಕೊಂಡ ಸಂದರ್ಭಗಳೂ ಬಂದವು. ಆದರೂ ಅವರು ಪ್ರಯತ್ನವನ್ನು ಕೈಬಿಡಲಿಲ್ಲ.ಸವಾಲುಗಳು ಎದುರಾದಾಗ, ಕೈಬಿಡದಿರುವುದನ್ನು ಕಲಿಸಿದ ತಮ್ಮ ಆದರ್ಶ ವ್ಯಕ್ತಿಗಳಿಂದ ಪ್ರೇರಣೆ ಪಡೆದರು, ಲಿಯೋನೆಲ್ ಮೆಸ್ಸಿ ಸಾಧನೆ ಎಂದರೆ ನಿರಂತರತೆ.ಮಂಕಿ ಡಿ.ಲಫಿ ಎಷ್ಟೇ ಅಸಾಧ್ಯವಾಗಿದ್ದರೂ ನಿಮ್ಮ ಕನಸನ್ನು ಕೈಬಿಡಬೇಡಿ.

ನಾರುತೊ ಉಜುಮಾಕಿ? ಕೈಬಿಡದವರು ತಮ್ಮ ಭಾಗ್ಯವನ್ನೇ ಮರುಬರೆಯುತ್ತಾರೆ.

"ಒಂದು ಸಲ ಇನ್ನೊಂದು ಬಾರಿ ಪ್ರಯತ್ನಿಸಿದ ಸೋಲಿಗನೇ ನಿಜವಾದ ವಿಜೇತ." ನಿನಾದ್‌ಗೌಡ

ಅವರು ತಮ್ಮ ಸೈಬರ್ ಭದ್ರತಾ ಸಂಶೋಧನಾ ಕಾರ್ಯದಲ್ಲಿ ನಾಸಾದ ಒಂದು ಉಪಡೊಮೇನ್‌ನಲ್ಲಿ ಆಡಳಿತಾತ್ಮಕ ಪ್ರವೇಶಕ್ಕೆ ಸಂಬಂಧಿಸಿದ ಗಂಭೀರ ಭದ್ರತಾ ದೌರ್ಬಲ್ಯವನ್ನು ಗುರುತಿಸಿ, ಅದನ್ನು ಜವಾಬ್ದಾರಿಯುತವಾಗಿ ನಾಸಾ Vulnerability Disclosure Program ಮೂಲಕ ವರದಿ ಮಾಡಿದ್ದಾರೆ.ಈ ಮಹತ್ವದ ಕೊಡುಗೆಗೆ ಪ್ರತಿಫಲವಾಗಿ ನಾಸಾ ? ನ್ಯಾಷನಲ್ ಏರೋನಾಟಿಕ್ಸ್ ಅಂಡ್

ಸ್ಪೇಸ್ ಆಡಳಿತವು ಅವರಿಗೆ ಅಧಿಕೃತ ಲೆಟರ್ ಆಫ್ ರೆಕಗ್ನೈಸೇಸನ್ ನೀಡಿ ಗೌರವಿಸಿದ್ದು, ಅವರ ಹೆಸರನ್ನು ನಾಸಾ ಹಾಲ್ ಆಫ್ ಫೇಮ್ ಪಟ್ಟಿಯಲ್ಲಿ ಸೇರಿಸಲಾಗಿದೆ. ತಮ್ಮ ವಿದ್ಯಾಭ್ಯಾಸದ ಬಗ್ಗೆ ಮಾತನಾಡಿದ ಅವರು,ನಾನು ನನ್ನ 10ನೇ ತರಗತಿಯನ್ನು ಕೇಂದ್ರಿಯ ವಿದ್ಯಾಲಯ, ಚಿಕ್ಕಮಗಳೂರುನಲ್ಲಿ ಪೂರ್ಣಗೊಳಿಸಿದ್ದೇನೆ. ಪ್ರಸ್ತುತ ನಾನು ಉಜಿರೆಯ ಎಸ್‌ಡಿಎಂ ಪಾಲಿಟೆಕ್ನಿಕ್‌ನಲ್ಲಿ ಅಂತಿಮ ವರ್ಷದ ಕಂಪ್ಯೂಟರ್ ಸೈನ್ಸ್ ವಿದ್ಯಾರ್ಥಿಯಾಗಿ ಅಧ್ಯಯನ ನಡೆಸುತ್ತಿದ್ದೇನೆಂದು ತಿಳಿಸಿದರು.

ಇಷ್ಟಕ್ಕೆ ಅವರ ಪ್ರಯಾಣ ಅಂತ್ಯವಾಗಿಲ್ಲ. ಪ್ರಸ್ತುತ ಇನ್ನೂ ಎರಡು ಗಂಭೀರ ಭದ್ರತಾ ದೌರ್ಬಲ್ಯಗಳು ಪರಿಶೀಲನೆಯಲ್ಲಿದ್ದು, ಅವುಗಳ ಪರಿಹಾರ ಕಾರ್ಯವನ್ನು ನಾಸಾದ ಭದ್ರತಾ ತಂಡ ಕೈಗೊಂಡಿದೆ. ಮುಂದಿನ ದಿನಗಳಲ್ಲಿ ಅವುಗಳಿಗೂ ಮಾನ್ಯತೆ ದೊರಕುವ ಸಾಧ್ಯತೆ ಇದೆ.

ಯುವಕರಿಗೆ ಸಂದೇಶ ನೀಡಿರುವ ಅವರು,"ಕನಸನ್ನು ಹಿಂಬಾಲಿಸುತ್ತಿರುವ ಎಲ್ಲರೂ ಕೈಬಿಡಬೇಡಿ. ನಿಮ್ಮ ಜೀವನವನ್ನು ಬದಲಾಯಿಸುವ ಅವಕಾಶ ಇನ್ನೊಂದು ಪ್ರಯತ್ನದ ದೂರದಲ್ಲಿರಬಹುದು" ಎಂದು ಹೇಳಿದರು.

# ಧರ್ಮಸ್ಥಳ ಬುರುಡೆ ಕೇಸ್: ಮಾಸ್ಕ್ ಮ್ಯಾನ್ ಚಿನ್ನಯ್ಯ ಶಿವಮೊಗ್ಗ ಜೈಲಿನಿಂದ ರಿಲೀಸ್

**ಶಿವಮೊಗ್ಗ:** ಧರ್ಮಸ್ಥಳ ಗ್ರಾಮದಲ್ಲಿ ಈ ಹಿಂದೆ ನಡೆದಿದೆ ಎನ್ನಲಾದ ಅಪರಾಧ ಕೃತ್ಯಗಳ ಮೃತದೇಹಗಳನ್ನು ಹೂತು ಹಾಕಲಾಗಿದೆ ಎಂದು ಆರೋಪಿಸಲಾದ ಪ್ರಕರಣದ ಸಾಕ್ಷಿ ದೂರುದಾರ ಚಿನ್ನಯ್ಯ ಅವರನ್ನು ಶಿವಮೊಗ್ಗ ಜೈಲಿನಿಂದ ಗುರುವಾರ ಬೆಳಿಗ್ಗೆ ಷರತ್ತುಬದ್ಧ ಜಾಮೀನಿನ ಮೇಲೆ ಬಿಡುಗಡೆಗೊಳಿಸಲಾಯಿತು.



ಆತನಿಗೆ ಮಂಗಳೂರಿನ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ನ.24ರಂದು ಷರತ್ತುಬದ್ಧ ಜಾಮೀನು ಮಂಜೂರು ಮಾಡಿತ್ತು. ಜಾಮೀನು ಪಡೆಯಲು 1 ಲಕ್ಷ ಭದ್ರತಾ ಠೇವಣಿ ನೀಡಬೇಕು ಎಂದು ಷರತ್ತು ವಿಧಿಸಿತ್ತು.

ಆದರೆ ಭದ್ರತಾ ಠೇವಣಿ ಮೊತ್ತ ಪಾವತಿಸಲು ವಿಳಂಬವಾದ ಹಿನ್ನೆಲೆಯಲ್ಲಿ ಬಿಡುಗಡೆ ಆಗಿರಲಿಲ್ಲ. ಮಂಗಳೂರಿನಿಂದ ಬುಧವಾರ ರಾತ್ರಿ ಶಿವಮೊಗ್ಗಕ್ಕೆ ಬಂದಿದ್ದ ಚಿನ್ನಯ್ಯನ ಪತ್ನಿ ಮಲ್ಲಿಕಾ ಹಾಗೂ ಸಹೋದರಿ ಮತ್ತು ಚಿನ್ನಯ್ಯನ ಪರ ವಕೀಲರು ಇಲ್ಲಿನ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕ ಡಾ.ರಂಗನಾಥ್ ಅವರಿಗೆ ಜಾಮೀನು ಪ್ರಕ್ರಿಯೆಯ ದಾಖಲೆಗಳನ್ನು ಸಲ್ಲಿಸಿದ್ದರು. ಹೀಗಾಗಿ ಬೆಳಿಗ್ಗೆ 8.30ಕ್ಕೆ ಬಿಡುಗಡೆ ಮಾಡಲಾಯಿತು.

# ವಾರ್ತಾ ಇಲಾಖೆ ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

**ದಾವಣಗೆರೆ:** ದಾವಣಗೆರೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಹಿರಿಯ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪರಿಶಿಷ್ಟ ಜಾತಿಗೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ಮಾಧ್ಯಮ ಕ್ಷೇತ್ರದಲ್ಲಿ ಮತ್ತು ಮಾಧ್ಯಮ ಚಟುವಟಿಕೆಗಳ ಕಾರ್ಯನಿರ್ವಹಣೆ ಕುರಿತು 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದ್ದು, ಡಿಸೆಂಬರ್ 26 ಕೊನೆಯ ದಿನವಾಗಿದೆ.

ವಿಶೇಷ ಘಟಕ ಯೋಜನೆಯಡಿ 12 ತಿಂಗಳ ಅಪ್ರೆಂಟಿಸ್ ತರಬೇತಿಗಾಗಿ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ, ಕನ್ನಡ ಭಾ? ಬಳಸಲು ಪ್ರಬುದ್ಧತೆ ಇರುವ ಪರಿಶಿಷ್ಟ ಜಾತಿಗೆ ಸೇರಿದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ.

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಮೀರಿರಬಾರದು. ಅರ್ಜಿ ಲಕೋಟೆಯ ಮೇಲೆ ಕಡ್ಡಾಯವಾಗಿ ವಿಶೇಷ ಘಟಕ ಯೋಜನೆಯಡಿ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ನೀಡುವ ಅಪ್ರೆಂಟಿಸ್ ತರಬೇತಿಗಾಗಿ ಅರ್ಜಿ ಎಂದು ನಮೂದಿಸಬೇಕು. ಆಯ್ಕೆಯಾದ ಅಭ್ಯರ್ಥಿಗಳು ಸಂದರ್ಶನದ ವೇಳೆ ಮೂಲ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸುವುದು. ಆಯ್ಕೆಯಾಗಿ ತರಬೇತಿಗೆ ಹಾಜರಾಗುವ ಸಂದರ್ಭದಲ್ಲಿ ಮೂಲ ದಾಖಲಾತಿಗಳನ್ನು ಕಚೇರಿಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಸಿದ ಸಂದರ್ಭದಲ್ಲಿ ಅಭ್ಯರ್ಥಿಗಳು ಪದವಿಯ ಎಲ್ಲ ವರ್ಷಗಳ ಅಂಕಪಟ್ಟಿಗಳು, ಸ್ನಾತಕೋತ್ತರ ಪದವಿಯ ಎಲ್ಲ ಅಂಕಪಟ್ಟಿಯೊಂದಿಗೆ ಅರ್ಜಿ ಸಲ್ಲಿಸಬೇಕು. ಅಂಕಪಟ್ಟಿಯನ್ನು ನಿರೀಕ್ಷಿಸಿ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ತರಬೇತಿಯ ಅವಧಿ ವೇಳೆ ಮಾಹೆಯಾನ 15,000 ರೂಗಳ ಶಿಷ್ಯ ವೇತನ ನೀಡಲಾಗುವುದು. ತರಬೇತಿಯು 2026 ರ ಜನವರಿಯಿಂದ ಡಿಸೆಂಬರ್‌ವರೆಗೆ 12 ತಿಂಗಳ ಅವಧಿಯದಾಗಿದ್ದು, ತಾತ್ಕಾಲಿಕವಾಗಿರುತ್ತದೆ. ತರಬೇತಿ ಮುಗಿದ ನಂತರ ಮುಂದುವರೆಸಲು ಅಥವಾ ಖಾಯಂಗೊಳಿಸಲು ಯಾವುದೇ ಅವಕಾಶ ಇರುವುದಿಲ್ಲ.

ತರಬೇತಿಯ ಅವಧಿಯಲ್ಲಿ ತರಬೇತಾರ್ಥಿಗಳು ಬೇರೆ ಉದ್ಯೋಗ ಮಾಡುವಂತಿಲ್ಲ. ತರಬೇತಿಯ ಅವಧಿಯ ಮಧ್ಯದಲ್ಲಿ ಬಿಟ್ಟು ಹೋದರೆ, ಮೂಲ ದಾಖಲಾತಿಗಳನ್ನು ಅವಧಿಗೆ ಮುನ್ನ ಹಿಂದಿರುಗಿಸುವುದಿಲ್ಲ. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ ಹಾಗೂ ಸುಳ್ಳು ಮಾಹಿತಿ ನೀಡಿ ಅರ್ಜಿ ಸಲ್ಲಿಸಿದ್ದಲ್ಲಿ ಅವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು. ಆಸಕ್ತರು ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗೆ ಹಿರಿಯ ಸಹಾಯಕ ನಿರ್ದೇಶಕರ ಕಚೇರಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಾವಣಗೆರೆ ಇಲ್ಲಿ, ಮೊ.9480841218 ಗೆ ಸಂಪರ್ಕಿಸಬಹುದು ಎಂದು ಹಿರಿಯ ಸಹಾಯಕ ನಿರ್ದೇಶಕರಾದ ಧನಂಜಯ ಬಿ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲೋಕಸಭೆಯಲ್ಲಿ ವಿಬಿ–ಜಿ ರಾಮ್ ಜಿ ಮಸೂದೆ ಅಂಗೀಕಾರ ವಿಪಕ್ಷಗಳಿಂದ ಪ್ರತಿ ಹರಿದು ಹಾಕಿ ಭಾರೀ ಪ್ರತಿಭಟನೆ

**ನವದೆಹಲಿ:** ಯುಪಿಎ ಸರ್ಕಾರ 2005ರಲ್ಲಿ ಜಾರಿಗೆ ತಂದ ಮಹತ್ವಕಾಂಕ್ಷೆಯ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾಯ್ದೆ (ಎಂಜಿಎನ್‌ಆರ್‌ಇಜಿಎ) ಮತ್ತು ಅದರಡಿ ರೂಪಿಸಲಾದ ನರೇಗಾ ಯೋಜನೆಯ ಹೆಸರನ್ನು ಬದಲು ಮಾಡಿ ವಿಕಸಿತ್ ಭಾರತ್ ರೋಜ್‌ಗಾರ್ ಅಂಡ್ ಅಜೀವಿಕಾ ಮಿಷನ್ (ಗ್ರಾಮೀಣ್) ಮಸೂದೆ, 2025 ಅನ್ನು (ವಿಬಿಜಿ ರಾಮ್ ಜಿ) ಮಸೂದೆಯನ್ನು ಲೋಕಸಭೆ ಗುರುವಾರ ಅಂಗೀಕರಿಸಿತು. ಗ್ರಾಮೀಣಾಭಿವೃದ್ಧಿ ಮತ್ತು ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಡಿಸೆಂಬರ್ 16 ರಂದು ಸಂಸತ್ತಿನಲ್ಲಿ ವಿಬಿ–ಜಿ ರಾಮ್ ಜಿ ಮಸೂದೆಯನ್ನು ಮಂಡಿಸಿದರು.



ಪ್ರಸ್ತಾವಿತ ಶಾಸನವು ಗ್ರಾಮೀಣ ಪ್ರದೇಶಗಳಲ್ಲಿ ಪ್ರತಿ ವರ್ಷ 125 ದಿನಗಳ ಕೂಲಿ ಉದ್ಯೋಗದ ಶಾಸನಬದ್ಧ ಖಾತರಿಯನ್ನು ಒದಗಿಸುವ ಗುರಿಯನ್ನು ಹೊಂದಿದ್ದು, ಈ ಉಪಕ್ರಮಕ್ಕಾಗಿ ಸರ್ಕಾರ 95,000 ಕೋಟಿ ಹಂಚಿಕೆ ಮಾಡಿದೆ. ಹೊಸ ಕಾನೂನು ಗ್ರಾಮೀಣ ಪ್ರದೇಶದ ಕುಟುಂಬಗಳಿಗೆ ಒಂದು ಹಣಕಾಸು ವರ್ಷದಲ್ಲಿ ಪ್ರಸ್ತುತ ಖಾತರಿಪಡಿಸಿರುವ ವೇತನ ಸಹಿತ ಕೆಲಸ ದಿನಗಳನ್ನು 100 ರಿಂದ 125ಕ್ಕೆ ಹೆಚ್ಚಿಸಲಿದೆ ಎಂದು ಸರ್ಕಾರ ತಿಳಿಸಿದೆ.

ವಿರೋಧ ಪಕ್ಷದ ಪ್ರತಿಭಟನೆಯ ನಡುವೆಯೇ ಲೋಕಸಭೆಯು ಜಿ ರಾಮ್ ಜಿ ಮಸೂದೆಯನ್ನು ಧ್ವನಿ ಮತದ ಮೂಲಕ ಅಂಗೀಕರಿಸಿತು. ಹಲವಾರು ವಿರೋಧ ಪಕ್ಷದ ಸಂಸದರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತಾ ಸದನದ ಬಾವಿಗಿಳಿದು, ಮಸೂದೆಯ ಪ್ರತಿಗಳನ್ನು ಹರಿದು ಪೀಠದ ಕಡೆಗೆ ಎಸೆದರು. ಕಾಂಗ್ರೆಸ್ ನೇತೃತ್ವದ ವಿರೋಧ ಪಕ್ಷವು, ಎಂಜಿಎನ್‌ಆರ್‌ಇಜಿಎ ಹಿಂತೆಗೆದುಕೊಳ್ಳುವ ಮೂಲಕ ಎನ್‌ಡಿಎ ಸರ್ಕಾರವು ಮಹಾತ್ಮ ಗಾಂಧಿಯವರನ್ನು ಅವಮಾನಿಸುತ್ತಿದೆ ಮತ್ತು ಕಾಯ್ದೆಯ ನಿಬಂಧನೆಗಳನ್ನು ದುರ್ಬಲಗೊಳಿಸುತ್ತಿದೆ ಎಂದು ಕಿಡಿ ಕಾರಿದೆ.

**ವಿಬಿ–ಜಿ RAM ಜಿ ಬಿಲ್ ಎಂದರೇನು?**


ಯುಪಿಎ ಆಡಳಿತಾವಧಿಯ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಮನೇರಗಾ) ಹೆಸರಿನ ಬದಲಿಗೆ ಕೇಂದ್ರ ಸರ್ಕಾರ ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) (ವಿಬಿ–ಜಿ ರಾಮ್‌ಜಿ) ಮಸೂದೆ ಎಂದು ಹೆಸರು ಬದಲಾಯಿಸಲಾಗಿದೆ. ಹೊಸ ಮಸೂದೆಯು 125 ದಿನಗಳ ಕೂಲಿ ಉದ್ಯೋಗದ ಶಾಸನಬದ್ಧ ಖಾತರಿಯನ್ನು ಒದಗಿಸುತ್ತದೆ ಎಂದು ಸರ್ಕಾರದ ಹೇಳಿಕೆಯಲ್ಲಿ ತಿಳಿಸಲಾಗಿದೆ . ಪ್ರಸ್ತಾವಿತ ಕಾನೂನು "ಗ್ರಾಮಗಳ ಸಮಗ್ರ ಅಭಿವೃದ್ಧಿಗೆ" ಕಾರಣವಾಗುತ್ತದೆ ಮತ್ತು "ಪ್ರತಿಯೊಬ್ಬ ಬಡವರಿಗೂ ಹೇರಳವಾದ ಉದ್ಯೋಗವನ್ನು ಒದಗಿಸುತ್ತದೆ, ಅವರ ಘನತೆಯನ್ನು ಎತ್ತಿಹಿಡಿಯುತ್ತದೆ ಮತ್ತು ಅಂಗವಿಕಲರು, ವೃದ್ಧರು, ಮಹಿಳೆಯರು, ಪರಿಶಿಷ್ಟ ಜಾತಿಗಳು ಮತ್ತು ಪರಿಶಿಷ್ಟ ಪಂಗಡಗಳಿಗೆ ಹೆಚ್ಚುವರಿ ರಕ್ಷಣೆ ನೀಡುತ್ತದೆ" ಎಂದು ಶಿವರಾಜ್ ಚೌಹಾಣ್ ಹೇಳಿದ್ದಾರೆ.

# ನರೇಗಾ ಯೋಜನೆಯಿಂದ ಮಹಾತ್ಮ ಗಾಂಧಿ ಹೆಸರು ತೆಗೆದುಹಾಕುವುದು 'ಅನೈತಿಕ'

**ನವದೆಹಲಿ:** ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರವು 2005ರಲ್ಲಿ ಜಾರಿಗೆ ತಂದಿದ್ದ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ವಿಕಸಿತ್ ಭಾರತ್ ಗ್ಯಾರಂಟಿ ಫಾರ್ ರೋಜ್‌ಗಾರ್ ಅಂಡ್ ಆಜೀವಿಕಾ ಮಿಷನ್ ಎಂದು ಬದಲಿಸುವ ಬಿಜೆಪಿ ನೇತೃತ್ವದ ಕೇಂದ್ರದ ಕ್ರಮವನ್ನು ಕಾಂಗ್ರೆಸ್ ಸಂಸದ ಶಶಿ ತರೂರ್ ಮಂಗಳವಾರ ಟೀಕಿಸಿದ್ದಾರೆ.

ಇಂದು ಮಧ್ಯಾಹ್ನ ಲೋಕಸಭೆಯಲ್ಲಿ ಮಾತನಾಡಿದ ತರೂರ್, ವಿಬಿ–ಜಿ ರಾಮ್ ಎಂದು ಕರೆಯಲ್ಪಡುವ ಹೊಸ ಮಸೂದೆಯನ್ನು ವಿರೋಧಿಸಿದ್ದಾರೆ. ಈ ಮಸೂದೆಯು 25 ಹೆಚ್ಚುವರಿ ದಿನಗಳ ವೇತನದ ಕೆಲಸವನ್ನು ನೀಡುತ್ತದೆ. ಆದರೆ, ಆ ಆರ್ಥಿಕ ಹೊರೆಯ ಶೇ 40ರಷ್ಟನ್ನು ರಾಜ್ಯಗಳ ಮೇಲೆ ಹೇರುತ್ತದೆ.

ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ, ವಿಶೇಷವಾಗಿ ಆಪರೇಷನ್ ಸಿಂಧೂರ ಕಾರ್ಯಾಚರಣೆಯ ನಂತರ ಸಕಾರಾತ್ಮಕ ಹೇಳಿಕೆಗಳನ್ನು ನೀಡುತ್ತಿದ್ದ ನಂತರ ಕಾಂಗ್ರೆಸ್ ಜೊತೆಗಿನ ಶಶಿ ತರೂರ್ ಅವರ ಸಂಬಂಧ ಹದಗೆಟ್ಟಿತ್ತು. ಮಹಾತ್ಮ ಗಾಂಧಿಯವರ ಹೆಸರನ್ನು ತೆಗೆದುಹಾಕುವುದು 'ಅನೈತಿಕ' ಎಂದು ಕರೆದರು ಮತ್ತು ಅದೇ ಸಮಯದಲ್ಲಿ, ರಾಜಕೀಯ ಉದ್ದೇಶಗಳಿಗಾಗಿ ಶ್ರೀರಾಮನ ಹೆಸರನ್ನು ದುರುಪಯೋಗಪಡಿಸಿಕೊಳ್ಳಬಾರದು ಅಥವಾ ಅಗೌರವಿಸಬಾರದು' ಎಂದು ಸರ್ಕಾರವನ್ನು ಒತ್ತಾಯಿಸಿದರು.



ನಿನ್ನೆ ರಾತ್ರಿ ಟ್ವೀಟ್ ಮಾಡಿದ್ದ ಶಶಿ ತರೂರ್, 'ಗ್ರಾಮೀಣ ಭಾಗದ ಬಡವರಿಗಾಗಿ ಇರುವ ಯೋಜನೆಯಲ್ಲಿ ಮಹಾತ್ಮ ಗಾಂಧಿಯವರ ಹೆಸರನ್ನು ಬದಲಿಸುವುದು ಗಾಂಧಿಯವರ ಸ್ವ–ಆಡಳಿತ ಗ್ರಾಮಗಳ ದೃಷ್ಟಿಕೋನ ಮತ್ತು 'ರಾಮರಾಜ್ಯ' ಅಥವಾ ಆದರ್ಶಪ್ರಾಯ ಆಡಳಿತವನ್ನು ನಿರ್ಲಕ್ಷಿಸುತ್ತದೆ..." ಎಂದಿದ್ದರು.

ಸದ್ಯ ಯಾವುದೇ ವಿಭಜನೆ ಇಲ್ಲದ ವಿಭಾಗವೊಂದನ್ನು ಸೃಷ್ಟಿಸುವ ಮೂಲಕ ಗಾಂಧಿ ಅವರ ಪರಂಪರೆಗೆ ನಾವು ಅಗೌರವ ತೋರಬಾರದು' ಎಂದು ಶಶಿ ತರೂರ್ ಹೇಳಿದ್ದರು.ಸರ್ಕಾರದ ಈ ಕ್ರಮವನ್ನು ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ಕೂಡ ವಿರೋಧಿಸಿದರು ಮತ್ತು ಈ ಮಸೂದೆಯನ್ನು ಹಿಂಪಡೆಯಬೇಕೆಂದು ಒತ್ತಾಯಿಸಿದ ಅವರು, ಪ್ರತಿಯೊಂದು ಯೋಜನೆಯ ಹೆಸರನ್ನು ಬದಲಾಯಿಸುವ 'ಹುಚ್ಚನ್ನು' ಪ್ರಶ್ನಿಸಿದರು ಮತ್ತು ಪ್ರತಿ ಬಾರಿಯೂ ಉಂಟಾಗುವ ಹಣದ ವೆಚ್ಚವನ್ನು ಎತ್ತಿ ತೋರಿಸಿದರು.

## ಕಾಂಗ್ರೆಸ್ ಪರ ಶಶಿ ತರೂರ್ ಬ್ಯಾಟಿಂಗ್

ಯಾವುದೇ ಮಸೂದೆಯನ್ನು ತರಾತುರಿಯಲ್ಲಿ ಅಂಗೀಕರಿಸಬಾರದು... ಈ ಮಸೂದೆಯನ್ನು ಹಿಂಪಡೆಯಬೇಕು. ಗ್ರಾಮೀಣ ಭಾಗದ ಆರ್ಥಿಕತೆಯನ್ನು ಬಲಪಡಿಸಲು ಒಉಓಖಇಉಂ ಯೋಜನೆಯು 20 ವರ್ಷಗಳಿಂದ ಯಶಸ್ವಿಯಾಗಿ ನಡೆಯುತ್ತಿದೆ. ಈ ಮಸೂದೆಯನ್ನು ಸ್ಥಾಯಿ ಸಮಿತಿಗೆ ಕಳುಹಿಸಬೇಕು' ಎಂದು ಒತ್ತಾಯಿಸಿದರು.

# 'ದ್ವೇಷ ಭಾಷಣ ಕಾಯ್ದೆಗೆ ಬಿಜೆಪಿ ಮತ್ತು ಅದರ ಅಂಗಸಂಸ್ಥೆಗಳು ಏಕೆ ಭಯಭೀತರಾಗುತ್ತಿವೆ?'



**ಬೆಳಗಾವಿ:** ರಾಜ್ಯ ವಿಧಾನಸಭೆಯಲ್ಲಿ ದ್ವೇಷ ಭಾಷಣ ಮಸೂದೆಯನ್ನು ಮಂಡಿಸುವುದಕ್ಕೆ ಭಾರತೀಯ ಜನತಾ ಪಕ್ಷ (ಃಎಕ) ವಿರೋಧ ಮಾಡುತ್ತಿರುವುದು ಏಕೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಮಂಗಳವಾರ ಪ್ರಶ್ನಿಸಿದ್ದಾರೆ.

ಸುದ್ದಿಸಂಸ್ಥೆ ಎಎನ್‌ಐ ಜೊತೆಗೆ ಮಾತನಾಡಿದ ಅವರು, 'ದ್ವೇಷ ಭಾಷಣ ಮಸೂದೆ ಕುರಿತು ವಿಧಾನಸಭೆಯಲ್ಲಿ ಚರ್ಚಿಸಲಾಗುವುದು. ಬಿಜೆಪಿ ಮತ್ತು ಅದರ ಅಂಗಸಂಸ್ಥೆಗಳು ಏಕೆ ಭಯಭೀತರಾಗುತ್ತಿವೆ? ಅದಕ್ಕೂ ಅವರಿಗೂ ಯಾವುದೇ ಸಂಬಂಧವಿಲ್ಲ' ಎಂದು ತಿಳಿಸಿದರು.

ಪ್ರಸ್ತಾವಿತ ಕಾನೂನು ಅಸ್ತಿತ್ವದಲ್ಲಿರುವ ಕಾನೂನು ಚೌಕಟ್ಟುಗಳಿಗೆ ಅನುಗುಣವಾಗಿದೆ. ಎಲ್ಲದಕ್ಕೂ ಒಂದು ಕಾನೂನು ಇದೆ. ಆದ್ದ–ರಿಂದ ದ್ವೇಷ ಭಾಷಣಕ್ಕೂ ಕಾನೂನು ಜಾರಿಯಾಗುತ್ತಿದೆ. ಅದರಲ್ಲಿ ತಪ್ಪೇನು?' ಎಂದು ಸಚಿವ ಸಂತೋಷ್ ಲಾಡ್ ಪ್ರಶ್ನಿಸಿದರು.

ಇದೇ ರೀತಿಯ ಅಭಿಪ್ರಾಯಗಳನ್ನು ಪ್ರತಿಧ್ವನಿಸುತ್ತಾ ಸಚಿವ ಮಧು ಬಂಗಾರಪ್ಪ, 'ಸಾಮಾಜಿಕ ಮಾಧ್ಯಮವನ್ನು ಸರಿಯಾಗಿ ಬಳಸಬೇಕು. ಸಾಮಾಜಿಕ ಮಾಧ್ಯಮದಲ್ಲಿ ತಪ್ಪು ಮಾಹಿತಿಯನ್ನು ಹರಡುವುದು ಶಿಕ್ಷಾರ್ಹವಾಗಿರಬೇಕು" ಎಂದು ಅವರು ಹೇಳಿದರು.

ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ಮಸೂದೆ – 2025'ಕ್ಕೆ ಡಿಸೆಂಬರ್ 4 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಈ ಮಸೂದೆಯನ್ನು ವಿಧಾನಸಭೆಯಲ್ಲಿ ಮಂಡಿಸಲಾಗಿದ್ದು, ವಿರೋಧ ಪಕ್ಷಗಳು ಇದನ್ನು ವಿರೋಧಿಸಿವೆ.

ಧರ್ಮ, ಜನಾಂಗ, ಭಾಷೆ, ಜನ್ಮಸ್ಥಳ, ಜಾತಿ, ಲಿಂಗದ ಆಧಾರದಲ್ಲಿ ದ್ವೇಷದ ಭಾಷಣ ಮಾಡುವವರನ್ನು ನಿರ್ಬಂಧಿಸಲು ಮುಂದಾಗಿರುವ ರಾಜ್ಯ ಸರ್ಕಾರವು, ಕಾಯ್ದೆಯನ್ನು ಜಾರಿಗೆ ತರಲಿದೆ. ಹೀಗಾಗಿ, ದ್ವೇಷ ಭಾಷಣವನ್ನು ನಿಗ್ರಹಿಸಲು ರಾಜ್ಯ ಸರ್ಕಾರ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳು (ಪ್ರತಿಬಂಧಕ) ಮಸೂದೆಯನ್ನು ಅಧಿವೇಶನದಲ್ಲಿ ಮಂಡಿಸಲಾಗಿದೆ. ಕಳೆದ ಕೆಲವು ದಿನಗಳಿಂದ ರಾಜಕೀಯ ವಲಯದಲ್ಲಿ ಬಿಸಿ ಚರ್ಚೆಯಾಗುತ್ತಿರುವ ಮಸೂದೆ ಇದು.

ಈ ಕಾಯ್ದೆಯ ಅನ್ವಯ ದ್ವೇಷಾಪರಾಧ ಎಸಗಿದವರಿಗೆ ಒಂದು ವರ್ಷದಿಂದ ಏಳು ವರ್ಷದವರೆಗೆ ಜೈಲು ಶಿಕ್ಷೆ ವಿಧಿಸಲಾಗುತ್ತದೆ. ಇದೇ ಮುಂದುವರಿದರೆ, 2 ವರ್ಷದಿಂದ 10 ವರ್ಷದವರೆಗೆ ಜೈಲು ಶಿಕ್ಷೆ ನೀಡಲಾಗುತ್ತದೆ

# ಖಾಸಗಿ ಶಾಲೆಗಳಲ್ಲಿ ಕನ್ನಡ ಕಡ್ಡಾಯ, ನಿಯಮ ಮೀರಿದ್ರೆ ಕಠಿಣ ಕ್ರಮ: ಸಚಿವ ಮಧು ಬಂಗಾರಪ್ಪ

**ಬೆಂಗಳೂರು:** ರಾಜ್ಯದ ಎಲ್ಲ ಖಾಸಗಿ ಶಾಲೆಗಳಲ್ಲಿ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಕಲಿಸಬೇಕು. ನಿಯಮ ಮೀರುವ ಶಾಲೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಮಂಗಳವಾರ ಎಚ್ಚರಿಕೆ ನೀಡಿದ್ದಾರೆ.



ವಿಧಾನ ಪರಿಷತ್ ಪ್ರಶ್ನೋತ್ತರ ಕಲಾಪದಲ್ಲಿ ಬಿಜೆಪಿ ಸದಸ್ಯ ರವಿಕುಮಾರ್, 'ರಾಜ್ಯದಲ್ಲಿ ಖಅಖಇ, ಅಃಖಇ, ಖಃ, ಖಉಅಖ ಸೇರಿ ಅಂತರಾಷ್ಟ್ರೀಯ ಶಾಲೆಗಳಲ್ಲಿ ಕಡ್ಡಾಯ ಭಾಷೆ ಕಲಿಕೆ ನಿಯಮ ಜಾರಿ ಮಾಡಿಲ್ಲ. ನಿಯಮಗಳು ಅನೇಕ ಶಾಲೆಗಳು ಜಾರಿ ಮಾಡಿಲ್ಲ. ಸರ್ಕಾರದ ನಿಯಮ ಖಾಸಗಿ ಶಾಲೆಗಳು ಉಲ್ಲಂಘನೆ ಮಾಡಲಾಗಿದೆ.

ಶಿಕ್ಷಣ ಇಲಾಖೆ ಕೇವಲ ನೋಟೀಸ್ ಕೊಡಲಾಗಿದೆ. ಇಂತಹ ಶಾಲೆಗಳ ಮೇಲೆ ಕಠಿಣ ಕ್ರಮ ತೆಗೆದುಕೊಳ್ಳಬೇಕು ಎಂದು ಆಗ್ರಹಿಸಿದರು. ಖಖಇ ಅಡಿ ಎರಡು ವರ್ಷಗಳಲ್ಲಿ ದಾಖಲಾತಿ ಕಡಿಮೆ ಆಗಿದೆ. ಖಾಸಗಿ ಶಾಲೆಗಳಲ್ಲಿ 25% ಸೀಟು ಕೊಡಬೇಕು. ಈ ಶಾಲೆಗೆ ಸರ್ಕಾರವೇ ಹಣ ಕೊಡಲಿದೆ. ಕಳೆದ 2 ವರ್ಷಗಳಲ್ಲಿ ದಾಖಲಾತಿ ಯಾಕೆ ಕಡಿಮೆ ಆಯ್ತು ಎಂದು ಅವರು ಪ್ರಶ್ನೆ ಮಾಡಿದರು.

ಇದಕ್ಕೆ ಉತ್ತರಿಸಿದ ಸಚಿವ ಮಧು ಬಂಗಾರಪ್ಪ, 'ಯಾವುದೇ ಶಾಲೆ ಆದರೂ ಕನ್ನಡ ಕಲಿಸಬೇಕು ಅಂತ ಮುಚ್ಚಳಿಕೆ ಬರೆಸಿಕೊಳ್ಳುತ್ತೇವೆ. ಕನ್ನಡ ಭಾಷೆ ಕಡ್ಡಾಯವಾಗಿ ಕಲಿಸಬೇಕು. ಕನ್ನಡ ಕಲಿಸದೇ ಹೋದ್ರೆ ಅಂತಹ ಶಾಲೆ ಮೇಲೆ ಕಠಿಣ ಕ್ರಮ ಕೈಗೊಳ್ಳುತ್ತೇವೆ.

ಸೋಫಿಯಾ ಶಾಲೆಯ ಮೇಲೆ ಆರೋಪ ಬಂದಾಗ ತನಿಖೆ ಮಾಡಿಸಿದ್ದೆವು. ನಮ್ಮ ಗಮನಕ್ಕೆ ಇಂತಹ ಲೋಪ ಕಂಡು ಬಂದರೆ ಅವರ ಮೇಲೆ ಕ್ರಮ ತೆಗೆದುಕೊಳ್ಳುತ್ತೇವೆ. ಯಾವುದೇ ಶಾಲೆ ಮೇಲೆ ದೂರು ಬಂದರೆ ತನಿಖೆ ಮಾಡಿ ಕ್ರಮ ತೆಗೆದುಕೊಳ್ಳುತ್ತೇವೆ. ಕನ್ನಡ ಕಲಿಕೆ ಆಗುತ್ತಿದೆಯಾ ಇಲ್ಲವಾ ಎಂದು ಮತ್ತೆ ಪರಿಶೀಲನೆ ಮಾಡುತ್ತೇವೆ ಎಂದು ತಿಳಿಸಿದರು.

ಅಂತೆಯೇ ಖಖಇ ನಿಯಮದ ಅನ್ವಯ ದಾಖಲಾತಿ ಮಾಡುತ್ತಿದ್ದೇವೆ. ಸರ್ಕಾರಿ ಶಾಲೆ ಇಲ್ಲದೆ ಹೋದ್ರೆ ಮಾತ್ರ ಖಾಸಗಿ ಶಾಲೆಗೆ ಸೇರಿಸಬೇಕು. ನಮ್ಮ ಸರ್ಕಾರಿ ಶಾಲೆಗಳಲ್ಲಿ ಉತ್ತಮ ಶಿಕ್ಷಣ ಕೊಡುತ್ತಿದ್ದೇವೆ. ಎಲ್‌ಕೆಜಿ–ಯುಕೆಜಿ ಸರ್ಕಾರಿ ಶಾಲೆಗಳಲ್ಲಿ ಬರ್ತಿದೆ.

ಸರ್ಕಾರ ಕೆಪಿಎಸ್ ಶಾಲೆಗಳನ್ನ ಮಾಡುತ್ತಿದ್ದೇವೆ. ನಮ್ಮಲ್ಲಿ ಉತ್ತಮ ವ್ಯವಸ್ಥೆ ಇದೆ. ಹೀಗಾಗಿ ಎಲ್ಲರಿಗೂ ನಮ್ಮ ಸರ್ಕಾರಿ ಶಾಲೆಗಳಿಗೆ ದಾಖಲಾತಿಗೆ ಸಹಕಾರ ಕೊಡಿ. ಖಖಇ ಹಣ ಬಿಡುಗಡೆ ಆಗದೇ ಇದ್ದರೆ ಅದು ಖಖ ಸಮಸ್ಯೆ ಇರುತ್ತದೆ. ಅದನ್ನ ಶೀಘ್ರವೇ ಬಿಡುಗಡೆ ಮಾಡುತ್ತೇವೆ ಎಂದರು.

# ಮಹಾಭಿಯೋಗ ಸಮಿತಿಯ ವಿರುದ್ಧ ಸುಪ್ರೀಂ ಕದ ತಟ್ಟಿದ ನ್ಯಾ. ಯಶವಂತ ವರ್ಮ

**ನವದೆಹಲಿ:** ಅಲಹಾಬಾದ್ ಹೈಕೋರ್ಟ್ ನ್ಯಾಯಮೂರ್ತಿ ಯಶವಂತ್ ವರ್ಮಾ ಅವರ ಮನೆಯಲ್ಲಿ ಸಿಕ್ಕಿದ್ದ ಅಕ್ರಮ ಹಣ ಪ್ರಕರಣದ ತನಿಖೆ ನಡೆಯುತ್ತಿದೆ. ಇದೀಗ ಯಶವಂತ್ ಅವರು ತಮ್ಮ ವಿರುದ್ಧದ ಮಹಾಭಿಯೋಗಕ್ಕಾಗಿ ನ್ಯಾಯಾಧೀಶರ (ವಿಚಾರಣಾ) ಕಾಯ್ದೆಯಡಿ ಮೂವರು ಸದಸ್ಯರ ಸಮಿತಿಯನ್ನು ರಚಿಸುವ ಲೋಕಸಭಾ ಸ್ಪೀಕರ್ ಅವರ ನಿರ್ಧಾರವನ್ನು ರದ್ದುಗೊಳಿಸುವಂತೆ ಕೋರಿ ಸುಪ್ರೀಂ ಅರ್ಜಿ ಸಲ್ಲಿಸಿದ್ದಾರೆ. ನ್ಯಾಯಮೂರ್ತಿ ದೀಪಂಕರ್ ದತ್ತ ಮತ್ತು ನ್ಯಾಯಮೂರ್ತಿ ಎ.ಜಿ. ಮಸಿಹ್ ಅವರ ಪೀಠವು ಇಂದು ಸ್ಪೀಕರ್ ಹಾಗೂ ಸಂಸತ್ತಿನ ಮೇಲ್ಮನೆ (ರಾಜ್ಯಸಭೆ) ಮತ್ತು ಕೆಳಮನೆ (ಲೋಕಸಭೆ) ಸಚಿವಾಲಯಗಳಿಗೆ ನೋಟಿಸ್ ಜಾರಿ ಮಾಡಿದೆ.



ಲೋಕಸಭೆ ಮತ್ತು ರಾಜ್ಯಸಭೆ ಎರಡರಲ್ಲೂ ತಮ್ಮ ದೋಷಾರೋಪಣೆಗೆ ನೋಟಿಸ್‌ಗಳನ್ನು ನೀಡಲಾಗಿದ್ದರೂ, ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಅವರು ರಾಜ್ಯಸಭೆಯ ಅಧ್ಯಕ್ಷರ ಪ್ರಸ್ತಾವನೆಯನ್ನು ಅಂಗೀಕರಿಸುವವರೆಗೆ ಮತ್ತು ಆ ಶಾಸನದಲ್ಲಿ ಉದ್ದೇಶಿಸಿರುವಂತೆ ಅಧ್ಯಕ್ಷರೊಂದಿಗೆ ಜಂಟಿ ಸಮಾಲೋಚನೆಗಾಗಿ ಕಾಯದೆ ಏಕಪಕ್ಷೀಯವಾಗಿ ಸಮಿತಿಯನ್ನು ರಚಿಸಿದ್ದಾರೆ .

# ಶಕ್ತಿ ಯೋಜನೆಗೆ ಹಣಕಾಸಿನ ಸಮಸ್ಯೆ ಇಲ್ಲ : ಸಚಿವ ರಾಮಲಿಂಗಾರೆಡ್ಡಿ

**ಬೆಳಗಾವಿ,ಡಿ.18–** ಮಹಿಳೆಯರಿಗೆ ಸರ್ಕಾರಿ ಬಸ್ಸುಗಳಲ್ಲಿ ರಾಜ್ಯಾದ್ಯಂತ ಉಚಿತವಾಗಿ ಪ್ರಯಾಣಿಸಲು ಯಾವುದೇ ಹಣಕಾಸಿನ ಸಮಸ್ಯೆ ಎದುರಾಗಿಲ್ಲ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ವಿಧಾನಪರಿಷತ್‌ನಲ್ಲಿ ಸ್ಪಷ್ಟಪಡಿಸಿದರು.

ಶೂನ್ಯವೇಳೆಯಲ್ಲಿ ಬಿಜೆಪಿಯ ಭಾರತಿ ಶೆಟ್ಟಿ ಅವರು ಪ್ರಸ್ತಾಪಿಸಿದ ವಿಷಯಕ್ಕೆ ಉತ್ತರಿಸಿದ ಸಚಿವರು, ಶಕ್ತಿ ಯೋಜನೆಯಲ್ಲಿ 625 ಕೋಟಿ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದಾರೆ. ಇದರಿಂದ ಮಹಿಳಾ ಉದ್ಯೋಗಿಗಳ ಸಂಖ್ಯೆ ಹೆಚ್ಚಾಗಿದೆ. ಶಕ್ತಿ ಯೋಜನೆಯ ಬಾಕಿ ಹಣ ಸರಕಾರದಿಂದ ಬರಬೇಕು. ಮುಂದಿನ ಬಜೆಟ್‌ನಲ್ಲಿ ಸಿಎಂ ಕೊಡುತ್ತಾರೆ. ಇಲಾಖೆಯಲ್ಲಿ ಯಾವ ಸಮಸ್ಯೆಯೂ ಇಲ್ಲ ಎಂದು ಹೇಳಿದರು.

ಇದಕ್ಕೂ ಮುನ್ನ ಬಿಜೆಪಿಯ ಭಾರತಿ ಶೆಟ್ಟಿ ಅವರು, ಶಿರಸಿ–ಹುಬ್ಬಳ್ಳಿ ನಡುವೆ ಮೂರು ಗಂಟೆ ಬಸ್ ಸಂಚರಿಸುತ್ತದೆ. ಇಷ್ಟು ತಡವಾಗಿ ಬರಬೇಕಾದರೆ ಬಸ್ಸುಗಳಿಗೆ ಸರ್ಕಾರ ಹಣ ನೀಡುತ್ತಿಲ್ಲವೇ ಎಂದು ಪ್ರಶ್ನೆ ಮಾಡಿದರು.

ಇದಕ್ಕೆ ಉತ್ತರಿಸಿದ ಸಚಿವರು, ನಾವು ಅಧಿಕಾರಕ್ಕೆ ಬರುವುದಕ್ಕೆ ಮುಂಚೆಯೇ ನಾಲ್ಕು ಸಾವಿರ ಕೋಟಿ ಸಾಲ ಇತ್ತು. ಸಾರಿಗೆ ಇಲಾಖೆಯಲ್ಲಿ 4 ಸಾವಿರ ಕೋಟಿ ಸಾಲ ಇತ್ತು. ವೇತನ ಬಾಕಿಯನ್ನು ಉಳಿಸಿ ಹೋಗಿದ್ದರು. ಸದ್ಯ ಬಸ್ ಗಳು 1,84 ಲಕ್ಷ ಟ್ರಿಪ್ ಓಡುತ್ತಿವೆ. ಒಂದು ಟ್ರಿಪ್ ಹೀಗೆ ವ್ಯತ್ಯಾಸ ಆಗಿರಬಹುದು. ನಾವು 9000 ಹುದ್ದೆ ನೇಮಿಕಾತಿ ಮಾಡಿದ್ದೇವೆ. 2000 ಕೋಟಿ ರೂ. ಸರಕಾರ ಸಾಲವಾಗಿ ಕೊಟ್ಟಿದೆ. ಸಾಲವನ್ನು ಸರಕಾರವೇ ತೀರಿಸಲಿದೆ ಎಂದು ರಾಮಲಿಂಗಾರೆಡ್ಡಿ ತಿಳಿಸಿದರು.

# ಸಿಪಿಐ ಶತಮಾನೋತ್ಸವ ಸಂಭ್ರಮದ ಜೊತೆಗೆ ಸವಾಲಿದೆ : ಸಾತಿಸುಂದ್ರೇಶ್

**ಚಿಕ್ಕಮಗಳೂರು:** ಭಾರತ ಕಮ್ಯುನಿಷ್ಟ್ ಪಕ್ಷದ ಶತಮಾನೋತ್ಸವ ಸಂದರ್ಭದಲ್ಲಿ ಸಂಭ್ರಮದ ಜೊತೆಗೆ ಸವಾಲಿದೆ ಎಂದು ಪಕ್ಷದ ರಾಜ್ಯ ಕಾರ್ಯದರ್ಶಿ ಸಾತಿ ಸಂದ್ರೇಶ್ ತಿಳಿಸಿದರು.

ಅವರು ಇಂದು ನಗರದ ಅಜಾದ್ ಪಾರ್ಕ್‌ನಲ್ಲಿ ಸಿಪಿಐ ಜಿಲ್ಲಾ ಮಂಡಳಿ ಏರ್ಪಡಿಸಿದ್ದ ಸಮತಾ ರಾಜ್ಯದ ಕನಸುಗಳೊಂದಿಗೆ ಶ್ರಮಶಕ್ತಿಯ ಸಂಘರ್ಷದ ಶತಮಾನದ ಪಯಣ ಶತಮಾನೋತ್ಸವದ ಜಾಥಾ ಹಾಗೂ ಬಹಿರಂಗ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಬಿಜೆಪಿಯ ಸರ್ವಾಧಿಕಾರಿ ಧೋರಣೆಯನ್ನು ಎದುರಿಸಲು ಸಮಾನ ಮನಸ್ಕ ನಾಯಕರು ಕೈಜೋಡಿಸಬೇಕೆಂದು ಮನವಿ ಮಾಡಿದ ಅವರು, ದೇಶದಲ್ಲಿ ಕೋಮುವಾದಿ ಫ್ಯಾಸಿಸ್ಟ್ ನೀತಿಯಿಂದ ಬಂಡವಾಳ ಶಾಹಿಗಳಿಗೆ ಹಾಗೂ ಕಾರ್ಪೋರೇಟ್ ಸಂಸ್ಥೆಗಳಿಗೆ ಮಾರಾಟ ಮಾಡುತ್ತಿದ್ದಾರೆ. ಇದರಿಂದಾಗಿ ದಲಿತರು, ಆದಿವಾಸಿಗಳು, ರೈತರು, ಯುವಜನರು, ಮಹಿಳೆಯರು ಸ್ವಾತಂತ್ರ್ಯ ಕಳೆದುಕೊಳ್ಳುತ್ತಿದ್ದಾರೆಂದು ಹೇಳಿದರು.

ಈ ನಿಟ್ಟಿನಲ್ಲಿ ಸಿಪಿಐ ಪಕ್ಷ ಮತ್ತೊಮ್ಮೆ ಸ್ವಾತಂತ್ರ್ಯ ಸಂಗ್ರಾಮ ಮಾಡುವ ಸಲುವಾಗಿ ದೇಶಪ್ರೇಮಿಗಳು, ಜಾತ್ಯಾತೀತ ಪ್ರಗತಿಪರ ಸಂಘಟನೆಗಳು, ವಿವಿಧ ಪಕ್ಷಗಳು, ಪ್ರಸ್ತುತ ಇರುವ ಸವಾಲುಗಳನ್ನು ಎದುರಿಸಲು ಒಗ್ಗೂಡಬೇಕಾದ ಅನಿವಾರ್ಯತೆ ಇದೆ ಎಂದು ಮನವಿ ಮಾಡಿದರು.






ಸಮಾಜದಲ್ಲಿ ಬಿಡಿ ಬಿಡಿ ಹೋರಾಟದಿಂದ ಶತ್ರುವಿನ ಗೆಲುವು ಸುಗಮವಾಗುತ್ತಿದೆ ಎಂಬುದನ್ನು ಮನಗಾಣಬೇಕಿದೆ. ಪರೋಕ್ಷವಾಗಿ ಬ್ರಿಟೀಷ್ ನೀತಿಯಿಂದ ಈ ದೇಶದ ಸಂಪತ್ತನ್ನು ಲೂಟಿ ಹೊಡೆಯಲಾಗುತ್ತಿದೆ ಎಂದು ಆರೋಪಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಿಪಿಐ ಜಿಲ್ಲಾ ಕಾರ್ಯದರ್ಶಿ ಜಿ.ರಘು ವಹಿಸಿದ್ದರು. ಮುಖಂಡ ವಿಜಯ್‌ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆಯಲ್ಲಿ ಮಾಜಿ ಜಿಲ್ಲಾ ಕಾರ್ಯದರ್ಶಿ ಹೆಚ್.ಎಂ.ರೇಣುಕಾರಾಧ್ಯ, ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರಾದ ರವೀಶ್ ಬಸಪ್ಪ, ಮಹೇಶ್, ಅಣ್ಣಯ್ಯ, ರಾಧಾ ಸುಂದ್ರೇಶ್ ಮತ್ತಿತರರು ಉಪಸ್ಥಿತರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**